ಕನ್ನಡ ದಿನಪತ್ರಿಕೆ
07 ಮೇ । ಮಂಗಳವಾರ
07 MAY 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 68 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಮತದಾನ: ಭದ್ರತೆಗಾಗಿ 40 ಸಾವಿರಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ನಿಯೋಜನೆ



ಬೆಂಗಳೂರು: ರಾಜ್ಯದಲ್ಲಿ ಎರಡನೇ ಹಂತದ ಮತದಾನ ಮುಕ್ತ ಹಾಗೂ ಶಾಂತಿಯುತವಾಗಿ ನಡೆಯಲು ಅಧಿಕಾರಿಗಳು ಸೇರಿದಂತೆ 40 ಸಾವಿರಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ ಎಂದು ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರಾದ ಹಿತೇಂದ್ರ ಅವರು ತಿಳಿಸಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸ್ಥಳೀಯ ಪೊಲೀಸರ ಜೊತೆಗೆ 70 ಕಂಪನಿ ಕೇಂದ್ರ ಪಡೆಗಳು, 150 ಪ್ಲಟೂನ್ ಕೆಎಸ್‌ಆರ್‌ಪಿ, ಡಿಎಆರ್ ಪ್ಲಟೂನ್‌ಗಳನ್ನು ನಿಯೋಜಿಸಲಾಗಿದೆ ಎಂದರು.

ಬೆಂಗಳೂರು, ಮೈಸೂರು ಸೇರಿದಂತೆ ಇತರೆ ಜಿಲ್ಲೆಗಳಿಂದಲೂ ಸಹ 2ನೇ ಹಂತದ ಮತದಾನಕ್ಕೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ.

ಮತದಾನ ಸಂದರ್ಭದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ ಎಂದರು. ಒಂದು ರಾಜ್ಯದ 14 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದ್ದು, ಹಿರಿಯ ಅಧಿಕಾರಿಗಳು ಗಸ್ತಿನಲ್ಲಿರುತ್ತಾರೆ ಎಂದು ಹಿತೇಂದ್ರ ಅವರು ತಿಳಿಸಿದರು.

# ರಾಜ್ಯದ 14 ಲೋಕಸಭಾ ಕ್ಷೇತ್ರಗಳಿಗೆ ಇಂದು ಮತದಾನ

## 2.59 ಕೋಟಿ ಮತದಾರರಿಂದ 227 ಅಭ್ಯರ್ಥಿಗಳ ಭವಿಷ್ಯ ನಿರ್ಧಾರ

ಬೆಂಗಳೂರು: ರಾಜ್ಯದ ಲೋಕಸಭಾ ಚುನಾವಣೆಯ 2ನೇ ಹಂತದ 14 ಕ್ಷೇತ್ರಗಳಲ್ಲಿ ನಡೆದ ಅಬ್ಬರ ಬಹಿರಂಗ ಪ್ರಚಾರಕ್ಕೆ ಭಾನುವಾರ ಸಂಜೆ ತೆರೆಬಿದ್ದಿದ್ದು, ಸೋಮವಾರ ಅಭ್ಯರ್ಥಿಗಳು ಮನೆ–ಮನೆ ಪ್ರಚಾರ ನಡೆಸಿ ಮತಯಾಚನೆ ಮಾಡಲಿದ್ದಾರೆ.

ಮಂಗಳವಾರ ಬೆಳಿಗ್ಗೆ 7 ಗಂಟೆಯಿಂದ 14 ಕ್ಷೇತ್ರಗಳ ಮತದಾನ ಆರಂಭವಾಗುವ ಹಿನ್ನೆಲೆಯಲ್ಲಿ ಭಾನುವಾರ ಸಂಜೆ 6 ಗಂಟೆಯಿಂದ ಬಹಿರಂಗ ಪ್ರಚಾರ ಅಂತ್ಯಗೊಂಡಿದೆ. ಸೋಮವಾರ ಇಡೀ ದಿನ ಅಭ್ಯರ್ಥಿಗಳು ಮತ್ತು ಬೆಂಬಲಿಗರು ಮನೆ ಮನೆ ಪ್ರಚಾರ ನಡೆಸಲಿದ್ದಾರೆ.

ರಾಜ್ಯದಲ್ಲಿ ಗಮನ ಸೆಳೆದಿರುವ ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ಬಿಜಾಪುರ(ಎಸ್ಸಿ ಮೀಸಲು), ಕಲಬುರಗಿ(–ಎಸ್ಸಿ), ರಾಯಚೂರು(ಎಸ್ಟಿ ಮೀಸಲು), ಬೀದರ್, ಕೊಪ್ಪಳ, ಬಳ್ಳಾರಿ(ಎಸ್ಟಿ), ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ, ಶಿವಮೊಗ್ಗ ಲೋಕಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ.

ಶೋರಾಪುರ ವಿಧಾನಸಭಾ ಕ್ಷೇತ್ರಕ್ಕೂ ಇಂದು ಚುನಾವಣೆ ನಡೆಯಲಿದ್ದು, ಬಿಜೆಪಿ ಮತ್ತು ಕಾಂಗ್ರೆಸ್‌ನಿಂದ ತಲಾ ಒಬ್ಬರು, ನಾಲ್ವರು ಸ್ವತಂತ್ರರು ಕಣಕ್ಕಿಳಿದಿದ್ದಾರೆ. ಒಟ್ಟಾರೆ ಸ್ಪರ್ಧಾಕಣದಲ್ಲಿ 206 ಪುರುಷರು ಹಾಗೂ



21 ಮಹಿಳೆಯರು ಸೇರಿದಂತೆ ಒಟ್ಟು 227 ಮಂದಿ ಇದ್ದಾರೆ.

ಈ ಕ್ಷೇತ್ರಗಳಲ್ಲಿ ಒಟ್ಟು 2,59,52,958 ಮತದಾರರು ಮತ ಚಲಾಯಿಸುವ ಹಕ್ಕು ಪಡೆದಿದ್ದಾರೆ. ಇದರಲ್ಲಿ 1,29,48,978 ಪುರುಷ, 1,29,66,570 ಮಹಿಳೆಯರಿದ್ದು, 1935 ಇತರೆ, 35,465 ಸೇವಾ ಮತದಾರ–ರಿದ್ದಾರೆ. ಯುವ ಮತದಾರರು 6,90,929 ಇದ್ದು, 85 ವರ್ಷ ಮೇಲ್ಪಟ್ಟ 2,29,563 ಮತದಾರರಿದ್ದರೆ, 3,43,966 ವಿಕಲಚೇತನ ಮತದಾರರಿದ್ದಾರೆ.

ಕಲಬುರಗಿ ಕ್ಷೇತ್ರದಲ್ಲಿ ಅತೀ ಹೆಚ್ಚು 20,98,202 ಮತದಾರರಿದ್ದರೆ, ಉತ್ತರ ಕನ್ನಡದಲ್ಲಿ 16,41,156 ಮತದಾರರಿದ್ದಾರೆ. 14 ಕ್ಷೇತ್ರಗಳಲ್ಲಿ 28,269 ಮತಗಟ್ಟೆಗಳನ್ನು ತೆರೆಯಲಾಗಿದೆ.

ಮತದಾನದ ಪ್ರಮಾಣವನ್ನು ಹೆಚ್ಚಿಸಲು ಮತ್ತು ಜನರು ತಮ್ಮ ಮತಗಟ್ಟೆಯನ್ನು ಹುಡುಕಲು ಸಹಾಯ ಮಾಡಲು, ಚುನಾವಣಾ ಅಧಿಕಾರಿಗಳು ಪ್ರತಿ ವೋಟಿಂಗ್ ಸ್ಲಿಪ್‌ನ ಹಿಂದೆ ಕ್ಯೂಆರ್ ಕೋಡ್ ಅನ್ನು ಮುದ್ರಿಸಿದ್ದಾರೆ, ಅದನ್ನು ಸ್ಕ್ಯಾನ್ ಮಾಡಿದ ಕೂಡಲೇ ಜಿಪಿಎಸ್ ತಂತ್ರಜ್ಞಾನವನ್ನು ಬಳಸಿಕೊಂಡು ಮತದಾರರನ್ನು ಅವಳ/ಅವನ ಬೂತ್‌ಗೆ ನಿರ್ದೇಶಿಸುತ್ತದೆ.

ಇದರ ಜೊತೆಗೆ ಆಯೋಗವು ವೋಟರ್ ಹೆಲ್ಪ್ ಲೈನ್ ಎಂಬ ಅಪ್ಲಿಕೇಶನ್ ಅನ್ನು ಕೂಡ ಬಿಡುಗಡೆ ಮಾಡಿದೆ, ಇದನ್ನು ಪ್ಲೇಸ್ಟೋರ್‌ನಿಂದ ಡೌನ್‌ಲೋಡ್ ಮಾಡಬಹುದು. ಇದು ಮತಗಟ್ಟೆ ಕುರಿತು ಮಾಹಿತಿ ನೀಡುತ್ತದೆ. ಸರದಿಯಲ್ಲಿರುವ ಜನರ ಸಂಖ್ಯೆ, ಪಾರ್ಕಿಂಗ್ ಸೌಲಭ್ಯ ಮತ್ತು ಇತರ ವಿವರಗಳು ಇದರಿಂದ ಲಭ್ಯವಾಗಲಿದೆ.

ಇಂದು ಬೆಳಗ್ಗೆ 7ರಿಂದ ಸಂಜೆ 6ರವರೆಗೆ ಮತದಾನ ನಡೆಯಲಿದ್ದು, ಮತದಾನದ ದಿನ ಚುನಾವಣಾ ಆಯೋಗದ ಅಧಿಕಾರಿಗಳು ಮತ್ತು ಮತದಾರರಿಗೆ ಬಿಸಿಗಾಳಿಯನ್ನು ಎದುರಿಸುವುದೇ ದೊಡ್ಡ ಸವಾಲಾಗಿ ಪರಿಣಮಿಸುವ ಸಾಧ್ಯತೆಗಳಿವೆ.

ಕೆಲ ರಾಜಕೀಯ ನಾಯಕರು ಮತದಾನವನ್ನು ಸಂಜೆ 6 ಗಂಟೆಗೂ ಮೀರಿ ವಿಸ್ತರಿಸುವಂತೆ ಚುನಾವಣಾ ಆಯೋಗಕ್ಕೆ ಮನವಿ ಮಾಡಿವೆ. ಆದರೆ, ಆಯೋಗ ಯಾವುದೇ ನಿರ್ಧಾರ ಕೈಗೊಂಡಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ನಡುವೆ ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಉತ್ತರ ಕರ್ನಾಟಕ ಪ್ರದೇಶಗಳಲ್ಲಿ ಚುನಾವಣೆಯ ದಿನದಂದು ತಾಪಮಾನವು 45–46 ಡಿಗ್ರಿ ಸೆಲ್ಸಿಯಸ್‌ಗೆ ಏರುವ ಸಾಧ್ಯತೆಗಳಿವೆ ಎಂದು ಎಚ್ಚ–ರಿಕೆಯನ್ನು ನೀಡಿದೆ.

ಕರ್ನಾಟಕ ಮುಖ್ಯ ಚುನಾವಣಾಧಿಕಾ–ರಿಗಳ ಕಚೇರಿಯ ಅಧಿಕಾರಿಗಳು ಮಾತನಾಡಿ, ಖಚಿಆ ಯಿಂದ ಮಾಹಿತಿ ಪಡೆಯಲಾಗುತ್ತಿದ್ದು, ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

ಮತದಾನದ ದಿನ ಸಾಕಷ್ಟು ಕುಡಿಯುವ ನೀರು, ಫ್ಯಾನ್, ನೆರಳಿನ ವ್ಯವಸ್ಥೆ ಮಾಡಲಾಗಿದೆ. ಪ್ರತಿ ಮತಗಟ್ಟೆಯಲ್ಲಿ ಪ್ರಾಥ–'ಮಿಕ ಆರೋಗ್ಯ ಕೇಂದ್ರಗಳು, ಆಸ್ಪತ್ರೆಗಳಲ್ಲು ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಹೆಚ್ಚುವರಿ ಸಿಇಒ ವೆಂಕಟೇಶ್ ಕುಮಾರ್ ಆರ್ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತವು ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಸಾಕಷ್ಟು ಆಂಬ್ಯುಲೆನ್ಸ್‌ಗಳು ಮತ್ತು ವೈದ್ಯಕೀಯ ಸಿಬ್ಬಂದಿಯನ್ನು ಸಜ್ಜುಗೊಳಿಸಿದೆ. ಅಲ್ಲದೆ, ಪ್ರತಿ ಮತಗಟ್ಟೆಯಲ್ಲಿ ಆಶಾ ಕಾರ್ಯಕರ್ತೆ ಅಥವಾ ಸಹಾಯಕ ನರ್ಸ್ ಮಿಡ್‌ವೈಫ್ ವರ್ಕರ್, ಒಆರ್‌ಎಸ್ ಹೊಂದಿರುವ ವೈದ್ಯಕೀಯ ಕಿಟ್ ಮತ್ತು ಇತರ ಸಾಮಗ್ರಿಗಳನ್ನು ಸಜ್ಜುಗೊಳಿಸಿದೆ.

ಈ ನಡುವೆ ನ್ಯಾಯಸಮ್ಮತ ಚುನಾವಣೆ ಮತ್ತು ಮತದಾನದ ಗೌಪ್ಯತೆಯನ್ನು ಖಚಿತಪಡಿಸಿಕೊಳ್ಳಲು, ಮತ ಚಲಾಯಿಸುವಾಗ ಯಾವುದೇ ಮೊಬೈಲ್ ಫೋನ್‌ಗಳನ್ನು ಅನುಮತಿಸಲಾಗುವುದಿಲ್ಲ ಎಂದು ಚುನಾವಣಾಧಿಕಾರಿಗಳು ಹೇಳಿದ್ದಾರೆ

ಮತದಾನಕ್ಕೂ ಮುನ್ನ ಮತದಾರರು ತಮ್ಮ ಫೋನ್ ಇಟ್ಟುಕೊಳ್ಳಲು ಪ್ರತ್ಯೇಕ ಟ್ರೇ ಅಥವಾ ಕೌಂಟರ್ ಗಳನ್ನು ಚುನಾವಣಾಧಿಕಾ–ರಿಗಳು ಖಚಿತಪಡಿಸಿದ್ದಾರೆ. ಮತದಾನದ ಪ್ರದೇಶದಲ್ಲಿ ಸ್ಮಾರ್ಟ್ ವಾಚ್‌ಗಳನ್ನೂ ಸಹ ಅನುಮತಿಸಲಾಗುತ್ತಿಲ್ಲ.

ಈ ಚುನಾವಣೆಯಲ್ಲಿ ಮಾಜಿ ಮುಖ್ಯಮಂತ್ರಿಗಳಾದ ಜಗದೀಶ್ ಶೆಟ್ಟರ್, ಬಸವರಾಜ ಬೊಮ್ಮಾಯಿ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಅಳಿಯ ರಾಧಾಕೃಷ್ಣ ದೊಡ್ಡಮನಿ, ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್, ಶಿವಾನಂದ್ ಪಾಟೀಲ್, ಈಶ್ವರ್ ಖಂಡ್ರೆ ಅವರ ಮಕ್ಕಳ ರಾಜಕೀಯ ಭವಿಷ್ಯ ನಿರ್ಧಾರವಾಗಲಿದೆ.

## ಮೀಸಲಾತಿ ಕುರಿತು ವೀಡಿಯೋ ಪೋಸ್ಟ್: ಜೆಪಿ ನಡ್ಡಾ, ಅಮಿತ್ ಮಾಳವೀಯಾ, ವಿಜಯೇಂದ್ರ ವಿರುದ್ಧ ಎಫ್‌ಐಆರ್

ಬೆಂಗಳೂರು: ಮೀಸಲಾತಿಗೆ ಸಂಬಂಧಿಸಿದಂತೆ ತಪ್ಪು ಮಾಹಿತಿಯುಳ್ಳ ವೀಡಿಯೊ ತುಣುಕನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡ ಹಿನ್ನೆಲೆಯಲ್ಲಿ ಬಿಜೆಪಿ ರಾಷ್ಟ್ರೀಯ ಮಾಹಿತಿ ತಂತ್ರಜ್ಞಾನ ಘಟಕದ ಮುಖ್ಯಸ್ಥ ಅಮಿತ್ ಮಾಳವೀಯ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಮತ್ತು ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ವಿರುದ್ಧ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಆರೋಪದಡಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ (ಕೆಪಿಸಿಸಿ) ಭಾನುವಾರ ಚುನಾವಣಾ ಆಯೋಗ ಮತ್ತು ಪೊಲೀಸರಿಗೆ ನೀಡಿದ ದೂರಿನ ಮೇರೆಗೆ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಭಾರತೀಯ ದಂಡ ಸಂಹಿತೆಯ ಜನರ ಪ್ರಾತಿನಿಧ್ಯ ಕಾಯ್ದೆ ಮತ್ತು ಸೆಕ್ಷನ್ 505 (2) (ವರ್ಗಗಳ ನಡುವೆ ದ್ವೇಷ ಅಥವಾ ದ್ವೇಷವನ್ನು ಸೃಷ್ಟಿಸುವ ಅಥವಾ ಉತ್ತೇಜಿಸುವ ಹೇಳಿಕೆಗಳು) ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾ–ರಿಯೊಬ್ಬರು ತಿಳಿಸಿದ್ದಾರೆ.

ಜೆಪಿ ನಡ್ಡಾ, ವಿಜಯೇಂದ್ರ ಹಾಗೂ ಕರ್ನಾಟಕ ಬಿಜೆಪಿಯಸಾಮಾಜಿಕ ಮಾಧ್ಯಮ ಉಸ್ತುವಾರಿಗಳ ಸೂಚನೆ ಮೇರೆಗೆ ಮಾಳವಿಯಾ ಅವರು ಈ ಪೋಸ್ಟ್ ಮಾಡಿದ್ದಾರೆ. ವಿಡಿಯೋದಲ್ಲಿ ರಾಹುಲ್ ಗಾಂಧಿ ಮತ್ತು ಸಿದ್ದರಾಮಯ್ಯ ಅವರ ಅನಿಮೇಟೆಡ್ ಪಾತ್ರಗಳಿವೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳನ್ನು ಮೊಟ್ಟೆಗಳೆಂದು ಬಿಂಬಿಸಿ, ಆ ಮೊಟ್ಟೆಗಳಿರುವ ಬುಟ್ಟಿಗೆ ಮುಸ್ಲಿಂ ಮೊಟ್ಟೆಯನ್ನು ರಾಹುಲ್



ಗಾಂಧಿ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ತಂದಿರಿಸಿದ್ದಾರೆ. ಮ–ರಿಯಾದ ಬಳಿಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ಮರಿಗಳಿಗೆ ಸೇರಬೇಕಾದ ಅನುದಾನವನ್ನು ಮುಸ್ಲಿಂ ಮ–ರಿಗಳಿಗೆ ಮಾತ್ರ ನೀಡುತ್ತಾರೆ...' ಎಂಬ ಹೇಳಿಕೆಯನ್ನು ನೀಡಲಾಗಿದೆ ಎಂದು ದೂರಿನಲ್ಲಿ ತಿಳಿಸಿದೆ.

ಈ ಕೃತ್ಯವು ಉದ್ದೇಶಪೂರ್ವಕವಾಗಿ ಗಲಭೆಯನ್ನು ಪ್ರಚೋದಿಸುವುದು ಮತ್ತು ವಿವಿಧ ಧರ್ಮಗಳ ನಡುವೆ ದ್ವೇಷವನ್ನು ಉತ್ತೇಜಿಸುವುದು ಮತ್ತು ನಿರ್ದಿಷ್ಟ ಅಭ್ಯರ್ಥಿಗೆ ಮತ ಹಾಕದಂತೆ ಎಸ್‌ಸಿ/ಎಸ್‌ಟಿ ಸಮುದಾಯದ ಸದಸ್ಯರನ್ನು ಬೆದರಿಸುವುದು ಮತ್ತು ಸದಸ್ಯರ ವಿರುದ್ಧ ದ್ವೇಷವನ್ನು ಉಂಟುಮಾಡುವುದರ ಉದ್ದೇಶವನ್ನು ಹೊಂದಿದೆ. ಹೀಗಾಗಿ, ಕ್ರಮ ಕೈಗೊಳ್ಳುವಂತೆ ಆಗ್ರಹಿಸಲಾಗಿದೆ.

## ಲೈಂಗಿಕ ಹಿಂಸೆ ವಿಡಿಯೋಗಳನ್ನು ಹಂಚುವುದು ಶಿಕ್ಷಾರ್ಹ ಅಪರಾಧ: ಎಸ್‌ಐಟಿ

ಬೆಂಗಳೂರು: ಹಾಸನದ ಲೈಂಗಿಕ ಹಿಂಸೆ ಮತ್ತು ಶೋಷಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಡಿಯೋಗಳನ್ನು ಹಂಚುವುದು ಶಿಕ್ಷಾರ್ಹ ಅಪರಾಧ ಎಂದು ವಿಶೇಷ ತನಿಖಾ ತಂಡ **(SIT)** ಮುಖ್ಯಸ್ಥ ಬಿ.ಕೆ.ಸಿಂಗ್ ಮಾಧ್ಯಮ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಪ್ರಕಟಣೆಯಲ್ಲಿ ಏನಿದೆ? ಈ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಯಾವುದೇ ವಿಡಿಯೋಗಳನ್ನು ಯಾರೇ ಆಗಲಿ ಸಾಮಾಜಿ–ಕ ಜಾಲತಾಣಗಳಲ್ಲಿ (ವಾಟ್ಸಪ್‌ನಂತಹ ಮೆಸೆಂಜರ್ ಆಪ್ ಸೇರಿ) ಹಂಚುವುದು ಮಾಹಿತಿ ತಂತ್ರಜ್ಞಾನ ಕಾಯಿದೆ ಕಲಂ 67(ಎ) ಐಟಿ ಆಕ್ಟ್ ಹಾಗೂ ಕಲಂ 228ಎ(1), 292 ಐಪಿಸಿ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವಾಗಿದೆ.

ಖಾಸಗಿ ಮೆಸೇಜಿಂಗ್ ಆಪ್‌ಗಳ ಮುಖಾಂತರ ಹಂಚುವುದನ್ನೂ ಪತ್ತೆ ಹಚ್ಚುವುದು ಸಾಧ್ಯವಿದ್ದು, ಅಂಥದ್ದರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು.

ಈ ಪ್ರಕರಣದ ಯಾವುದೇ ಸಂತ್ರಸ್ತ ವ್ಯಕ್ತಿಯು ಈಗಾಗಲೇ ಆರಂಭಿಸಲಾಗಿರುವ ನಮ್ಮ ಸಹಾಯವಾಣಿ 63609 38947 ಈ ನಂಬರ್ ಅನ್ನು ಬೆಳಿಗ್ಗೆ 8 ರಿಂದ



ರಾತ್ರಿ 8ರ ನಡುವೆ ಯಾವಾಗ ಬೇಕಾದರೂ ಸಂಪರ್ಕಿಸಬಹುದಾಗಿದೆ.

ಈ ನಂಬರಿಗೆ ಕರೆ ಮಾಡುವ ಯಾವುದೇ ವ್ಯಕ್ತಿಯ ಗುರುತನ್ನು ಗೌಪ್ಯವಾಗಿಡಲಾಗುವುದು. ಅವರು ಎಸ್‌ಐಟಿ ಕಚೇರಿಗೆ ಬರುವ ಅಗತ್ಯವೂ ಇಲ್ಲ. ಸಂತ್ರಸ್ತರಿಗೆ ಅಗತ್ಯವಿರುವ ನೆರವನ್ನು ಒದಗಿಸಲಾಗುವುದು.

ಯಾವುದೇ ಸಂತ್ರಸ್ತರ ಗುರುತನ್ನು ಬಹಿರಂಗಪಡಿಸುವ ಕೆಲಸವನ್ನು ಮಾಧ್ಯಮ ಸಂಸ್ಥೆಗಳು, ವ್ಯಕ್ತಿಗಳು ಅಥವಾ ಸಂಘ ಸಂಸ್ಥೆಗಳು ಅಥವಾ ಇನ್ಯಾರೇ ಆದ–'ರೂ ಮಾಡಬಾರದೆಂದು ಈ ಮೂಲಕ ಸೂಚಿಸಲಾಗುತ್ತಿದೆ. ಈ ವಿಚಾರದಲ್ಲಿ ಅಗತ್ಯ ಕಂಡುಬಂದರೆ ಕಾನೂನು ಕ್ರಮ ಜರುಗಿಸಲಾಗುವುದು.

ಯಾವುದೇ ಲೈಂಗಿಕ ಹಿಂಸೆ ಅಥವಾ ಅತ್ಯಾಚಾರ ಪ್ರಕರಣಗಳಲ್ಲಿ ನಾಚಿಕೆ ಪಟ್ಟು ಕೊಳ್ಳಬೇಕಾದ್ದು, ಹಿಂಜರಿಯಬೇಕಾದ್ದು, ಅವಮಾನ ಎಂದು ಭಾವಿಸಬೇಕಾದ್ದು ಅಂತಹ ಪ್ರಕರಣಗಳಲ್ಲಿ ಅಪರಾಧವೆಸಗಿದ ವ್ಯಕ್ತಿಯೇ ಹೊರತು, ಶೋಷಣೆಗೆ ಒಳಗಾದ ವ್ಯಕ್ತಿ ಅಲ್ಲ ಎಂಬುದನ್ನು ಅರಿಯಬೇಕು ಮತ್ತು ಸೂಕ್ತ ಸಂವೇದನೆಯಿಂದ ಪ್ರವರ್ತಿಸುವುದು ಸಮಾಜದ ಆರೋಗ್ಯದ ದೃಷ್ಟಿಯಿಂದ ಬಹಳ ಮುಖ್ಯ.

ಈ ವಿಚಾರದಲ್ಲಿ ಎಸ್‌ಐಟಿ ಅತ್ಯಂತ ಹೆಚ್ಚಿನ ಸಂವೇದನೆಯಿಂದ ನಡೆದುಕೊಳ್ಳಲಿದೆ. ಈಗಾಗಲೇ ಇದಕ್ಕೆ ಅಗತ್ಯವಿರುವ ವೃತ್ತಿಪರ ಕೌನ್ಸಿಲರ್‌ಗಳು, ವೈದ್ಯರು ಇಂತಹ ಕಾರ್ಯದಲ್ಲಿ ಅನುಭವವಿರುವ ಸಂಸ್ಥೆಗಳ ನೆರವನ್ನು ಎಸ್‌ಐಟಿ ಪಡೆದುಕೊಂಡಿದೆ. ಸಾರ್ವಜನಿಕರು ಈ ವಿಚಾರದಲ್ಲಿ ಸ್ಪಂದಿಸುವುದು ಅಗತ್ಯ.

## ರಾಜ್ಯದಲ್ಲಿ ಈವರೆಗೆ 452.72 ಕೋಟಿ ಮೊತ್ತದ ನಗದು–ಮದ್ಯ ಜಪ್ತಿ



ಬೆಂಗಳೂರು: ಪ್ರಸಕ್ತ ಸಾರ್ವತ್ರಿಕ ಲೋಕಸಭಾ ಚುನಾವಣೆ ಹಾಗೂ ಸುರಪುರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಸಂಬಂಧಿಸಿದಂತೆ ರಾಜ್ಯದಲ್ಲಿ ಇದುವರೆಗೂ 452.72 ಕೋಟಿ ರೂ. ಮೊತ್ತದ ಮದ್ಯ, ಡ್ರಗ್ಸ್, ಚಿನ್ನ, ಬೆಳ್ಳಿ, ವಜ್ರ, ಉಚಿತ ಉಡ–'ಗೊರೆ ಹಾಗೂ ನಗದನ್ನು ಜಪ್ತಿ ಮಾಡಲಾಗಿದೆ.

ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿ ಬಂದಾಗಿನಿಂದ ಪ್ರತಿನಿತ್ಯ ಒಂದಲ್ಲಾ ಒಂದು ಕಡೆ ಈ ರೀತಿ ಜಪ್ತಿಯಾಗುತ್ತಲೇ ಇದೆ. ಈ ಬಾರಿ ದಾಖಲೆ ಪ್ರಮಾಣದಲ್ಲಿ ಹಣ, ಚಿನ್ನ ಹಾಗೂ ಇತರ ವಸ್ತುಗಳು ಜಪ್ತಿಯಾಗಿವೆ. ಉತ್ತರಕನ್ನಡ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಆದಾಯ ತೆರಿಗೆ ಇಲಾಖೆಯವರು 47,47,000 ರೂಪಾಯಿ ವೌಲ್ಯದ 750 ಗ್ರಾಂ ಚಿನ್ನವನ್ನು ವಶಪಡಿಸಿಕೊಂಡಿದ್ದಾರೆ. ಪೊಲೀಸ್ ಕ್ಷಿಪ್ರಪಡೆಗಳು, ಸ್ಥಿರ ಕಣ್ಗಾವಲು ತಂಡಗಳು 143.16 ಕೋಟಿ ರೂ. ಮೊತ್ತದ ಮದ್ಯ, ಡ್ರಗ್ಸ್, ಚಿನ್ನ, ಬೆಳ್ಳಿ, ಉಚಿತ ಉಡುಗೊರೆ ಹಾಗೂ ನಗದನ್ನು ಜಪ್ತಿ ಮಾಡಿದ್ದಾರೆ.

ಅಬಕಾರಿ ಇಲಾಖೆಯವರು 178.48 ಕೋಟಿ ರೂ. ಮೊತ್ತದ ಮದ್ಯ ಹಾಗೂ ಡ್ರಡ್ರಗ್ಸ್ ಅನ್ನು ವಶಪಡಿಸಿಕೊಂಡಿದ್ದರೆ, ಆದಾಯ ತೆರಿಗೆ ಅಧಿ ಕಾ–ರಿಗಳು 49.97 ಕೋಟಿ ರೂ. ಮೊತ್ತದ ನಗದು, ಚಿನ್ನ, ವಜ್ರಹಾಗೂ ಇತರ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ.

ವಾಣಿಜ್ಯ ತೆರಿಗೆ ಇಲಾಖೆಯವರು 80.91 ಕೋಟಿ ರೂ. ಮೊತ್ತದ ಚಿನ್ನ, ಬೆಳ್ಳಿ, ಉಚಿತ ಉಡುಗೊರೆಗಳಿಗೆ ಸಂಬಂಧಿಸಿದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಈ ಸಂಬಂಧ 2,301 ಎಫ್‌ಐಆರ್ ಅನ್ನು ದಾಖಲಿಸಲಾಗಿದ್ದು, 2,071 ವಿವಿಧ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿ ಕಾರಿಗಳ

## ಕೇಜ್ರಿವಾಲ್ ವಿರುದ್ಧ ಎನ್‌ಐಎ ತನಿಖೆಗೆ ಶಿಫಾರಸು ಬಿಜೆಪಿಯ ಮತ್ತೊಂದು ಪಿತೂರಿ: ಎಎಪಿ



ನವದೆಹಲಿ: ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ವಿರುದ್ಧ ಎನ್‌ಐಎ ತನಿಖೆ ಮಾಡುವಂತೆ ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿ ಕೆ ಸಕ್ಸೇನಾ ಅವರು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿದ್ದು, ಇದು ಬಿಜೆಪಿಯ ಮತ್ತೊಂದು ಪಿತೂರಿ ಎಂದು ಆಮ್ ಆದ್ಮಿ ಪಕ್ಷ ಸೋಮವಾರ ಕಿಡಿ ಕಾರಿದೆ.

ಲೆಫ್ಟಿನೆಂಟ್ ಗವರ್ನರ್ ವಿ ಕೆ ಸಕ್ಸೇನಾ ಅವರು ಬಿಜೆಪಿಯ ಸೂಚನೆಯ ಮೇರೆಗೆ ದೆಹಲಿ ಮುಖ್ಯಮಂತ್ರಿ ವಿರುದ್ಧ ಎನ್‌ಐಎ ತನಿಖೆಗೆ ಶಿಫಾರಸು ಮಾಡಿದ್ದಾರೆ ಎಂದು ಎಎಪಿ ಆರೋಪಿಸಿದೆ.

ನಿಷೇಧಿತ ಭಯೋತ್ಪಾದಕ ಸಂಘಟನೆ 'ಸಿಖ್ಸ್ ಫಾರ್ ಜಸ್ಟೀಸ್' ನಿಂದ ರಾಜ–ಕೀಯ ದೇಣಿಗೆ ಪಡೆದ ಆರೋಪಕ್ಕೆ ಸಂಬಂಧಿಸಿದಂತೆ ಅರವಿಂದ್ ಕೇಜ್ರಿವಾಲ್ ಅವರ ವಿರುದ್ಧ ಎನ್‌ಐಎ ತನಿಖೆ ಮಾಡುವಂತೆ ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿ ಕೆ ಸಕ್ಸೇನಾ ಅವರು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿದ್ದಾರೆ ಎಂದು ರಾಜಭವನ ಮೂಲಗಳು ತಿಳಿಸಿವೆ.

"ಈ ಬಗ್ಗೆ ಪ್ರತಿಕ್ರಿಯಿಸಿದ ಎಎಪಿ ನಾಯಕ ಮತ್ತು ದೆಹಲಿ ಸಚಿವ ಸೌರಭ್ ಭಾರದ್ವಾಜ್ ಅವರು, ಇದು ಬಿಜೆಪಿಯ ಆಜ್ಞೆಯ ಮೇರೆಗೆ ಕೇಜ್ರಿವಾಲ್ ವಿರುದ್ಧದ ಮತ್ತೊಂದು ಪಿತೂರಿಯಾಗಿದೆ. ಅವರು ದೆಹಲಿಯ ಎಲ್ಲಾ ಏಳು ಲೋಕಸಭಾ ಕ್ಷೇತ್ರಗಳಲ್ಲಿ ಸೋಲುತ್ತಾರೆ. ಲೋಕಸಭೆ ಚುನಾವಣೆಯಲ್ಲಿ ಸೋಲಿನ ಭಯದಿಂದ ಕಂಗೆಟ್ಟಿದ್ದಾರೆ" ಎಂದು ವಾಗ್ದಾಳಿ ನಡೆಸಿದರು

## 6 ಭಾರತೀಯ ಸಿಬ್ಬಂದಿಗಳಿದ್ದ ಇರಾನ್ ದೋಣಿ ವಶಕ್ಕೆ ಪಡೆದ ಇಂಡಿಯನ್ ಕೋಸ್ಟ್ ಗಾರ್ಡ್



ಕೊಚ್ಚಿ: ಕೇರಳ ಕರಾವಳಿಯಲ್ಲಿ ಆರು ಭಾರತೀಯ ಸಿಬ್ಬಂದಿಗಳೊಂದಿಗೆ ಇರಾನ್ ಮೀನುಗಾರಿಕೆ ಹಡಗನ್ನು ಭಾರತೀಯ ಕೋಸ್ಟ್ ಗಾರ್ಡ್ ವಶಕ್ಕೆ ತೆಗೆದುಕೊಂಡಿದೆ ಎಂದು ರಕ್ಷಣಾ ಸಚಿವಾಲಯ ಸೋಮವಾರ ತಿಳಿಸಿದೆ.


ಭಾರತೀಯ ಕೋಸ್ಟ್ ಗಾರ್ಡ್, ಕ್ಷಿಪ್ರ "ಸಮುದ್ರ–ವಾಯು" ಸಮನ್ವಯ ಕಾರ್ಯಾಚರಣೆಯ ನಂತರ ಹಡಗನ್ನು ಭಾನುವಾರ ವಶಕ್ಕೆ ಪಡೆಯಲಾಗಿದೆ ಎಂದು ಹೇಳಿದೆ.

ತಮಿಳುನಾಡಿನ ಕನ್ಯಾಕುಮಾರಿ ಮೂಲದ ಆರು ಮೀನುಗಾರರು ಇರಾನ್ ಮೂಲದ ಸೈಯದ್ ಸೌದ್ ಅನ್ಸಾರಿ ಎಂಬುವವರ ಬಳಿ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿದ್ದರು. ಮೀನುಗಾರರನ್ನು ಕೆಟ್ಟದಾಗಿ ನಡೆಸಿಕೊಳ್ಳಲಾಗಿದೆ ಮತ್ತು ಅವರಿಗೆ ಮೂಲಭೂತ ಸೌಲಭ್ಯಗಳನ್ನು ನೀಡಿಲ್ಲ. ಅಲ್ಲದೆ ಅವರ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡಿರುವುದಾಗಿ ಸಿಬ್ಬಂದಿ ಆರೋಪಿಸಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

ಬೋಟ್‌ನ ಮಾಲೀಕರು ಇರಾನ್ ಪ್ರಜೆಯಾಗಿದ್ದು, ಅವರು ತಮಿಳುನಾಡಿನಿಂದ ಭಾರತೀಯ ಮೀನುಗಾರರನ್ನು ಗುತ್ತಿಗೆ ಆಧಾರದ ಮೇಲೆ ಕೆಲಸಕ್ಕೆ ತೆಗೆದುಕೊಂಡಿದ್ದರು ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

"ಭಾರತೀಯ ಕೋಸ್ಟ್ ಗಾರ್ಡ್ ಮೇ 5 ರಂದು ಕೇರಳ ಕರಾವಳಿಯ ಬೇಪೋರ್‌ನ ಪಶ್ಚಿಮಕ್ಕೆ ಆರು ಭಾರತೀಯ ಸಿಬ್ಬಂದಿಯೊಂದಿಗೆ ಇರಾನಿನ ಮೀನುಗಾರಿಕಾ ಹಡಗನ್ನು ವಶಕ್ಕೆ ತೆಗೆದುಕೊಂಡಿದೆ. ಕೋಸ್ಟ್ ಗಾರ್ಡ್ ತನ್ನ ಹಡುಗಗಳು ಮತ್ತು ಹೆಲಿಕಾಪ್ಟರ್ ಗಳನ್ನು ತ್ವರಿತವಾಗಿ ನಿಯೋಜಿಸಿ ಇರಾನ್ ಹಡಗನ್ನು ವಶಕ್ಕೆ ಪಡೆದಿದೆ" ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

## ಕಾಂಗ್ರೆಸ್ ಮಾಜಿ ಶಾಸಕ ಡಾ. ನಾಗರೆಡ್ಡಿ ಪಾಟೀಲ್ ವಿಧಿವಶ



ಬೆಂಗಳೂರು: ಕಲಬುರ್ಗಿ ಜಿಲ್ಲೆಯ ಸೇಡಂ ಮತಕ್ಷೇತ್ರದ ಮಾಜಿ ಶಾಸಕ ಹಾಗೂ ಕಾಂಗ್ರೆಸ್ ಮುಖಂಡರಾಗಿದ್ದ ಡಾ. ನಾಗರೆಡ್ಡಿ ಪಾಟೀಲ್ (79) ಇಂದು ಬೆಳಗಿನ ಜಾವ 3 ಗಂಟೆಗೆ ಹೃದಯಾಘಾತದಿಂದ ನಿಧನ ಹೊಂದಿದ್ದಾರೆ.

ಎರಡು ದಶಕಗಳಿಂದ ಕಾಂಗ್ರೆಸ್ ಜತೆಗಿದ್ದ ನಾಗರೆಡ್ಡಿ ಅವರ ಸಾವಿನ ಸುದ್ದಿ ರಾಜ್ಯ ರಾಜ–ಕೀಯ ನಾಯಕರಲ್ಲಿ ಅತೀವ ದುಃಖ ತಂದೊಡ್ಡಿದೆ.

ಜಿಲ್ಲೆಯ ಸೇಡಂ ಮತಕ್ಷೇತ್ರದ ಮಾಜಿ ಶಾಸಕ ಹಾಗೂ ಕಾಂಗ್ರೆಸ್ ಮುಖಂಡ, ಶಿಕ್ಷಣ ಪ್ರೇಮಿ, ಹಿರಿಯ ಮುತ್ಸದ್ದಿ ಎಂದೇ ಹೆಸರುವಾಸಿಯಾಗಿದ್ದ ಡಾ. ನಾಗರೆಡ್ಡಿ ಪಾಟೀಲ್ ಅವರ ನಿಧನದ ಸುದ್ದಿ ತಿಳಿಯುತ್ತಿದ್ದಂತೆ ರಾಜಕೀಯ ನಾಯಕರು ಹಾಗೂ ಗಣ್ಯರು ಸಂತಾಪ ಸೂಚಿಸಿದ್ದಾರೆ. ಸೇಡಂ ಪಟ್ಟಣದಲ್ಲಿರುವ ಡಾ. ನಾಗರೆಡ್ಡಿ ಅವರ ಜಮೀನಿನಲ್ಲಿ ಇಂದು ಮಧ್ಯಾಹ್ನ 3:30ಕ್ಕೆ ಅಂತ್ಯಕ್ರಿಯೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ. 1983–1985ರ ಅವಧಿಯಲ್ಲಿ ನಾಗರೆಡ್ಡಿ ಪಾಟೀಲ್ ಅವರು, ಕಾಂಗ್ರೆಸ್ ಪರ ಶಾಸಕರಾಗಿ ಸೇವೆ ಸಲ್ಲಿಸಿದ್ದಾರೆ.

## ಬೆಂಗಳೂರು ಮೆಟ್ರೋ ರೈಲಿನಲ್ಲಿ ಯುವಕ–ಯುವತಿಯ ಅಸಭ್ಯ ವರ್ತನೆ, ಸಹ ಪ್ರಯಾಣಿಕರ ಆಕ್ರೋಶ

ಬೆಂಗಳೂರು: ಚಲಿಸುತ್ತಿದ್ದ ಮೆಟ್ರೋ ರೈಲಿನಲ್ಲಿ ಯುವಕ– ಯುವತಿ ಪರಸ್ಪರ ಬಿಗಿದಪ್ಪಿದ್ದ ವರ್ತನೆಗೆ ಸಹ ಪ್ರಯಾಣಿಕರು ಕಿಡಿಕಾರಿದ್ದು, ಈ ವಿಡಿಯೋ ಇದೀಗ ವೈರಲ್ ಆಗುತ್ತಿದೆ.

ಈ ಹಿಂದೆ ದೆಹಲಿ ಮೆಟ್ರೋ ರೈಲಿನಲ್ಲಿ ಯುವಕ–ಯುವತಿಯ–ರಿಬ್ಬರು ಪರಸ್ಪರ ಆಲಂಗಿಸಿಕೊಂಡು ಮುತ್ತಿಟ್ಟುಕೊಂಡಿದ್ದರು. ಇದನ್ನು ಸಹಪ್ರಯಾಣಿಕರೊಬ್ಬರು ವಿಡಿಯೋ ಮಾಡಿ ಸಾಮಾಜಿಕ ಜಾಲತಾಣ–ಕ್ಕೆ ಅಪ್ಲೋಡ್ ಮಾಡಿದ್ದರು. ಯುವಕರ ವರ್ತನೆಗೆ ಭಾರಿ ಆಕ್ರೋಶ ವ್ಯಕ್ತವಾಗಿತ್ತು. ಇದೀಗ ಬೆಂಗಳೂರಿನಲ್ಲೇ ಇಂತಹ ಮತ್ತೊಂದು ಕೃತ್ಯ ವರದಿಯಾಗಿದೆ.

ಸ್ಯಾಮ್ (Sam459om) ಎಂಬುವವರು ತಮ್ಮ ಟ್ವಿಟ–ರ್ ಖಾತೆಯಲ್ಲಿ ಈ ಕುರಿತ ವಿಡಿಯೋವನ್ನು ಅಪ್ಲೋಡ್ ಮಾಡಿದ್ದು, ಯುವಕನನ್ನು ಒಪ್ಪಿಕೊಂಡಿದ್ದ ಯುವತಿ ಅಕ್ಷರಶಃ ಚುಂಬಿಸುತ್ತಿದ್ದಳು ಎಂದು ಬಿಎಂಆರ್‌ಸಿಎಲ್, ನಮ್ಮ ಮೆಟ್ರೋ ಹಾಗೂ ನಗರ ಪೊಲೀಸರಿಗೆ ಟ್ಯಾಗ್ ಮಾಡಿ ದೂರು ನೀಡಿದ್ದಾರೆ.

ಈ ವಿಡಿಯೋಗೆ ವ್ಯಾಪಕ ಮಿಶ್ರ ಪ್ರತಿಕ್ರಿಯೆಗಳು ವ್ಯಕ್ತವಾಗುತ್ತಿದ್ದು, ನಮ್ಮ ಮೆಟ್ರೋದಲ್ಲಿ ಮಕ್ಕಳು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಸೇರಿ ಎಲ್ಲ ವಯೋಮಾನದವರು ಪ್ರಯಾಣಿಸುತ್ತಾರೆ. ಈ ರೀತಿಯ



ನಡವಳಿಕೆಯು ಸರಿಯಲ್ಲ ಎಂದಿದ್ದಾರೆ. ಮತ್ತೆ ಕೆಲವರು 'ಇದರಲ್ಲಿ ಅಸಭ್ಯ ವರ್ತನೆ ಏನಿದೆ. ಪರಸ್ಪರ ಅಪ್ಪಿಕೊಂಡು ನಿಂತಿದ್ದರಷ್ಟೇ. ಬೇರೆ ಯಾವುದೇ ತಪ್ಪು ಮಾಡಿಲ್ಲ' ಎಂದಿದ್ದಾರೆ.

ಈ ವಿಡಿಯೊ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆದ ಬೆನ್ನಲ್ಲೇ, ಇತ್ತ ಬೆಂಗಳೂರು ನಗರ ಪೊಲೀಸರು ಈ ಬಗ್ಗೆ ಕ್ರಮವಹಿಸಲಾಗುವುದು, ಘಟನೆ ಸಂಬಂಧ ಮಾಹಿತಿ ನೀಡಿ ಎಂದು ರೀ ಟ್ವೀಟ್ ಮಾಡಿದ್ದಾರೆ.

## ಸ್ಟೇರಿಂಗ್ ಕಟ್ಟಾಗಿ ಹಳ್ಳಕ್ಕೆ ಮುಗುಚಿದ ಸರ್ಕಾರಿ ಬಸ್

ಮೈಸೂರು: ಸ್ಟೇರಿಂಗ್ ರಾಡ್ ಕಟ್ ಕೆ.ಎಸ್.ಆರ್ಟಿ.ಸಿ. ಬಸ್ ಹಳ್ಳಕ್ಕೆ ಬಿದ್ದ ಘಟನೆ ಕೆ.ಆರ್.ನಗರದ ಶ್ರೀರಾಂಪುರ ಬಳಿ ನಡೆದಿದೆ.

ಸಾಲಿಗ್ರಾಮದಿಂದ ಮೈಸೂರಿಗೆ ಬಸ್ ತೆರಳುತ್ತಿತ್ತು. ಬಸ್ ಹಳ್ಳಕೆ ಉರುಳಿದ ಪರಿಣಾಮ ಬಸ್ಸಿನಲ್ಲಿದ್ದ 50 ಮಂದಿಗೆ ಗಾಯವಾಗಿದೆ. ಹತ್ತಾರು ಮಂದಿಗೆ ಕೈ ಕಾಲು ಮುರಿತವಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ. ಇತ್ತ ಆ್ಯಂಬುಲೆನ್ಸ್ ಮೂಲಕ ಆಸ್ಪತ್ರೆಗೆ ಗಾಯಾಳುಗಳನ್ನು ದಾಖಲಿಸಲಾಗಿದೆ. ಗಾಯಗೊಂಡವರಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಘಟನಾ ಸ್ಥಳಕ್ಕೆ ಕೆ.ಆರ್.ನಗರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಸುಗಮ-ಶಾಂತಿಯುತ ಮತದಾನಕ್ಕೆ ಸಕಲ ಸಿದ್ಧತೆ: ಡಿಸಿ ನಿತೇಶ್ ಪಾಟೀಲ

ಬೆಳಗಾವಿ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮೇ.07 ರಂದು ನಡೆಯಲಿದ್ದು, ಸುಗಮ ಮತ್ತು ಶಾಂತಿಯುತ ಮತದಾನ ನಡೆಸಲು ಎಲ್ಲ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮೆ.07 ರಂದು ನಡೆಯಲಿರುವ ಲೋಕಸಭಾ ಚುನಾವಣೆಯ ಸಿದ್ಧತೆ ಕುರಿತು ಮಾಹಿತಿ ನೀಡಿದರು.

02–ಬೆಳಗಾವಿ ಲೋಕಸಭಾ ಮತಕ್ಷೇತ್ರದಲ್ಲಿ 957559 ಪುರುಷ ಮತದಾರರು, 966134 ಮಹಿಳೆಯರು, 95 ಇತರೆ ಸೇರಿದಂತೆ 1923788 ಮತದಾರರಿದ್ದಾರೆ. ಅದೇ ರೀತಿಯಲ್ಲಿ 01–ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ 885200 ಪುರಷರು, 876414 ಮಹಿಳೆಯರು ಹಾಗೂ 80 ಇತರೆ ಮತದಾರರು ಸೇರಿದಂತೆ ಒಟ್ಟು 1761694 ಮತದಾರರಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ 2055870 ಪುರುಷ ಮತದಾರರು, 2049169 ಮಹಿಳಾ ಮತದಾರರು ಹಾಗೂ 186 ಇತರೆ ಮತದಾರರು ಸೇರಿದಂತೆ ಒಟ್ಟು 4105225 ಮತದಾರರಿದ್ದಾರೆ.

ಭಾರತ ಚುನಾವಣಾ ಆಯೋಗದ ಅನುಮೋದಿಸಿರುವಂತೆ ಮತದಾರರು ತಮ್ಮ ಮತ ಚಲಾಯಿಸುವ ಮೊದಲು ಮತದಾನ ಕೇಂದ್ರಗಳಲ್ಲಿ ಅವರ ಗುರುತಿಗಾಗಿ ಮತದಾರರ ಗುರುತಿಸಿ ಚೀಟಿ ತೋರಿಸಿ ಮತದಾನ ಮಾಡಬಹುದಾಗಿದೆ. ಮತದಾನದ ದಿನದಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಮತದಾನ ನಡೆಯಲಿದೆ.

ಮತದಾನದ ದಿನದಂದು ರಜೆಯ ಘೋಷಣೆ/ಪಾವತಿಸಿದ ರಜೆ: ಲೋಕಸಭಾ ಕ್ಷೇತ್ರಗಳ ಅಡಿಯಲ್ಲಿ ಬರುವ ಎಲ್ಲಾ ಸರ್ಕಾರಿ ಕಚೇರಿಗಳು, ಶಾಲೆಗಳು ಮತ್ತು ಕಾಲೇಜುಗಳು (ಅನುದಾನಿತ ಶಿಕ್ಷಣ ಸಂಸ್ಥೆಗಳು ಸೇರಿದಂತೆ) ಮತ್ತು ಸಾರ್ವಜನಿಕ ವಲಯದ ಉದ್ಯಮಗಳಿಗೆ ಸಾರ್ವತ್ರಿಕ ರಜೆಯನ್ನು ಘೋಷಿಸಿದೆ. ಈ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ, ವ್ಯಾಪಾರ ಉದ್ಯಮಗಳು ಕೈಗಾರಿಕೆಗಳು ಮತ್ತು ಇತರ ಸಂಸ್ಥೆಗಳಲ್ಲಿ ಕೆಲಸ ಮಾಡುವ ಅಧಿಕಾರಿ/ಸಿಬ್ಬಂದಿಗಳು ಅಥವಾ ದಿನಗೂಲಿ ವೇತನದಲ್ಲಿ ಕೆಲಸ ಮಾಡುವ ಮತದಾರರು ತಮ್ಮ ಮತ ಚಲಾಯಿಸಲು ಅನುವು ಮಾಡಿಕೊಡಲು ಆರ್ಪಿ ಕಾಯ್ದೆ 1951 ರ ಸೆಕ್ಷನ್ 135 ಬಿ ಪ್ರಕಾರ ಪಾವತಿಸಿದ ರಜೆಯನ್ನು ಮಂಜೂರು ಮಾಡಲು ಆದೇಶಿಸಿದೆ.

ಕಾನೂನುಬಾಹಿರ ಸಭೆಗಳನ್ನು ನಿಷೇಧಿಸಲಾಗಿದೆ ಮತ್ತು ಮತದಾನದ ಮುಕ್ತಾಯಕ್ಕೆ ನಿಗದಿಪಡಿಸಿದ ಗಂಟೆಯೊಂದಿಗೆ ಕೊನೆಗೊಳ್ಳುವ ಮುಂಚಿನ 48 ಗಂಟೆಗಳ ಅವಧಿಯಲ್ಲಿ ಸಾರ್ವಜನಿಕ ಸಭೆಗಳನ್ನು ನಡೆಸುವುದನ್ನು ನಿಷೇಧಿಸುವ ಬಗ್ಗೆ ಆದೇಶಗಳನ್ನು ನೀಡಲಾಗಿದೆ. ಇದು ಚುನಾವಣೆ ನಡೆಯುವ ಪ್ರದೇಶ/ಸಂಪೂರ್ಣ ಕ್ಷೇತ್ರಕ, ಅನ್ವಯಿಸುತ್ತದೆ.

ಮಧ್ಯಪಾನ ಮಾರಾಟವನ್ನು ನಿಷೇಧಿಸಿ



ಆದೇಶ ಹೊರಡಿಸಲಾಗಿದೆ. ರಾಜಕೀಯ ಪ್ರಚಾರಕ್ಕಾಗಿ ಮತದಾನದ ಮುಕ್ತಾಯದ ಸಮಯದೊಂದಿಗೆ ಕೊನೆಗೊಳ್ಳುವ ಮುಂಚಿನ 48 ಗಂಟೆಗಳ ಅವಧಿಯಲ್ಲಿ ಯಾವುದೇ ಧ್ವನಿವರ್ಧಕವನ್ನು ಬಳಸಲು ನಿರ್ಬಂಧಿಸಲಾಗಿದೆ.

ಲೋಕಸಭಾ ಕ್ಷೇತ್ರಗಳಿಗೆ ಸಾರ್ವತ್ರಿಕ ಚುನಾವಣೆಯ ಪ್ರಚಾರದ ಸಂದರ್ಭದಲ್ಲಿ ಪ್ರಚಾರದ ಅವಧಿ ಮುಗಿದ ನಂತರ ಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ಪ್ರಚಾರ ನಡೆಸುವಂತಿಲ್ಲ, ಕ್ಷೇತ್ರದ ಹೊರಗಿನಿಂದ ಕರೆತಂದಿರುವ ರಾಜಕೀಯ ಕಾರ್ಯಕರ್ತರು/ ಪಕ್ಷದ ಕಾರ್ಯಕರ್ತರು/ ಮೆರವಣಿಗೆ/ ಪದಾಧಿಕಾರಿಗಳು/ ಪ್ರಚಾರ–ಕಾರ್ಯಕರ್ತರು ಮುಂತಾದವರು ಸೇರಿದಂತೆ ಆ ಕ್ಷೇತ್ರದ ಮತದಾರರಲ್ಲದ ರಾಜಕೀಯ ವ್ಯಕ್ತಿಗಳು ಕ್ಷೇತ್ರವನ್ನು ತೊರೆಯಬೇಕು.

ಆಯೋಗದ ನಿರ್ದೇಶನಗಳ ಪ್ರಕಾರ; ಮೇಲಿನ ಸೂಚನೆಗಳನ್ನು ಕೈಗೊಳ್ಳಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳಲು, ಚುನಾವಣಾ ಆಡಳಿತ/ಪೊಲೀಸ್ ಆಡಳಿತವು ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬಹುದಾಗಿದೆ.

ಕಲ್ಯಾಣ ಮಂಟಪಗಳು / ಸಮುದಾಯ ಭವನಗಳು ಇತ್ಯಾದಿಗಳನ್ನು ಪರಿಶೀಲಿಸುವುದು, ಈ ಆವರಣದಲ್ಲಿ ಯಾರಾದರೂ ಹೊರಗಿನವರಿಗೆ ವಸತಿ ಕಲ್ಪಿಸಲಾಗಿದೆಯೇ ಎಂದು ಪರಿಶೀಲಿಸಲು ಸೂಚಿಸಲಾಗಿದೆ. ಕ್ಷೇತ್ರದ ಗಡಿಗಳಲ್ಲಿ ಚೆಕ್ ಪೋಸ್ಟಗಳನ್ನು ಸ್ಥಾಪಿಸಿ ಕ್ಷೇತ್ರದ ಹೊರಗಿನಿಂದ ಬರುವ ವಾಹನಗಳ ಚಲನವಲನದ ನಿಗಾವಹಿಸಲಾಗಿದೆ.

ಆಯಾ ಕ್ಷೇತ್ರದ ಮತದಾರರೇ ಅಥವಾ ಇಲ್ಲವೇ ಎಂಬುದನ್ನು ಕಂಡುಹಿಡಿಯಲು ಅವರ ಗುರುತಿನ ಚೀಟಿಗಳನ್ನು ಪರಿಶೀಲಿಸಲಾಗುತ್ತಿದೆ.

ಮುದ್ರಣ ಅಥವಾ ವಿದ್ಯುನ್ಮಾನ ಮಾಧ್ಯಮ ಸೇರಿದಂತೆ ಯಾವುದೇ ಮಾಧ್ಯಮಗಳಲ್ಲಿ ಚುನಾವಣಾ ಸಮೀಕ್ಷೆಗಳು ಸೇರಿದಂತೆ ಮತದಾರರ ಮೇಲೆ ಪ್ರಭಾವ ಬೀರುವ ಯಾವುದೇ ರೀತಿಯ ಸಮೀಕ್ಷೆಗಳನ್ನು ಮಾಡಬಾರದು ಎಂದು ಮುದ್ರಣ, ವಿದ್ಯುನ್ಮಾನ ಮಾಧ್ಯಮಗಳಿಗೆ ತಿಳಿಸಲಾಗಿದೆ.

ಚುನಾವಣೆ ಕುರಿತು ಜನಾಭಿಪ್ರಾಯ ಸಂಗ್ರಹ, ಫಲಿತಾಂಶಗಳು ಅಥವಾ ಯಾವುದೇ ಇತರೆ ರೀತಿಯ ಸಮೀಕ್ಷೆಯ ಫಲಿತಾಂಶಗಳು ಸೇರಿದಂತೆ ಯಾವುದೇ ಚುನಾವಣಾ ವಿಷಯವನ್ನು ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಪ್ರದರ್ಶಿಸುವುದು/ಪ್ರಕಟಿಸುವುದನ್ನು ದೇಶದಲ್ಲಿ ನಡೆಯುತ್ತಿರುವ ಒಟ್ಟು 7 ಹಂತಗಳ ಮತದಾನ ಮುಗಿಯುವವರೆಗೆ ನಿಷೇಧಿಸಲಾಗಿದೆ.

ಮತಗಟ್ಟೆಗಳಲ್ಲಿ ಬಿಸಿಲಿನ ತಾಪವನ್ನು ನೀಗಿಸಲು ಮತದಾರರಿಗೆ ಅನುಕೂಲವಾಗುವಂತೆ ಕ್ರಮ: ಮತಗಟ್ಟೆಗಳಲ್ಲಿ ಕುಡಿಯುವ ನೀರು, ವಿದ್ಯುತ್, ಪೀಠೋಪಕರಣಗಳು ಪುರುಷರು ಮತ್ತು ಮಹಿಳೆಯರಿಗಾಗಿ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಮತ್ತು ಮತದಾರರಿಗೆ ಸಹಾಯವಾಗಲು ಸಂಕೇತ ಫಲಕಗಳನ್ನು ಅಳವಡಿಸಲಾಗಿದೆ. ಮತಗಟ್ಟೆಯ ಅಕ್ಕಪಕ್ಕದ ಕೊಠಡಿಗಳನ್ನು ವಿಶ್ರಾಂತಿ ಕೊಠಡಿಗಳನ್ನಾಗಿ ಸಿದ್ಧವಿರಿಸಲಾಗಿದೆ. ಮತಗಟ್ಟೆ ಆವರಣದಲ್ಲಿ ಶೂಶ್ರೂಷಕರು/ ಆಶಾ ಕಾರ್ಯಕರ್ತರೊಂದಿಗೆ ವೈದ್ಯಕೀಯ ಕಿಟ್‌ಗಳನ್ನು ವ್ಯವಸ್ಥೆ ಮಾಡಲಾಗಿದೆ. ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ತುರ್ತು ಸಂದರ್ಭಗಳಲ್ಲಿ ಆಂಬ್ಯುಲೆನ್ಸ್ ಸೇವೆಯ ಸೌಲಭ್ಯವಿರುತ್ತದೆ.

ಮುದ್ರಣ ಮಾಧ್ಯಮಕ್ಕಾಗಿ ರಾಜಕೀಯ ಜಾಹೀರಾತಿನ ಪೂರ್ವ–ಪ್ರಮಾಣೀಕರಣ: ರಾಜ್ಯ ಮಟ್ಟದಲ್ಲಿ ಪಕ್ಷಗಳು/ಜಿಲ್ಲಾ ಮಟ್ಟದಲ್ಲಿ ಅಭ್ಯರ್ಥಿಗಳು ಆಯಾ ಎಂಸಿಎಂಸಿ ಸಮಿತಿಯ ಪೂರ್ವ ಪಮಾಣೀಕರಣವಿಲ್ಲದೆ ಮತದಾನದ ದಿನ ಮತ್ತು ಚುನಾವಣಾ ಪೂರ್ವ ದಿನದಂದು ಮುದ್ರಣ ಮಾಧ್ಯಮದಲ್ಲಿ ಯಾವುದೇ ರಾಜಕೀಯ ಜಾಹೀರಾತುಗಳನ್ನು ಪ್ರಕಟಿಸುವುದನ್ನು ಭಾರತ ಚುನಾವಣಾ ಆಯೋಗ ನಿರ್ಬಂಧಿಸಿದೆ ಎಂದು ತಿಳಿಸಿದರು.

ಮತದಾನ ಕೇಂದ್ರದಿಂದ 200 ಮೀಟರ್ ವ್ಯಾಪ್ತಿಯೊಳಗೆ ಯಾವುದೇ ಚುನಾವಣಾ ಬೂತ್‌ಗಳನ್ನು ಸ್ಥಾಪಿಸಿದಂತೆ ಸೂಚನೆ ನೀಡಲಾಗಿದೆ. ಒಂದೇ ಕಟ್ಟಡ/ ಸ್ಥಳ ಅಥವಾ ಆವರಣದಲ್ಲಿ ಒಂದಕ್ಕಿಂತ ಹೆಚ್ಚು ಮತಗಟ್ಟೆಗಳನ್ನು ಸ್ಥಾಪಿಸಿದ್ದರೂ ಸಹ, ಅಂತಹ ಆವರಣದಿಂದ 200 ಮೀಟರ್‌ಗಳಷ್ಟು ದೂರದಲ್ಲಿ ಅಭ್ಯರ್ಥಿಗಳು ತಮ್ಮ ಪಕ್ಷಗಳ ತಾತ್ಕಾಲಿಕ ಕಚೇರಿಗಳನ್ನು ತೆರೆಯಲು ಅವಕಾಶವಿದೆ.

ಮತದಾನ ಕೇಂದ್ರದ ಆವರಣದ 200 ಮೀಟರ್ ಹೊರಗಿನ ಜಾಗದಲ್ಲಿ ನೆರಳಿಗಾಗಿ ತಾತ್ಕಾಲಿಕ ಟೆಂಟ್ ಹಾಕಿಕೊಳ್ಳಬಹುದಾಗಿದೆ. ಪ್ರತಿ ಬೂತ್‌ಗಳಲ್ಲಿ ಕೇವಲ ಒಂದು ಟೇಬಲ್ ಮತ್ತು ಎರಡು ಕುರ್ಚಿಗಳನ್ನು ಮಾತ್ರ ಹಾಕಲು ಅವಕಾಶವಿದೆ. ಮತದಾನದ ದಿನಾಂಕದಂದು ಮತಗಟ್ಟೆಗಳ ಸುತ್ತಲಿನ 200 ಮೀಟರ್ ಪ್ರದೇಶದಲ್ಲಿ ಯಾವುದೇ ಚುನಾವಣಾ ಪ್ರಚಾರವನ್ನು ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

# ಬಾದಾಮಿಯಲ್ಲಿ ವಿಮಾನ ನಿಲ್ದಾಣವಾಗಬೇಕಿತ್ತು: ನಿರಾಸೆ ವ್ಯಕ್ತಪಡಿಸಿದ ಸಚಿವ ತಿಮ್ಮಾಪೂರ

ಮುಧೋಳ : ಬಾದಾಮಿಯಲ್ಲಿ ವಿಮಾಣ ನಿಲ್ದಾಣವಾಗಬೇಕಂಬುದು ಎಲ್ಲರ ಆಶೆಯಾಗಿತ್ತು. ಆದರೆ ಅದು ಈಡೇರದೇ ಇರುವುದು ನಿರಾಶೆಯನ್ನುಂಟು ಮಾಡಿದೆ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ ತಿಳಿಸಿದರು.



ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಕೂಡಲ ಸಂಗಮ, ಐಹೊಳೆ, ಪಟ್ಟದಕಲ್ಲುಗಳು ಐತಿಹಾಸಿಕ ಪ್ರವಾಸಿ ಕೇಂದ್ರಗಳಾಗಿದ್ದು, ಇಲ್ಲಿ ವಿದೇಶಿಗರು ಆಗಮಿಸುತ್ತಿರುವುದರಿಂದ ಇಲ್ಲಿ ವಿಮಾನ ನಿಲ್ದಾಣವಾಗಬೇಕೆಂಬುದು ನಮ್ಮ ಆಶೆಯಾಗಿತ್ತು. ಆದರೆ ಅದು ವಿಜಾಪೂರಕ್ಕೆ ಹೋಗಿದ್ದು ನಮಗೆ ಅತ್ಯಂತ ನಿರಾಶೆಯನ್ನುಂಟು ಮಾಡಿದೆ. ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದ ಪಕ್ಷವಾಗಿದ್ದು, ಈ ಬಾರಿ ದೇಶದ ಜನತೆ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ಅಧಿಕಾರಕ್ಕೆ ತರಲಿದ್ದಾರೆಂದು ಅವರು ತಿಳಿಸಿದರು. ಅಲ್ಲದೇ ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಕಾರ್ಯವೆಂದು ಅಭಿವೃದ್ಧಿ ಪಡಿಸಬೇಕಾಗಿತ್ತು. ಆದರೆ ಅದು ಈಡೇರದೇ ಜನರಲ್ಲಿ ಬೇಸರವನ್ನುಂಟು ಮಾಡಿದೆ ಎಂದು ಅವರು ನಿರಾಶೆ ವ್ಯಕ್ತಪಡಿಸಿದರು.ಕಾಂಗ್ರೆಸ್ ಪಕ್ಷ ನೀಡಿದ ಗ್ಯಾರಂಟಿಗಳನ್ನು ಈಡೇರಿಸಿರುವ ಕಾರಣ ಕಾಂಗ್ರೆಸ್ ಗೆಲುವು ಖಚಿತ ಎಂದು ಅಥಣಿ ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅಥಣಿ ಶಾಸಕ ಲಕ್ಷ್ಮಣ ಸವದಿ ಮಾತನಾಡಿ, ಮುಖ್ಯಮಂತ್ರಿ ಸಿದ್ಧರಾಮಯ್ಯನವರ ಸರ್ಕಾರ ಎಲ್ಲ ಗ್ಯಾರಂಟಿಗಳನ್ನು ಈಡೇರಿಸಿದೆ. 120 ದಿನಗಳಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಎಲ್ಲ ಭರವಸೆಗಳನ್ನು ಈಡೇರಿಸಿದ್ದು, ರಾಜ್ಯದ ಕೋಟ್ಯಾಂತರ ಜನರಿಗೆ ಅದರಲ್ಲೂ ಬಡವರಿಗೆ, ಮಧ್ಯಮ ವರ್ಗದವರಿಗೆ ದೊರೆತಿದ್ದು, ತಮ್ಮ ಜೀವನ ನಡೆಸಲಿಕ್ಕೆ ತುಂಬಾ ಅನುಕೂಲಕರವಾಗಿವೆ. ಇದರಿಂದ ರಾಜ್ಯದ ಜನತೆ ನಮ್ಮ ಮೇಲೆ ತುಂಬಾ ಭರವಸೆ ಇಟ್ಟಿದ್ದಾರೆ. ಇಂಡಿಯಾ ಒಕ್ಕೂಟ ಗೆದ್ದ ನಂತರ ಲೋಕಸಭೆ ಚುನಾವಣೆಯಲ್ಲಿಯೂ ನೀಡಿರುವ ಐದು ಗ್ಯಾರಂಟಿಗಳನ್ನು ಕಾಂಗ್ರೆಸ್ ಪಕ್ಷ ಈಡೇರಿಸಲಿದೆ ಎಂದು ಅವರು ಭರವಸೆ ನೀಡಿದರು. ಬಾಗಲಕೋಟೆಯ ಕಾಂಗ್ರೆಸ್ ಅಭ್ಯರ್ಥಿ ಸಹೋದರಿ ಸಂಯುಕ್ತಾ ಪಾಟೀಲ ಮಹಿಳೆಯಾಗಿದ್ದು ಈ ಬಾರಿ ಅವರ ಗೆಲುವು ಖಚಿತ ಎಂದು ತಿಳಿಸಿದ ಅವರು, ಕಳೆದ 20 ವರ್ಷಗಳಿಂದಲೂ ಬಾಗಲಕೋಟೆ ಕುಡಚಿ ರೈಲು ನಿಲ್ದಾಣ ನಿರ್ಮಾಣವಾಗದೇ ಇರುವುದು, ಜಿಲ್ಲೆಯಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳಾಗದೇ ಇರುವುದು ಜನರಲ್ಲಿ ನಿರಾಶೆಯನ್ನುಂಟು ಮಾಡಿದೆ.

ದೇಶದ ದಿಕ್ಸೂಚಿ ಬದಲಾಗಿದ್ದು ಮೊನ್ನೆ ನಡೆದ ಮತದಾನದಲ್ಲಿಯೂ 11 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲ್ಲಲಿದೆ. ಉತ್ತರ ಕರ್ನಾಟಕದಲ್ಲಿ ಕಾಂಗ್ರೆಸ್ ಗೆಲುವು ಖಚಿತ. ಇಲ್ಲಿನ 14 ಕ್ಷೇತ್ರಗಳಲ್ಲಿ 10 ಕ್ಕಿಂತ ಅಧಿಕ ಸ್ಥಾನಗಳನ್ನು ಕಾಂಗ್ರೆಸ್ ಪಕ್ಷ ಕರ್ನಾಟಕದಲ್ಲಿ ಗೆಲ್ಲಲಿದೆ ಎಂದು ಆತ್ಮವಿಶ್ವಾಸ ವ್ಯಕ್ತಪಡಿಸಿದರು. ಬಾಗಲಕೋಟೆ, ವಿಜಯಪುರ, ಹಾವೇರಿ, ಗುಲಬರ್ಗಾ, ಬಳ್ಳಾರಿ, ಬೆಳಗಾವಿ, ಚಿಕ್ಕೋಡಿ, ಧಾರವಾಡ, ರಾಯಚೂರ, ಕೊಪ್ಪಳ, ದಾವಣಗೇರಿ, ಶಿವಮೊಗ್ಗ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಲಿದೆ ಎಂದು ತಿಳಿಸಿದರು.

ಬಾಗಲಕೋಟೆ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ ಮಾತನಾಡಿ, ಮುಖ್ಯಮಂತ್ರಿ ಸಿದ್ಧರಾಮಯ್ಯನವರು, ಡಿಸಿಎಂ ಡಿ.ಕೆ.ಶಿವಕುಮಾರ ಸೇರಿದಂತೆ ಎಲ್ಲ ಕಾಂಗ್ರೆಸ್ ಪಕ್ಷದ ಸಚಿವರು, ಎಲ್ಲ ಹಿರಿಯ ನಾಯಕರು, ಮುಖಂಡರು, ಕಾರ್ಯಕರ್ತರು ನನಗೆ ಅತ್ಯಂತ ಹುರುಪಿನಿಂದ ಬೆಂಬಲ ವ್ಯಕ್ತಪಡಿಸುತ್ತಿದ್ದು, ಎಲ್ಲ ಹಿರಿಯರ ಆಶೀರ್ವಾದದಿಂದ ನಾನು ಗೆಲುವು ಸಾಧಿಸುತ್ತೇನೆ ಎಂದು ತಿಳಿಸಿದರು.

# ದಾವಣಗೆರೆ: ಚಲಿಸುತ್ತಿದ್ದ ಕಾರಿನ ಟೈರ್ ಸ್ಫೋಟ; ಸ್ಥಳದಲ್ಲಿಯೇ ಇಬ್ಬರ ಸಾವು




ದಾವಣಗೆರೆ: ಚಲಿಸುತ್ತಿದ್ದ ಕಾರಿನ ಟೈರ್ ಸ್ಫೋಟಗೊಂಡ ಪರಿಣಾಮ ಸ್ಥಳದಲ್ಲಿಯೇ ಇಬ್ಬರ ಸಾವನ್ನಪ್ಪಿರುವ ಘಟನೆ ದಾವಣಗೆರೆ ತಾಲೂಕಿನ ಹುಣಸೇಕಟ್ಟೆ ಬಳಿ ಭಾನುವಾರ ರಾತ್ರಿ ನಡೆದಿದೆ.

ಟೈರ್ ಸಿಡಿದ ರಭಸಕ್ಕೆ ಸೇತುವೆ ಮೇಲಿಂದ ಕಾರು ಉರುಳಿ ಬಿದ್ದ ಪರಿಣಾಮ ಇಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದು ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ. ದಾವಣಗೆರೆಯ ಹರಿಹರ ತಾಲ್ಲೂಕಿನ ಸಾರಥಿ ಗ್ರಾಮದ ನಿವಾಸಿ ಕೊಟ್ರೇಶಪ್ಪ (60) ಹುಬ್ಬಳ್ಳಿಯ ಈರಮ್ಮ (54) ಮೃತಪಟ್ಟವರು. ಗಾಯಗೊಂಡ ನಾಲ್ವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ,

ದಾವಣಗೆರೆಯ ಕೆಎಚ್‌ಬಿ ಕಾಲೊನಿಯ ನಿವಾಸಿ ಕೊಟ್ರೇಶಪ್ಪ ಮದುವೆ ಮುಗಿಸಿ ಕೊಂಡು ಈರಮ್ಮ ಅವರ ಜೊತೆ ತೆರಳುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದೆ.

ಅತಿ ವೇಗವಾಗಿ ಚಲಿಸುತ್ತಿದ್ದ ಕಾರಿನ ಟೈರ್ ಒಮ್ಮೆಲೆ ಸ್ಫೋಟಗೊಂಡಿದೆ. ಆಗ ನಿಯಂತ್ರಣ ತಪ್ಪಿ ಸೇತುವೆ ಮೇಲಿಂದ ಕಾರು ಪಲ್ಟಿಯಾಗಿದೆ. ಈ ಬಗ್ಗೆ ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಹಿಳೆ ಅಪಹರಣ ಪ್ರಕರಣ: ಬೆಂಗಳೂರಿನ ರೇವಣ್ಣ ನಿವಾಸದಲ್ಲಿ ಎಸ್ಐಟಿ ಸ್ಥಳ ಮಹಜರು

ಬೆಂಗಳೂರು: ಮಹಿಳೆಯೊಬ್ಬರ ಅಪಹರಣ ಹಾಗೂ ಅಕ್ರಮ ಬಂಧನಕ್ಕೆ ಸಂಬಂಧಿಸಿದಂತೆ ಜೆಡಿಎಸ್ ಶಾಸಕ ಹೆಚ್ ಡಿ ರೇವಣ್ಣ ವಿರುದ್ಧದ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ ಬೆಂಗಳೂರಿನ ಬಸವನಗುಡಿಯಲ್ಲಿರುವ ಅವರ ನಿವಾಸದಲ್ಲಿ ಸೋಮವಾರ ಸ್ಥಳ ಮಹಜರು ನಡೆಸಿತು.

ರೇವಣ್ಣ ಕುಟುಂಬದವರ ಅನುಪಸ್ಥಿತಿಯಲ್ಲಿ ನಡೆದ ಸ್ಥಳ ಪರಿಶೀಲನೆಗೆ ಅವರ ಪರ ವಕೀಲ ಗೋಪಾಲ್ ಅವರನ್ನು ಎಸ್ಐಟಿ ತಂಡ ಕರೆಸಿತ್ತು. ಎರಡು ದಿನಗಳ ಹಿಂದೆ ಹಾಸನ ಜಿಲ್ಲೆಯ ಹೊಳೆನರಸೀಪುರದಲ್ಲಿರುವ ರೇವಣ್ಣ ಅವರ ಮನೆಯಲ್ಲಿಯೂ ಸ್ಥಳ ಮಹಜರು ನಡೆಸಲಾಗಿತ್ತು.

ರೇವಣ್ಣ ಎರಡು ಪ್ರಕರಣಗಳನ್ನು ಎದುರಿಸುತ್ತಿದ್ದಾರೆ. ಮನೆಕೆಲಸದವರಿಗೆ ಕಿರುಕುಳ ನೀಡಿದ ಪ್ರಕರಣದಲ್ಲಿ ರೇವಣ್ಣ ಅವರ ಪುತ್ರ ಪ್ರಜ್ವಲ್ ಕೂಡ ಆರೋಪಿಯಾಗಿದ್ದಾರೆ. ಎರಡನೆಯದು ಮೇ 2 ರಂದು ದಾಖಲಾಗಿರುವ ಅಪಹರಣ ಪ್ರಕರಣವಾಗಿದೆ.

ಪ್ರಜ್ವಲ್ ರೇವಣ್ಣ ವಿರುದ್ಧದ ಅತ್ಯಾಚಾರ ಆರೋಪದ ವಿಡಿಯೋಗಳು ವೈರಲ್ ಆದ ಬಳಿಕ ರೇವಣ್ಣ ಅವರ ಆಪ್ತ ಸತೀಶ್ ಬಾಬಣ್ಣ ಏಪ್ರಿಲ್ 29 ರಂದು ತನ್ನ ತಾಯಿಯನ್ನು ಬೈಕ್ ನಲ್ಲಿ ಕರೆದೊಯ್ದು ಅಕ್ರಮ ಬಂಧನದಲ್ಲಿಟ್ಟಿದ್ದಾರೆ ಎಂದು ಸಂತ್ರಸ್ತೆಯ ಮಗ ಮೈಸೂರಿನ. ಕೆ.ಆರ್. ನಗರ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು.

ಆ ಮಹಿಳೆಯನ್ನು ರಕ್ಷಿಸಿರುವ ಎಸ್ ಐಟಿ, ಆಕೆಗೆ ಆಕೆಗೆ ಲೈಂಗಿಕ ದೌರ್ಜನ್ಯವೆಸಗಲಾಗಿದೆ ಎನ್ನಲಾದ ಸ್ಥಳಗಳಲ್ಲಿ ಪರಿಶೀಲನೆ ನಡೆಸುತ್ತಿದೆ. ಪ್ರಜ್ವಲ್ ರೇವಣ್ಣ ಅನೇಕ ಮಹಿಳೆಯರಿಗೆ ಅತ್ಯಾಚಾರ, ಲೈಂಗಿಕ ಕಿರುಕುಳ ನೀಡಿದ್ದಾರೆ ಎನ್ನಲಾದ ಅನೇಕ ವಿಡಿಯೋಗಳು ಹಾಗೂ ಫೋಟೋಗಳು ವೈರಲ್ ಆಗಿವೆ. ಎಸ್ಐಟಿ ಇಬ್ಬರು ದೂರುದಾರರನ್ನು ಅತ್ಯಾಚಾರ ಮತ್ತು ಕಿರುಕುಳ ನಡೆದ ವಿವಿಧ ಸ್ಥಳಗಳಿಗೆ ಕರೆದೊಯ್ದಿದೆ.

# ಬಾದಾಮಿಯಲ್ಲಿ ವಿಮಾನ ನಿಲ್ದಾಣವಾಗಬೇಕಿತ್ತು: ನಿರಾಸೆ ವ್ಯಕ್ತಪಡಿಸಿದ ಸಚಿವ ತಿಮ್ಮಾಪೂರ

ಚುನಾವಣಾ ಬಾಂಡ್ ಬಳಿಕ ಪಿಎಂ ಕೇರ್ಸ್ ಫಂಡ್ ಮೇಲೂ ಅನುಮಾನ: ತನಿಖೆಗೆ ಆಗ್ರಹ

ಬೆಂಗಳೂರು: ಚುನಾವಣಾ ಬಾಂಡ್‌ಗಳು ಅಸಂವಿಧಾನಿಕ ಎಂದು ಘೋಷಿಸಲ್ಪಟ್ಟ ಬೆನ್ನಲ್ಲೇ, ಪಿಎಂ ಕೇರ್ಸ್ ಫಂಡ್ ಬಗ್ಗೆಯೂ ಇದೀಗ ಅನುಮಾನಗಳು ಮೂಡತೊಡಗಿದ್ದು, ಇದರ ಬಗ್ಗೆಯೂ ತನಿಖೆ ನಡಸಬೇಕೆಂದು ಹಲವರು ಆಗ್ರಹಿಸುತ್ತಿದ್ದಾರೆ.

ಚುನಾವಣಾ ಬಾಂಡ್‌ಗಳ ಮೂಲಕ ಪಾರದರ್ಶಕತೆಯನ್ನು ತಂದಿದ್ದೇನೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದರು, ಆದರೆ, ಹಗರಣ ಬಯಲಿಗೆ ಬಂದಿದೆ. ಇದೀಗ ಪಿಎಂ ಕೇರ್ಸ್ ನಿಧಿಯನ್ನು ಯಾವುದಕ್ಕೆ ಬಳಸಲಾಗುತ್ತಿದೆ, ಯಾವ ಉದ್ದೇಶಕ್ಕೆ ಎಷ್ಟು ಖರ್ಚು ಮಾಡಲಾಗಿದೆ ಎಂಬುದನ್ನು ತಿಳಿದುಕೊಳ್ಳುವ ಹಕ್ಕು ಸಾರ್ವಜನಿಕರಿಗೆ ಇದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಹೇಳಿದ್ದಾರೆ.

ಕಲ್ಯಾಣ ಯೋಜನೆಗಳ ಹಣ ಆರ್–ಎಸ್‌ಎಸ್‌ಗೆ ಹೋಗಿವೆ. ಇಂದು, ಆರ್–ಎಸ್‌ಎಸ್ ಸೈನಿಕ ಶಾಲೆಗಳು ಮತ್ತು ಕೇಂದ್ರೀಯ ವಿದ್ಯಾಲಯಗಳ ಮೇಲೆ ನೇರ ಅಥವಾ ಪರೋಕ್ಷ ನಿಯಂತ್ರಣವನ್ನು ಹೊಂದಿದೆ. ಸರಕಾರ ಹಲವಾರು




ಶಾಲೆಗಳನ್ನು ಅವರಿಗೆ ಹಸ್ತಾಂತರಿಸಿದೆ. ಅದು ಯಾರ ಆಸ್ತಿ? ಖಾಸಗಿ ಸಂಸ್ಥೆಗಳಿಗೆ ಶಾಲೆಗಳ ನಿಯಂತ್ರಣವನ್ನು ನೀಡಿದರೆ, ಮೀಸಲಾತಿ ಏನಾಗುತ್ತದೆ? ಇಂತಹ ಶಾಲೆಗಳಲ್ಲಿ ಬಡವರಿಗೆ ಸೀಟು ಕೊಡುತ್ತಾರೆಯೇ? ಮೋದಿಯವರು ಬಡವರ ಆಶಾಭಾವನೆಗಳನ್ನು ನಾಶಮಾಡಿ ಈ ದೇಶವನ್ನು ಶ್ರೀಮಂತರ ಕೈಗೆ ಕೊಡುತ್ತಿದ್ದಾರೆ. ಇಲ್ಲಿಯವರೆಗೆ, ಅವರು ಎಷ್ಟು ಖರ್ಚು ಮಾಡಿದ್ದಾರೆ ಎಂಬುದಕ್ಕೆ ಯಾವುದೇ ಲೆಕ್ಕವನ್ನು ತೋರಿಸಿಲ್ಲ, ಯಾರು ಎಷ್ಟು ಕೊಡುಗೆ ನೀಡಿದ್ದಾರೆ ಎಂಬುದು ಯಾರಿಗೂ ತಿಳಿದಿಲ್ಲ. ಎಲೆಕ್ಟೋರಲ್ ಬಾಂಡ್‌ಗಳಂತೆ ಯಾವುದೇ ಮಾಹಿತಿಗಳಿಲ್ಲದಂತಾಗಿದೆ ಎಂದು ತಿಳಿಸಿದ್ದಾರೆ.

ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಾಧೀಶ ಜಸ್ಟಿಸ್ ಮದನ್ ಲೋಕೂರ್ ಅವರು ಮಾತನಾಡಿ, ಪಾರದರ್ಶಕತೆ ಇರಬೇಕು. ಖಾಸಗಿ ಟ್ರಸ್ಟ್‌ಗಳೊಂದಿಗೆ ವ್ಯವಹರಿಸುವ ಸಕ್ಷಮ ಪ್ರಾಧಿಕಾರವು ಇದನ್ನು ಈ ಕೆಲಸವನ್ನು ಮಾಡಬೇಕು ಎಂದು ಹೇಳಿದ್ದಾರೆ.

ರಾಜ್ಯಸಭಾ ಸಂಸದ ಮತ್ತು ಮಾಜಿ ಕೇಂದ್ರ ಸಚಿವ ಕಪಿಲ್ ಸಿಬಲ್ ಅವರೂ ಕೂಡ ಪಿಎಂ ಕೇರ್ಸ್ ಫಂಡ್ ಕುರಿತು ಟೀಕೆ ಮಾಡಿದ್ದಾರೆ.

ಇದು ಸಾರ್ವಜನಿಕ ಹಣ, ಸಾರ್ವಜನಿಕ ವೆಚ್ಚಕ್ಕಾಗಿ, ಮತ್ತು ಸಾರ್ವಜನಿಕ ಪರಿಶೀಲನೆಗೆ ಒಳಪಟ್ಟಿರಬೇಕು. ಆದರೆ, ಎಲೆಕ್ಟೋರಲ್ ಬಾಂಡ್‌ಗಳಂತೆ ಅದನ್ನು ಮುಚ್ಚಿಡಲಾಗಿದೆ. ದಾನಿಗಳ ಹೆಸರನ್ನು ಸಾರ್ವಜನಿಕಗೊಳಿಸಿದರೆ ಏನು ಬಹಿರಂಗಗೊಳ್ಳುತ್ತದೆ ಎಂಬುದು ನನ್ನಲ್ಲಿ ಮೂಡಿರುವ ಪ್ರಶ್ನೆ ಎಂದು ಹೇಳಿದ್ದಾರೆ.

ಇದು ಪ್ರಧಾನಿಮಂತ್ರಿಗಳ ಅತ್ಯಂತ ಭ್ರಷ್ಟ ಚಟುವಟಿಕೆಯಾಗಿದೆ. ಖಾತೆಯನ್ನು ರಚಿಸುವ ಮತ್ತು ನಿರ್ವಹಿಸುವ ವಿಧಾನವು ಭ್ರಷ್ಟಚಾರದಿಂದ ಕೂಡಿದೆ ಎಂಬುದನ್ನು ಇದು ತೋರಿಸುತ್ತದೆ ಎಂದು ಸಂವಿಧಾನದ ನಡವಳಿಕೆ ಗುಂಪಿನ ಭಾಗವಾಗಿರುವ ಮಾಜಿ ಹಿರಿಯ ಐಎಎಸ್ ಅಧಿಕಾರಿ ಎಂ.ಜಿ.ದೇವಸಹಾಯಂ ಅವರು ಹೇಳಿದ್ದಾರೆ,

ಯಾವುದೇ ನಿಧಿ ಸಂಗ್ರಹವು ಪಾರದರ್ಶಕವಾಗಿರಬೇಕು. ಈ ಅಪಾರದರ್ಶಕತೆಯು ಸಾಂಸ್ಥಿಕ ಕುಸಿತವನ್ನು ತೋರಿಸುತ್ತದೆ. ಸರ್ಕಾರದ ಲೆಕ್ಕಪರಿಶೋಧನೆ ಮತ್ತು ಆರ್ಟಿಐ ರಹಸ್ಯವನ್ನು ಮಾಡುತ್ತಿರುವುದೇಕೆ? ಪಕ್ಷಕ್ಕಿಂತ ದೊಡ್ಡವರಂತೆ ಕಾಣುವ ಪ್ರಧಾನಿಯವರ ವ್ಯಕ್ತಿತ್ವ ವಿಕಸನಕ್ಕೆ ಈ ಹಣವನ್ನು ಬಳಸಲಾಗಿದೆಯೇ? ಎಂದು ಪ್ರಶ್ನಿಸಿದರು.

ರಾಜಕೀಯ ಅರ್ಥಶಾಸ್ತ್ರಜ್ಞ ಪರಕಾಲ ಪ್ರಭಾಕರ್ ಮಾತನಾಡಿ, ಪಿಎಂ ಕೇರ್ಸ್ ನಿಧಿಯು ಪ್ರಧಾನ ಮಂತ್ರಿಗಳ ಕಚೇರಿ, ಸೌತ್ ಬ್ಲಾಕ್, ನವದೆಹಲಿಯಲ್ಲಿದೆ, ಇದು ಅಧಿಕೃತ ಭಾರತೀಯ ಲಾಂಛನವನ್ನು ಬಳಸುತ್ತದೆ ಮತ್ತು ಅದರ ವೆಬ್ ವಿಳಾಸವು ಐಇಚಿ.ಟಿ ಆಗಿದೆ, ಆದ್ದರಿಂದ ಸರ್ಕಾರವು ಅದನ್ನು ಹೇಗೆ ಸಮರ್ಥಿಸಿಕೊಳ್ಳುತ್ತದೆ? ಖಖಿಖ ಅಡಿಯಲ್ಲಿ ಬರುವುದೇ? ಶೀಘ್ರದಲ್ಲೇ ಬಯಲಿಗೆ ಬರುವ ಬಹುದೊಡ್ಡ ಹಗರಣ ಇದಾಗಿದ್ದು, ಇದು ಚುನಾವಣಾ ಬಾಂಡ್‌ಗಳಿಗಿಂತ ದೊಡ್ಡ ಹಗರಣವಾಗಿರಬಹುದು. ಸರ್ಕಾರಿ ನೌಕರರು ಒಂದು ದಿನದ ಸಂಬಳವನ್ನು ದಾನ ಮಾಡಿದ್ದಗವು, ಪಿಎಸ್ಯುಗಳಿಂದ ಸಿಎಸ್‌ಆರ್ ಹಣವನ್ನು ವರ್ಗಾಯಿಸಲಾಗಿತ್ತು. ಸರಕಾರ ಎಲ್ಲಿಂದ ಹಣ ಪಡೆಯುತ್ತಿದೆ, ಯಾವುದಕ್ಕೆ ಖರ್ಚು ಮಾಡುತ್ತಿದೆ ಎನ್ನುವುದನ್ನು ಹೇಳುತ್ತಿಲ್ಲ ಎಂದು ಹೇಳಿದ್ದಾರೆ.

ಈ ನಡುವೆ ಖರ್ಗೆ ಅವರ ಆರೋಪಕ್ಕೆ ಪ್ರತಿಕ್ರಿಯಿಸಿದ ಬಿಜೆಪಿ ಮಾಜಿ ಮಾಧ್ಯಮ ಸಂಯೋಜಕ ಎಸ್ ಪ್ರಕಾಶ್ ಅವರು, ರಾಜ್ಯಸಭೆಯಲ್ಲಿ ಪ್ರತಿಪಕ್ಷ ನಾಯಕನಾಗಿ ಅವರು ಜವಾಬ್ದಾರಿಯುತವಾಗಿ ಪ್ರತಿಕ್ರಿಯಿಸುವ ನಿರೀಕ್ಷೆಯಿದೆ. ಪ್ರತಿ ವರ್ಷ, ಕಂ ಕೇರ್ಸ್ ಫಂಡ್ ಅನ್ನು ಸ್ವತಂತ್ರ ಲೆಕ್ಕಪರಿಶೋಧಕರು ಆಡಿಟ್ ಮಾಡುತ್ತಾರೆ. ಎಲ್ಲವನ್ನೂ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗುತ್ತದೆ. ಖರ್ಗೆಯವರು ಸಮಯ ತೆಗೆದುಕೊಂಡು ಅದನ್ನು ಓದಬೇಕು ಎಂದು ಹೇಳಿದ್ದಾರೆ.

# ವಾಣಿಜ್ಯ ವಾಹನಗಳ ಖರೀದಿಗೆ ತಡೆಯಿಲ್ಲದ ಹಣಕಾಸು ಸೌಲಭ್ಯಕ್ಕಾಗಿ ಟಾಟಾ ಮೋಟರ್ಸ್ ಮತ್ತು ಸೌತ್ ಇಂಡಿಯನ್ ಬ್ಯಾಂಕ್ ಒಪ್ಪಂದ

ಬೆಂಗಳೂರು: ಭಾರತದ ಅತಿ ದೊಡ್ಡ ವಾಣಿಜ್ಯ ವಾಹನಗಳ ತಯಾರಿಕಾ ಸಂಸ್ಥೆಯಾದ ಟಾಟಾ ಮೋಟರ್ಸ್ ತನ್ನ ವಾಣಿಜ್ಯ ವಾಹನಗಳ ಗ್ರಾಹಕರು ಮತ್ತು ಡೀಲರ್ ಶಿಪ್ ಗಳಿಗೆ ಅನುಕೂಲಕರವಾದ ಹಣಕಾಸು ಪರಿಹಾರಗಳನ್ನು ಒದಗಿಸುವ ನಿಟ್ಟಿನಲ್ಲಿ ಸೌತ್ ಇಂಡಿಯನ್ ಬ್ಯಾಂಕ್ ಜೊತೆ ಒಪ್ಪಂದ ಮಾಡಿಕೊಂಡಿದೆ. ಈ ಒಪ್ಪಂದದ ಪ್ರಕಾರ ಸೌತ್ ಇಂಡಿಯನ್ ಬ್ಯಾಂಕ್ ಟಾಟಾ ಮೋಟರ್ಸ್ ನ ಎಲ್ಲಾ ರೀತಿಯ ವಾಣಿಜ್ಯ ವಾಹನಗಳಿಗೆ ಹಣಕಾಸು ಸೌಲಭ್ಯ ಅಂದರೆ ಸಾಲ ಸೌಲಭ್ಯವನ್ನು ಕಲ್ಪಿಸಲಿದೆ. ದೇಶಾದ್ಯಂತ ಬ್ಯಾಂಕ್ ವಿಸ್ತಾರವಾದ ಜಾಲವನ್ನು ಹೊಂದಿರುವ ಹಿನ್ನೆಲೆಯಲ್ಲಿ ಗ್ರಾಹಕರು ಸುಲಭವಾಗಿ ಈ ಸಾಲ ಸೌಲಭ್ಯದ ಪ್ರಯೋಜನವನ್ನು ಪಡೆಯಲಿದ್ದಾರೆ ಮತ್ತು ಸುಲಭ ಕಂತುಗಳ ಮರುಪಾವತಿ ಯೋಜನೆಗಳನ್ನೂ ಪಡೆದುಕೊಳ್ಳಲಿದ್ದಾರೆ. ಡೀಲರ್ ಶಿಪ್ ಗಳಿಗೆ ವರ್ಧಿತ ಬೆಂಬಲ ಒದಗಿಸುವುದು, ಅವುಗಳ ಬೆಳವಣಿಗೆಗೆ ಉತ್ತೇಜನ ನೀಡುವುದು, ಸಾಲಕ್ಕೆ ಮೇಲಾಧಾರದ ಅಗತ್ಯತೆಗಳನ್ನು ಕಡಿಮೆ ಮಾಡುವುದು, ಬಡ್ಡಿ ದರವನ್ನು ಕಡಿಮೆ ಮಾಡುವುದು ಹಾಗೂ ಕ್ರೆಡಿಟ್ ಪ್ರೊಸೆಸಿಂಗ್ ಅನ್ನು ವ್ಯವಸ್ಥಿತಗೊಳಿಸುವ ನಿಟ್ಟಿನಲ್ಲಿ ಈ ಒಪ್ಪಂದ ಗಮನಾರ್ಹ ಹೆಜ್ಜೆಯಾಗಿದೆ.

ಈ ಬೆಳವಣಿಗೆ ಬಗ್ಗೆ ಮಾತನಾಡಿದ ಸೌತ್ ಇಂಡಿಯನ್ ಬ್ಯಾಂಕ್ ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪಿ.ಆರ್.ಶೇಷಾದ್ರಿ ಅವರು, "ಸೌತ್ ಇಂಡಿಯನ್ ಬ್ಯಾಂಕಿನಲ್ಲಿ ಫ್ಲೀಟ್ ಮಾಲೀಕರು ಮತ್ತು ಡೀಲರ್ ಶಿಪ್ ಗಳ ಅಗತ್ಯತೆಗಳಿಗೆ ಅನುಗುಣವಾಗಿ ಸುರಕ್ಷಿತ, ಚುರುಕಾದ ಮತ್ತು ಕ್ರಿಯಾತ್ಮಕವಾದ ಬ್ಯಾಂಕಿಂಗ್ ಪರಿಸರ ವ್ಯವಸ್ಥೆಯನ್ನು ಬೆಳೆಸಲು ನಾವು ಬದ್ಧರಾಗಿದ್ದೇವೆ. ಟಾಟಾ ಮೋಟರ್ಸ್ ನೊಂದಿಗೆ ನಾವು ಮಾಡಿಕೊಂಡಿರುವ ಒಪ್ಪಂದವು ವಾಣಿಜ್ಯ ವಾಹನಗಳ ವಿತರಕರು ಮತ್ತು ಗ್ರಾಹಕರಿಗೆ ತಡೆರಹಿತವಾದ ವಾಹನ ಹಣಕಾಸು ಪರಿಹಾರಗಳನ್ನು ಒದಗಿಸಲು ನಮಗೆ ಅನುವು ಮಾಡಿಕೊಡುತ್ತದೆ. ಟಾಟಾ ಮೋಟರ್ಸ್ ನೊಂದಿಗಿನ ಈ ಸಹಭಾಗಿತ್ವವು ಅತ್ಯುತ್ತಮ ವರ್ಗದ ಹಣಕಾಸು ಪರಿಹಾರಗಳನ್ನು ಒದಗಿಸುವ ನಿಟ್ಟಿನಲ್ಲಿ ದಿಟ್ಟ ಹೆಜ್ಜೆಯಾಗಿದೆ. ಅಲ್ಲದೇ, ಉತ್ಕೃಷ್ಟತೆಗೆ ಹೊಸ ಉದ್ಯಮದ ಮಾನದಂಡಕ್ಕೆ ಅನುಗುಣವಾಗಲಿದೆ ಎಂಬ ವಿಶ್ವಾಸ ನಮಗಿದೆ" ಎಂದು ತಿಳಿಸಿದರು.

ಈ ಸಹಭಾಗಿತ್ವದ ಬಗ್ಗೆ ಮಾತನಾಡಿದ ಟಾಟಾ ಮೋಟರ್ಸ್ ವಾಣಿಜ್ಯ ವಾಹನಗಳ ವಿಭಾಗದ ಉಪಾಧ್ಯಕ್ಷ & ಬ್ಯುಸಿನೆಸ್ ಹೆಡ್ ರಾಜೇಶ್ ಕೌಲ್ ಅವರು, "ಭಾರತದ ಹೆಸರಾಂತ ಬ್ಯಾಂಕುಗಳಲ್ಲಿ ಒಂದಾಗಿರುವ ಸೌತ್ ಇಂಡಿಯನ್ ಬ್ಯಾಂಕ್ ನೊಂದಿಗೆ ಸಹಭಾಗಿತ್ವ ಮಾಡಿಕೊಳ್ಳುತ್ತಿರುವುದಕ್ಕೆ ನಮಗೆ ಅತೀವ ಸಂತಸವೆನಿಸುತ್ತಿದೆ. ನಮ್ಮ ಗ್ರಾಹಕರ ಅಗತ್ಯಗಳನ್ನು ಅರ್ಥ ಮಾಡಿಕೊಳ್ಳುವ ಬ್ಯಾಂಕ್ ಇದಾಗಿದ್ದು, ಈ ಸಹಭಾಗಿತ್ವದ ಮೂಲಕ ಈ ಬ್ಯಾಂಕಿನಿಂದ ಗ್ರಾಹಕರು ತಮ್ಮ ವಾಣಿಜ್ಯ ವಾಹನಗಳ ಖರೀದಿಗೆ ಹಣಕಾಸು ಸೌಲಭ್ಯಗಳನ್ನು ಸುಲಭವಾಗಿ ಪಡೆದುಕೊಳ್ಳಲು ಸಾಧ್ಯವಾಗಲಿದೆ. ಫ್ಲೀಟ್ ಮಾಲೀಕರು ಮತ್ತು ಡೀಲರ್ ಶಿಪ್ ಗಳು ತಮ್ಮ ವ್ಯವಹಾರ ಗುರಿಗಳನ್ನು ಸಾಧಿಸಲು ಈ ನಮ್ಮ ಸಹಭಾಗಿತ್ವವು ನೆರವಾಗಲಿದೆ. ನಮ್ಮ ಮೌಲ್ಯಾಧಾರಿತ ಗ್ರಾಹಕರು ಮತ್ತು ಪಾಲುದಾರರಿಗೆ ಅತ್ಯದ್ಭುತವಾದ ಅನುಕೂಲ ಮತ್ತು ಬೆಂಬಲವನ್ನು ನೀಡುವ ದಿಸೆಯಲ್ಲಿ ನಾವು ಎದುರು ನೋಡುತ್ತಿದ್ದೇವೆ" ಎಂದರು.

ಟಾಟಾ ಮೋಟರ್ಸ್ ಸಬ್–1–ಟನ್ ನಿಂದ 55 ಟನ್ ವರೆಗಿನ ಸರಕು ಸಾಗಣೆ ವಾಹನಗಳು, 10 ಆಸನಗಳಿಂದ 51 ಆಸನಗಳ ಪ್ರಯಾಣಿಕ ಸಾರಿಗೆ ವಾಹನಗಳನ್ನು ತಯಾರಿಸುತ್ತಿದೆ. ಸಣ್ಣ ವಾಣಿಜ್ಯ ವಾಹನಗಳು, ಪಿಕಪ್ಸ್, ಟ್ರಕ್ ಗಳು ಮತ್ತು ಬಸ್ ಗಳನ್ನು ಒದಗಿಸುವ ಮೂಲಕ ಲಾಜಿಸ್ಟಿಕ್ ಮತ್ತು ಸಾರ್ವಜನಿಕ ಸಾರಿಗೆ ವಿಭಾಗಗಳ ಅಗತ್ಯತೆಗಳನ್ನು ಪೂರೈಸುತ್ತಿದೆ. ಕಂಪನಿಯು ದೇಶಾದ್ಯಂತ ನುರಿತ ಪರಿಣಗತರನ್ನೊಳಗೊಂಡ ತನ್ನ 2500+ ಟಚ್ ಪಾಯಿಂಟ್ ಗಳಸರಿಸಾಟಿಯಿಲ್ಲದ ಗುಣಮಟ್ಟ ಮತ್ತು ಸೇವಾ ಬದ್ಧತೆಯನ್ನು ನೀಡುತ್ತಾ ಬಂದಿದೆ. ಇದರ ಜೊತೆಗೆ ಟಾಟಾ ಜೆನ್ಯುನ್ ಪಾರ್ಟ್ಸ್ ಗಳನ್ನು ಸುಲಭವಾಗಿ ಲಭ್ಯವಾಗುವಂತೆ ಮಾಡುವ ಮೂಲಕ ಗ್ರಾಹಕರ ಅಗತ್ಯಗಳನ್ನು ಪೂರೈಸುತ್ತಿದೆ.

ದೇಶಾದ್ಯಂತ ಇರುವ ಡೀಲರ್ ಗಳಿಗೆ ಸವತ್ ಇಂಡಿಯನ್ ಬ್ಯಾಂಕ್ ಸರಿಸಾಟಿಯಿಲ್ಲದ ಡೀಲರ್ ಹಣಕಾಸು ಸೌಲಭ್ಯವನ್ನು ನೀಡಲಿದೆ. ತನ್ನ ವ್ಯಾಪಕವಾದ ಶಾಖೆಯ ಜಾಲವನ್ನು ಮತ್ತು ಉದ್ಯಮದ ಆಳವಾದ ತಿಳುವಳಿಕೆಯನ್ನು ಬಳಸಿಕೊಂಡು ಡೀಲರ್ ಶಿಪ್ ಗಳಿಗೆ ಹೊಂದಿಕೆಯಾಗುವ ರೀತಿಯಲ್ಲಿ ಸ್ಪರ್ಧಾತ್ಮಕವಾದ ಹಣಕಾಸು ಸೇವೆಗಳನ್ನು ಒದಗಿಸಲಿದೆ. ಆಕರ್ಷಕ ಬಡ್ಡಿ ದರಗಳು, ಗ್ರಾಹಕರಿಗೆ ಹೊಂದಿಕೊಳ್ಳುವಂತಹ ನಿಯಮಗಳು ಮತ್ತು ದಕ್ಷ ಪ್ರಕ್ರಿಯೆಗಳೊಂದಿಗೆ ಡೀಲರ್ ಗಳ ಬೆಳವಣಿಗೆಯನ್ನು ಬ್ಯಾಂಕ್ ಬೆಂಬಲಿಸುತ್ತದೆ. ಇದು ವಿಶ್ವಾಸಾರ್ಹವಾದ ಹಣಕಾಸಿನ ಬೆಂಬಲವನ್ನು ಬಯಸುವ ಡೀಲರ್ ಗಳಿಗೆ ಆದ್ಯತೆಯ ಆಯ್ಕೆಯಾಗಿದೆ.

## ನನ್ನ ಕನಸಿನ ಬೆಳಗಾವಿ ನಿರ್ಮಾಣಕ್ಕೆ ಬೆಂಬಲಿಸಿ: ಮೃಣಾಲ ಹೆಬ್ಬಾಳಕರ್ ಮನವಿ



ಬೆಳಗಾವಿ : ಬೆಳಗಾವಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ನೂರೊಂದು ಕನಸು ಕಟ್ಟಿಕೊಂಡಿದ್ದೇನೆ. ಜಿಲ್ಲೆಯ ಬಗ್ಗೆ ದೂರದೃಷ್ಟಿ ಹೊಂದಿದ್ದು, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ನನ್ನ ತಾಯಿ ಹಾಗೂ ಸಚಿವರು ಆದ ಲಕ್ಷ್ಮೀ ಹೆಬ್ಬಾಳಕರ್ ಮತ್ತು ತಜ್ಞರ ಮಾರ್ಗದರ್ಶನದಲ್ಲಿ ಜಿಲ್ಲೆಯ ಅಭಿವೃದ್ಧಿಗೆ ಕಾರ್ಯ ನಿರ್ವಹಿಸುವೆ ಎಂದು ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಮನವಿ ಮಾಡಿದ್ದಾರೆ.

ಈ ಕುರಿತು ಹೇಳಿಕೆಯೊಂದನ್ನು ಬಿಡುಗಡೆ ಮಾಡಿರುವ ಅವರು, ಈ ಚುನಾವಣೆ ಜಿಲ್ಲೆಯ ಅಸ್ಮಿತೆ ಹಾಗೂ ಸ್ವಾಭಿಮಾನದ ವಿಷಯ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವುದರಿಂದ ಹೆಚ್ಚು ಅನುದಾನ ತರಲು ಅನುಕೂಲ ಆಗಲಿದೆ. ನಮ್ಮ ಜಿಲ್ಲೆ ಕರ್ನಾಟಕದ ಎರಡನೇ ರಾಜಧಾನಿ ಎನಿಸಿಕೊಂಡರೂ ನಾವು ನಿರೀಕ್ಷಿಸಿದಷ್ಟು ಅಭಿವೃದ್ಧಿಯಾಗಿಲ್ಲ. ಜಿಲ್ಲೆಗೆ ಆಗಬೇಕಿರುವ ಕೆಲಸಗಳ ಕುರಿತು ನನಗೆ ಅರಿವಿದ್ದು, ಅಭಿವೃದ್ಧಿಯೇ ನನ್ನ ಮಂತ್ರವಾಗಲಿದೆ ಎಂದು ಮೃಣಾಲ್ ಹೆಬ್ಬಾಳಕರ್ ತಿಳಿಸಿದ್ದಾರೆ.

ಕೇಂದ್ರದಲ್ಲಿ ಕರ್ನಾಟಕದ ಧ್ವನಿಯಾಗಿ ಕೆಲಸ ಮಾಡುವ ಹಂಬಲ ಹೊಂದಿದ್ದೇನೆ. ಕರ್ನಾಟಕಕ್ಕೆ ಅನ್ಯಾಯವಾದರೆ, ಇದನ್ನು ಕಟ್ಟುವಾಗಿ ವಿರೋಧಿಸುವೆ. ಕರ್ನಾಟಕಕ್ಕೆ, ಬೆಳಗಾವಿಗೆ ಆಗುತ್ತಿರುವ ಅನ್ಯಾಯದ ವಿರುದ್ಧ ಧ್ವನಿ ಎತ್ತಿ, ನ್ಯಾಯ ದೊರಕಿಸಿ ಕೊಡುವೆ ಎಂದು ಹೇಳಿದ್ದಾರೆ.

ವರ್ಷದ ಹಿಂದೆ ಬಿಜೆಪಿ ಬಿಟ್ಟು ಕಾಂಗ್ರೆಸ್ ಪಕ್ಷಕ್ಕೆ ಬಂದ ಜಗದೀಶ್ ಶೆಟ್ಟರ್ ಅವರನ್ನು ಚೆನ್ನಾಗಿಯೇ ನೋಡಿಕೊಳ್ಳಲಾಗಿತ್ತು. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಹುಬ್ಬಳ್ಳಿ ಸೆಂಟ್ರಲ್ ಕ್ಷೇತ್ರದಿಂದ ಸೋತರೂ ಬಳಿಕ ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡಲಾಗಿತ್ತು. ಆದರೆ, ನಿಷ್ಠೆ ಬದಲಿಸಿದ ಶೆಟ್ಟರ್ ಮತ್ತೆ ಬಿಜೆಪಿಗೆ ಹೋಗಿ ಮೋದಿಯವರನ್ನ ಪ್ರಧಾನಿ ಮಾಡಬೇಕು ಅಂತಿದ್ದಾರೆ. ಕಾಂಗ್ರೆಸ್ ಪಕ್ಷಕ್ಕೆ ಬಂದಾಗ ಬಿಜೆಪಿಯವರನ್ನು ಬಯ್ಯುವುದು, ಬಿಜೆಪಿಗೆ ಬಂದಾಗ ಕಾಂಗ್ರೆಸ್ ನವರನ್ನು ಈ ಹಿಂದೆ ಜಿಲ್ಲೆಗೆ ಸಾಕಷ್ಟು ಅನ್ಯಾಯ ಮಾಡಿರುವ ಇಂಥ ಸಮಯ ಸಾಧಕ ರಾಜಕಾರಣಿ ನಮ್ಮ ಜಿಲ್ಲೆಗೆ ಬೇಕಾ? ಎಂದು ಮೃಣಾಲ್ ಹೆಬ್ಬಾಳಕರ್ ಪ್ರಶ್ನಿಸಿದ್ದಾರೆ. ಜಿಲ್ಲೆಯ ಅಭಿವೃದ್ಧಿ ಕನಸು ಹೊಂದಿರುವ ನನ್ನನ್ನು ಬೆಂಬಲಿಸಿ, ಜಿಲ್ಲೆಯ ಅಭಿವೃದ್ಧಿಗೆ ಕ್ಷೇತ್ರದ ಮತದಾರರು ಪಕ್ಷಾತೀತವಾಗಿ ಕೈಜೋಡಿಸಬೇಕು. ನಿಮ್ಮ ಮನೆ ಮಗನಾಗಿ ಹಗಲಿರುಳು ದುಡಿಯುವೆ ಎಂದು ಮೃಣಾಲ್ ಹೆಬ್ಬಾಳಕರ್ ಮನವಿ ಮಾಡಿದ್ದಾರೆ.

## ಯುವಕ ನೀರುಪಾಲು

ಮೈಸೂರು: ಬೇಸಿಗೆ ಹಿನ್ನೆಲೆ ಕೆರೆಯಲ್ಲಿ ಈಜಲು ಹೋದ ಯುವಕ ನೀರು ಪಾಲಾದ ಘಟನೆ ನಂಜನಗೂಡು ತಾಲ್ಲೂಕಿನ ಕೋಣನೂರು ಗ್ರಾಮದ ಕೆರೆಯಲ್ಲಿ ನಡೆದಿದೆ. ಚಾಮರಾಜನಗರದ ರಾಮಸಮುದ್ರ ಗ್ರಾಮದ ದೊಡ್ಡ ಬೀದಿ ನಿವಾಸಿ ಗುಣಶೇಖರ್(22) ಮೃತ ದುರ್ದೈವಿ.

ಗುಣಶೇಖರ್ ಸ್ನೇಹಿತರೊಂದಿಗೆ ಕೆರೆಗೆ ಈಜಲು ಹೋಗಿದ್ದನು. ಕಪಿಲಾ ನದಿಯಿಂದ ಕೆರೆಗೆ ನೀರು ಹರಿಯುತ್ತಿದ್ದು, ನೀರಿನ ಬುಗ್ಗೆಯ ಮೇಲೆ ಜಿಗಿದಿದ್ದಾನೆ. ಸುಮಾರು 20 ಅಡಿ ಎತ್ತರದಿದ್ದ ನೀರು ಚಿಮ್ಮುವ ಬುಗ್ಗೆಗೆ ಮೇಲಿನಿಂದ ಕೆಳಗೆ ಜಂಪ್ ಮಾಡಿದ್ದಾನೆ. ಮೇಲಿಂದ ಜಂಪ್ ಪರಿಣಾಮ ಕೆಳಗಡೆ ಬಿದ್ದವನು ಮತ್ತೆ ಮೇಲೆ ಹೇಳಲೇ ಇಲ್ಲ.

ಸ್ಥಳದಲ್ಲಿಯೇ ಯುವಕ ಸಾವನ್ನಪ್ಪಿದ್ದಾನೆ ಎನ್ನಲಾಗಿದೆ. ನೀರು ಬರುವ ಸ್ಥಳ ಅಪಾಯಕಾರಿಯಾಗಿದ್ದು, ಈ ಸ್ಥಳದಲ್ಲಿ ಸಾಕಷ್ಟು ಯುವಕರು ಪ್ರಾಣವನ್ನು ತೆಗೆದುಕೊಂಡಿದ್ದಾರೆ. ಸ್ಥಳಕ್ಕೆ ಕವಲಂದೆ ಪೊಲೀಸ್ ಠಾಣೆಯ ಪಿಎಸ್ಐ ಕೃಷ್ಣಕಾಂತ ಕೋಳಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಕವಲಂದೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪ್ರಜಾಪ್ರಭುತ್ವದ ಹಬ್ಬಕ್ಕೆ ಸಜ್ಜಾದ ಮತಗಟ್ಟೆಗಳು

## ಪ್ರಜಾಪ್ರಭುತ್ವ ಹಬ್ಬದಲ್ಲಿ ಭಾಗಿಯಾಗಿ ಕಡ್ಡಾಯ ಮತದಾನ ಮಾಡಿ ರಾಹುಲ್ ಶಿಂಧೆ




ಬೆಳಗಾವಿ: ಮೇ –07 ರಂದು ಜರುಗುವ ಸಾರ್ವತ್ರಿಕ ಲೋಕಸಭಾ ಚುನಾವಣೆ–2024 ಅಂಗವಾಗಿ ಜಿಲ್ಲೆಯಾದ್ಯಂತ ಎಲ್ಲ ಮತಗಟ್ಟೆಗಳು ಸಜ್ಜಾಗಿದ್ದು ಪ್ರಜಾಪ್ರಭುತ್ವದ ಹಬ್ಬದಲ್ಲಿ ಎಲ್ಲ ಮತದಾರರು ಭಾಗಿಯಾಗಿ ಕಡ್ಡಾಯ ಮತದಾನ ಮಾಡುವ ಮೂಲಕ ನಿಮ್ಮ ಸಂವಿಧಾನಿಕ ಹಕ್ಕನ್ನು ಚಲಾಯಿಸಬೇಕೆಂದು ಚಿಕ್ಕೋಡಿ ಲೋಕಸಬಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾದ ರಾಹುಲ್ ಶಿಂಧೆ ಎಲ್ಲ ಮತದಾರರಿಗೆ ಕರೆ ನೀಡಿದ್ದಾರೆ.

ಸಖಿ ಅಥವಾ ಪಿಂಕ್ ಮತಗಟ್ಟೆ ನಿರ್ಮಾಣ, ಮಹಿಳಾ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿರುವ ಮತಗಟ್ಟೆಗಳನ್ನು ಆಯ್ಕೆ ಮಾಡಿ ಪಿಂಕ್ ಮತಗಟ್ಟೆಯನ್ನಾಗಿ ಪರಿವರ್ತಿಸಲಾಗುವುದು.

ಮಹಿಳೆಯರಿಗೆ ಅನುಕೂಲವಾಗುವಂತೆ ಪ್ರತಿ ಮತಕ್ಷೇತ್ರವಾರು ಐದರಂತೆ ಜಿಲ್ಲೆಯಾದ್ಯಂತ ಒಟ್ಟು ತೊಂಬತ್ತು ಮತಗಟ್ಟೆಗಳನ್ನು ನಿರ್ಮಿಸಲಾಗಿದೆ. ವಿಶೇಷವಾಗಿ ಈ ಮತಗಟ್ಟೆಗಳಲ್ಲಿ ಮತದಾನದ ಅನುಕೂಲಕ್ಕಾಗಿ ಮಹಿಳಾ ಸಿಬ್ಬಂದಿಯನ್ನು ನೇಮಿಸಲಾಗಿರುತ್ತದೆ.

ಅದರಂತೆ ವಿಶೇಷ ಚೇತನರ ನಿರ್ವಹಣೆಗಾಗಿ ಜಿಲ್ಲೆಯಾದ್ಯಂತ ಒಟ್ಟು ಹದಿನೆಂಟು ಮತಗಟ್ಟೆಗಳು ಸಿದ್ಧಗೊಂಡಿದ್ದು, ವಿಶೇಷ ಚೇತನರಿಗೆ ಅನುಕೂಲವಾಗುವಂತೆ ಸಹಾಯಕರ ನೆರವು, ರ್ಯಾಂಪ್, ವ್ಹೀಲ್ ಚೇರ್, ವಾಹನದ ಸೌಲಭ್ಯ ಹಾಗೂ ವಿಶೇಷ ಚೇತನ ಸ್ನೇಹಿ ಶೌಚಾಲಯ, ಸಂಕೇತ ಫಲಕಗಳು ಇತ್ಯಾದಿ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ರಾಹುಲ್ ಶಿಂಧೆ ತಿಳಿಸಿದ್ದಾರೆ.

ಜಿಲ್ಲೆಯಾದ್ಯಂತ ಒಂದು ಲಕ್ಷಕ್ಕು ಅಧಿಕ ಯುವ ಮತದಾರರು ನೊಂದಣಿಯಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಯುವ ಮತದಾರರಿರುವ ಮತಗಟ್ಟೆಗಳಲ್ಲಿ ಯುವಕರಿಗಾಗಿ ಯುವಜನ ನಿರ್ವಹಣೆಯ ಮತಗಟ್ಟೆಗಳನ್ನು ಜಿಲ್ಲೆಯಾದ್ಯಂತ ಹದಿನೆಂಟು ಯುವ ಮತಗಟ್ಟೆಗಳನ್ನು ನಿರ್ಮಿಸಲಾಗಿದೆ.

ಮೊದಲಬಾರಿಗೆ ಮತದಾನ ಮಾಡುವ ಯುವಕರನ್ನು ಪ್ರೋತ್ಸಾಹಿಸಲು ಈ ಮತಗಟ್ಟೆ ನಿರ್ಮಾಣ ಮಾಡಲಾಗಿದೆ. ಆಯಾ ಮತಕ್ಷೇತ್ರಕ್ಕೆ ಸಂಬಂಧಿಸಿದ ವಿಶೇಷ ಸಾಧನೆ ಮಾಡಿದ ವ್ಯಕ್ತಿ, ಸ್ಥಳಿಯ ಜನಪದ ಕಲೆ, ಪ್ರೇಕ್ಷಣಿಯ ಸ್ಥಳ ಧ್ಯೇಯಗಳನ್ನು ಇಟ್ಟುಕೊಂಡು ಮತದಾರರಿಗೆ ಆಕರ್ಷಣಿಯವಾಗಿ ಕಾಣಲು ಹದಿನೆಂಟು ಮತಗಟ್ಟೆಗಳನ್ನು ನಿರ್ಮಿಸಲಾಗಿದೆ.

ಜಿಲ್ಲೆಯಲ್ಲಿ ಒಟ್ಟು 4524 ಮತಗಟ್ಟೆಗಳಲ್ಲಿ ಕೂಡ ವೈದ್ಯಕೀಯ ಕಿಟ್, ನೀರಿಕ್ಷಣಾ ಕೊಠಡಿ, ಕುಡಿಯುವ ನೀರು, ಸಹಾಯವಾಣಿ ಕೇಂದ್ರ, ನೆರಳಿಗಾಗಿ ಶಾಮಿಯಾನ ಶೌಚಾಲಯ ಹಾಗೂ ಹಿರಿಯ ನಾಗರಿಕರು, ದುರ್ಬಲ ಮತದಾರರು ಮತ್ತು ವಿಶೇಷ ಚೆತನ ಮತದಾರರಿಗೆ ಅನುಕೂಲವಾಗುವಂತೆ ಎಲ್ಲ ಸೌಲಭ್ಯಗಳನ್ನು ಒದಗಿಸಲಾಗಿದ್ದು, ಮೇ 7 ರಂದು ಎಲ್ಲ ಮತದಾರರು ಕಡ್ಡಾಯವಾಗಿ ತಪ್ಪದೇ ಮತದಾನ ಮಾಡಬೇಕಾಗಿ ಚಿಕ್ಕೊಡಿ ಲೋಕಸಬಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾದ ರಾಹುಲ್ ಶಿಂಧೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೂರ್ಯ ಚಂದ್ರರಿರುವರೆಗೂ ಸಂವಿಧಾನ ಬದಲಾವಣೆ ಇಲ್ಲ



ಮುಧೋಳ: ಸೂರ್ಯ ಚಂದ್ರರಿರುವರೆಗೂ ಡಾ.ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನ ಶಾಶ್ವತವಾಗಿರುತ್ತದೆ ಅದನ್ನು ಬದಲಿಸುವ ಯಾವುದೇ ವಿಚಾರ ಬಿಜೆಪಿಗಾಗಲೀ ಸಂಘ ಪರಿವಾರಕ್ಕಾಗಲೀ ಇಲ್ಲ. ಡಾ.ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನ ನಮ್ಮ ದೇಶದ ಧರ್ಮಗ್ರಂಥ ಎಂದು ಮಾಜಿ ಡಿಸಿಎಂ ಗೋವಿಂದ ಕಾರಜೋಳ ಹೇಳಿದರು.

ನಗರದ ಅವರ ಗೃಹ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಯವರ ಆಡಳಿತವನ್ನು ನೋಡಿರತಕ್ಕಂತಹ ನಮ್ಮ ದೇಶದ ಜನತೆಗೆ ದೇಶದ ಬಗ್ಗೆ ಗೌರವ, ಅಭಿವೃದ್ಧಿ ಮತ್ತು ರಕ್ಷಣೆ ಬಗ್ಗೆ ಜಾಗೃತಿ ಮೂಡಿದೆ. ಸ್ವಾತಂತ್ರ್ಯಾ ನಂತರದ 75 ವರ್ಷಗಳ ನಂತರ ಭಾರತ ದೇಶದ ಜನತೆಗೆ ನಮ್ಮ ದೇಶವನ್ನು ಸಮರ್ಥವಾಗಿ ನಡೆಸಿಕೊಂಡು ಹೋಗುವ ಹಾಗೂ ಇಂತಹ ದೊಡ್ಡ ದೇಶವನ್ನು ರಕ್ಷಣೆ ಮಾಡುವ ಸಾಮರ್ಥ್ಯ, ಸಮರ್ಥ ನಾಯಕತ್ವ ಗುಣ ಹೊಂದಿರುವ ಪ್ರಧಾನಿ ಮೋದಿಯವರಿಂದ ಮಾತ್ರ ನಮ್ಮ ದೇಶ ಮುಂದುವರೆಸಿಕೊಂಡು ಹೋಗುವ ಸಾಮರ್ಥ್ಯವಿದೆಯೆಂದು ಭಾವನೆ ಮೂಡಿದ್ದು, ಅವರು ಮತ್ತೆ ಮೂರನೇ ಬಾರಿಗೆ ಮೋದಿಯವರನ್ನೇ ಪ್ರಧಾನಿಯನ್ನಾಗಿ ಹಾಗೂ ನಮ್ಮ ದೇಶದ ನಾಯಕನನ್ನಾಗಿ ಆಯ್ಕೆ ಮಾಡಲಿದ್ದಾರೆ ಎಂದು ತಿಳಿಸಿದರು. ಆದ್ದರಿಂದ ನಮ್ಮ ದೇಶದ ಜನತೆಗೆ ಕೈ ಮುಗಿದು ಕೇಳಿಕೊಳ್ಳುವುದೇನೆಂದರೆ ಈ ಬಾರಿ ತಪ್ಪದೇ ಎಲ್ಲರೂ ಮತದಾನ ಮಾಡುವ ಮೂಲಕ ಈ ಚುನಾವಣೆಯನ್ನು ಹಬ್ಬದ ರೀತಿಯಲ್ಲಿ ಆಚರಿಸಬೇಕೆಂದು ಅವರು ವಿನಂತಿಸಿದರು.

ಕಾಂಗ್ರೆಸ್ ಪಕ್ಷಕ್ಕೆ ಸಮರ್ಥವಾಗಿ ಎಲ್ಲ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ನಿಲ್ಲಿಸುವ ಸಾಮರ್ಥ್ಯವಿಲ್ಲ. 239 ಸ್ಥಾನಗಳಿಗೆ ಮಾತ್ರ ಅವರು ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ್ದು, ಅದರಲ್ಲಿ ಮೂರು ಜನ ಹಿಂದೆ ಸರಿದಿದ್ದಾರೆ. ಲೋಕಸಭೆಯಲ್ಲಿ ಬಹುಮತಕ್ಕೆ 273 ಸ್ಥಾನಗಳು ಬೇಕು. ಆದರೆ ಅಷ್ಟು ಸ್ಥಾನಗಳಿಗೆ ಸ್ಪರ್ಧಿಸಲು ಕಾಂಗ್ರೆಸ್ಸಿಗೆ ಸಾಧ್ಯವಾಗಿಲ್ಲ. ಹೀಗಿರುವಾಗ ಅವರು ಹೇಗೆ ಸರ್ಕಾರ ರಚನೆ ಮಾಡಲು ಸಾಧ್ಯ. ಇಂಡಿ ಒಕ್ಕೂಟದಿಂದ ಈ ಲೋಕಸಭೆ ಚುನಾವಣೆಯಲ್ಲಿ ಅವರ ಪ್ರಧಾನಿ ಅಭ್ಯರ್ಥಿ ಯಾರು ಎಂದು ಘೋಷಣೆ ಮಾಡದ ಅಸಹಾಯಕ ಸ್ಥಿತಿಯಲ್ಲಿ ಕಾಂಗ್ರೆಸ್ ಪಕ್ಷವಿದೆ. ಕಳೆದ ಎರಡು ಚುನಾವಣೆ ಹಾಗೂ ಈ ಚುನಾವಣೆಯಲ್ಲಿ ಎನ್‌ಡಿಎ ಒಕ್ಕೂಟ ಪ್ರಧಾನಿಯನ್ನಾಗಿ ನರೇಂದ್ರ ಮೋದಿಯವರನ್ನು ಆಯ್ಕೆ ಮಾಡಿದೆ. ಆದರೆ ಇಚಿಡಿ ಒಕ್ಕೂಟ ಪ್ರಧಾನಿ ಯಾರು ಘೋಷಿಸದೇ ಇರುವುದು ನಾವಿಕನಿಲ್ಲದ ದೋಣಿಯಂತಹ ಪರಿಸ್ಥಿತಿಯಾಗಿದೆ ಎಂದು ಅವರು ತಿಳಿಸಿದರು.

ರಾಜ್ಯದ ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿಗಳ ಬಗ್ಗೆ ಲೇವಡಿ ಮಾಡಿದ ಅವರು, ಚುನಾವಣೆ ಸಂದರ್ಭದಲ್ಲಿ ಹೇಳಿದಂತೆ ಇದುವರೆಗೂ ರಾಜ್ಯ ಸರ್ಕಾರ ನಡೆದುಕೊಳ್ಳದೇ, ಇವೆಲ್ಲವೂ ಚುನಾವಣೆ ಪೂರ್ವದಲ್ಲಿ ಘೋಷಿಸಿದಂತೆ ಗ್ಯಾರಂಟಿಗಳನ್ನು ರಾಜ್ಯ ಸರ್ಕಾರ ಸರಿಯಾಗಿ ಅನುಷ್ಠಾನಕ್ಕೆ ತರದೇ ರಾಜ್ಯದ ಜನತೆಗೆ ಮೋಸ ಮಾಡಿದೆ ಎಂದು ಅವರು ಆರೋಪಿಸಿದರು. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಕಳೆದ ವರ್ಷ ಹಾಗೂ ಈ ವರ್ಷ ಸೇರಿ 25 ಸಾವಿರ ಕೋಟಿ ಹಣ ಎಸ್‌ಸಿ, ಎಸ್‌ಟಿಗೆ ಮೀಸಲಿಟ್ಟ ಅನುದಾನವನ್ನು ದುರ್ಬಳಕೆ ಮಾಡಿಕೊಂಡಿದ್ದಾರೆ. ಅದನ್ನು ಆ ಪಂಗಡಗಳ ಅಭಿವೃದ್ಧಿಗಾಗಿ ವಾಪಸ್ ನೀಡಬೇಕೆಂದು ಅವರು ಆಗ್ರಹಿಸಿದರು.

ಬಾಗಲಕೋಟೆ ಮತಕ್ಷೇತ್ರದಿಂದ ಐದನೇ ಬಾರಿಗೆ 3 ಲಕ್ಷಕ್ಕೂ ಅಧಿಕ ಮತಗಳ ಅಂತರದಿಂದ ಪಿ.ಸಿ.ಗದ್ದಿಗೌಡರ ಆಯ್ಕೆ ಶತಸಿದ್ಧ ಎಂದ ಅವರು, ರಾಜ್ಯದ 28 ಲೋಕಸಭಾ ಕ್ಷೇತ್ರಗಳನ್ನು ಬಿಜೆಪಿ ಗೆಲ್ಲಲಿದೆ ಎಂದು ಆತ್ಮವಿಶ್ವಾಸ ವ್ಯಕ್ತಪಡಿಸಿದರು.

## ಯುವತಿ ಶವವಾಗಿ ಪತ್ತೆ



ಬೆಂಗಳೂರು: ಕೆಲ ದಿನಗಳ ಹಿಂದೆ ಕೊರಮಂಗಲದ ರೆಸಿಡೆನ್ಶಿಯಲ್ ರಸ್ತೆಯಲ್ಲಿ ರಕ್ತದ ಮಡುವಿನಲ್ಲಿ ಓರ್ವ ಮಹಿಳೆ ಶವ ಪತ್ತೆಯಾಗಿತ್ತು. ಈ ವಿಚಾರ ತಿಳಿದ ಕೊರಮಂಗಲ ಠಾಣೆಯ ಪೊಲೀಸರು ಸ್ಥಳಕ್ಕೆ ಧಾವಿಸಿ, ಪರಿಶೀಲನೆ ನಡೆಸಿದಾಗ ಮೇಲ್ನೋಟಕ್ಕೆ ಕೊಲೆ ಎಂದು ಕಂಡುಬಂತು. ಇಂದು ಕೊಲೆಯಾದ ಮಹಿಳೆ.

ಸೆಲ್ವನ್ ಫ್ರಾನ್ಸಿಸ್ ಕೊಲೆ ಆರೋಪಿ. ಇಂದು 12 ವರ್ಷಗಳ ಹಿಂದೆ ಸೆಲ್ವನ್ ಫ್ರಾನ್ಸಿಸ್ ಎಂಬಾತನ ಪ್ರೀತಿಸಿ ಮದುವೆಯಾಗಿದ್ದಳು. 12 ವರ್ಷಗಳ ಹಿಂದೆ ಇಂದು ಶಾಲೆಗೆ ಹೊಗುವ ವಯಸ್ಸಿನಲ್ಲಿ. ಪೋಷಕರು ಇಂದುಳನ್ನು ವಿವೇಕನಗರದ ಆಸ್ಟಿನ್ ಟೌನ್ನ ಬಾಲಕಿಂಮರ ಶಾಲೆಗೆ ಸೇರಿಸಿದ್ದರು. ಈ ವೇಳೆ ಇಂದುಳಿಗೆ ಅದೇ ಏರಿಯಾದ ಸೆಲ್ವನ್ ಎಂಬುವನ ಪರಿಚಯವಾಗಿತ್ತು. ಆಗ ಆತನಿಗೆ 18 ವರ್ಷ ವಯಸ್ಸು. ಹುಡುಗಾಟದ ವಯಸ್ಸಿನಲ್ಲಿದ್ದ ಇಬ್ಬರು, ಪ್ರೀತಿ, ಪ್ರೇಮ–ಪ್ರಣಯ ಅಂತ ಶುರು ಮಾಡಿಕೊಂಡರು. ಹೀಗೆ ಓಡಾಡುತ್ತಿದ್ದ ಇವರು ಬೇಗನೆ ಮದುವೆಯಾದರು.

ಪೋಷಕರಿಗಿಂತ ಪ್ರೀತಿನೇ ಹೆಚ್ಚು ಅಂತ ಇಂದು ಎಲ್ಲರನ್ನು ಬಿಟ್ಟು ಸೆಲ್ವನ್ ಜೊತೆ ಮದುವೆಯಾಗಿದ್ದಳು. ಇವರಿಬ್ಬರ ಪ್ರೀತಿಯ ಕಾಣಿಕೆ ಅಂತ ಎರಡು ಮುದ್ದಾದ ಮಗು ಸಹ ಹುಟ್ಟಿದವು. ಸೆಲ್ವನ್ ಪೆಯ್ಟಿಂಗ್ ಕೆಲಸ ಮಾಡುತಿದ್ದರೆ, ಇಂದು ಮಗು ನೋಡಿಕೊಂಡಿದ್ದಳು. ಆರಂಭದಲ್ಲಿ ಎಲ್ಲವೂ ಸಹ ಚೆನ್ನಾಗಿ ಇತ್ತು. ಆದರೆ ಬರಬರುತ್ತ ಅಲ್ಲಿ ಅನುಮಾನದ ಹುಳು ಶುರುವಾಗಿತ್ತು ಹೆಂಡತಿಯನ್ನು ಹತ್ಯೆಮಾಡಿದ್ದಾನೆ.

## ದೇಶದ ಅಭಿವೃದ್ಧಿಗಾಗಿ ಬಿಜೆಪಿಗೆ ಮತ ನೀಡಿ: ರಾಮಣ್ಣಾ ತಳೇವಾಡ



ಮುಧೋಳ : ಕಳೆದ 10 ವರ್ಷಗಳಿಂದ ದೇಶದ ಸರ್ವಾಂಗೀಣ ಅಭಿವೃದ್ಧಿ ಮಾಡುತ್ತಿರುವ ಪ್ರಧಾನಿ ನರೇಂದ್ರ ಮೋದಿಯವರನ್ನು ಮೂರನೇ ಬಾರಿಗೆ ಪ್ರಧಾನ ಮಂತ್ರಿ ಮಾಡಲು ಬಾಗಲಕೋಟೆ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪಿ.ಸಿ.ಗದ್ದಿಗೌಡರ ಅವರಿಗೆ ಮನ ನೀಡಬೇಕೆಂದು ಜಿಲ್ಲೆಯ ಜನತೆಗೆ ಬಿಡಿಸಿಸಿ ನಿರ್ದೇಶಕ, ಬಿಜೆಪಿ ಮುಖಂಡ ರಾಮಣ್ಣಾ ತಳೇವಾಡ ಮನವಿ ಮಾಡಿದರು.

ಅವರು ನಗರದ ಕಾನಿಪ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಗ್ಯಾರಂಟಿಗಳಿಗೆ ಮರುಳಾಗದೇ ದೇಶದ ಉಜ್ವಲ ಭವಿಷ್ಯದ ಹಿತದೃಷ್ಟಿಯಿಂದ ಎಲ್ಲರೂ ಬಿಜೆಪಿಗೆ ಮತ ನೀಡಬೇಕು. ಗ್ಯಾರಂಟಿಗಳಿಂದ ದೇಶದ ಅಭಿವೃದ್ಧಿ ಸಾಧ್ಯವಿಲ್ಲ.

ನಮ್ಮ ದೇಶದ ಸೈನಿಕರಿಗೆ ಬುಲೆಟ್ ಪ್ರೂಫ್ ಜಾಕೆಟ್ ಹಾಗೂ ಅತ್ಯಾಧುನಿಕ ಶಸ್ತ್ರಾಸ್ತ್ರ ನೀಡುವ ಮೂಲಕ ನಮ್ಮ ಸೈನ್ಯ ಇಂದು ಅತ್ಯಂತ ಬಲಿಷ್ಠವಾಗಲು ಪ್ರಧಾನಿ ಮೋದಿಯವರೇ ಕಾರಣ ಎಂದು ಅವರು ಹೇಳಿದರು.


ಇಂದು ನಮ್ಮ ದೇಶದಲ್ಲಿಯೇ ಶಸ್ತ್ರಾಸ್ತ್ರಗಳನ್ನು ಉತ್ಪಾದಿಸಲಾಗುತ್ತಿದ್ದು, ವಿವಿಧ ದೇಶಗಳು ಈಗ ನಮ್ಮಿಂದ ಶಸ್ತ್ರಾಸ್ತ್ರಗಳನ್ನು ಖರೀದಿಸುತ್ತಿವೆ.

ಫ್ರೀ ಘೋಷಣೆಗಳಿಂದ ರೈತರಿಗೆ ದೊರಕಬೇಕಾದ ಸೌಲಭ್ಯಗಳು ಇಂದು ದೊರೆಯುತ್ತಿಲ್ಲ. 10 ರೂ. ಗೆ ಸಿಗುತ್ತಿದ್ದ ಪಹಣಿ ಪತ್ರ ಇಂದು ರೂ. 25 ಕ್ಕೆ ಏರಿದೆ. ವ್ಯವಹಾರಕ್ಕಾಗಿ ರೂ. 20 ಬಾಂಡ್ ಬಳಸಲಾಗುತ್ತಿತ್ತು. ಇಂದು ಅದು ರೂ. 100 ಕ್ಕೆ ಏರಿಸಲಾಗಿದೆ. ರೂ. 50 ಬಾಂಡ್‌ನ್ನು ರೂ. 500 ಕ್ಕೆ ಏರಿಸಲಾಗಿದೆ. ಹೈನುಗಾರಿಕೆಯ ಪ್ರೋತ್ಸಾಹ ಹಣ ರೈತರಿಗೆ ಸಿಗುತ್ತಿಲ್ಲ. ಇದಕ್ಕೆಲ್ಲ ಕಾರಣ ಫ್ರೀ ಗ್ಯಾರಂಟಿಗಳಾಗಿವೆ. ಉಚಿತ ಗ್ಯಾರಂಟಿಗಳನ್ನು ಈಡೇರಿಸಲು ಸರ್ಕಾರ ಹಣ ವಿನಿಯೋಗಿಸುತ್ತಿರುವುದು ರೈತರಿಗೆ ದೊರೆಯಬೇಕಾದ ಸೌಲಭ್ಯಗಳು ದೊರಕದೇ ರೈತರ ಮೇಲೆ ಬರೆ ಎಳೆದಂತಾಗಿದೆ ಎಂದು ಅವರು ಆರೋಪಿಸಿದರು.

ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು ಬಿಜೆಪಿಯಲ್ಲಿ ಯಾವುದೇ ತರಹದ ಗೊಂದಲಗಳಿಲ್ಲ. ಎಲ್ಲರೂ ಒಗ್ಗಟ್ಟಾಗಿ ಪಿ.ಸಿ.ಗದ್ದಿಗೌಡರ ಅವರನ್ನು ಗೆಲ್ಲಿಸುತ್ತೇವೆ ಎಂದು ಅವರು ಆತ್ಮವಿಶ್ವಾಸದಿಂದ ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಜಿಪಂ ಸದಸ್ಯ ಭೀಮನಗೌಡ ಪಾಟೀಲ, ಸದಾಶಿವ ಇಟಕನ್ನವರ, ಶಿವನಗೌಡ ನಾಡಗೌಡ, ಚಿದಾನಂದ ಪಂಚಕಟ್ಟಿಮಠ, ಕುಮಾರ ಹುಲಕುಂದ, ಕೆ.ಬಿ.ವಜ್ರಮಟ್ಟಿ, ಸದಾಶಿವ ಚಿಕ್ಕೂರ ಉಪಸ್ಥಿತರಿದ್ದರು.

## ಕೃಷಿ ಹೊಂಡದಲ್ಲಿ ಕಾಲು ಜಾರಿ ಬಿದ್ದು ಇಬ್ಬರು ಬಾಲಕರ ಸಾವು



ಗದಗ: ಕೃಷಿ ಹೊಂಡದಲ್ಲಿ ಬಿದ್ದು ಇಬ್ಬರು ಸಾವನ್ನಪ್ಪಿದ ಘಟನೆ ಗದಗ ಜಿಲ್ಲೆ ಮುಂಡರಗಿ ತಾಲೂಕಿನ ಹೈತಾಪುರ ಗ್ರಾಮದಲ್ಲಿ ನಡೆದಿದೆ.

ಗೀತಾ ಹೆಸರೂರು (34) ಮನೋಜ ಕವಲೂರು (5) ಮೃತರು ಎಂದು ಗುರುತಿಸಲಾಗಿದೆ. ತಂಗಿಯ ಮಗನೊಂದಿಗೆ ಕೃಷಿ ಹೊಂಡದಲ್ಲಿ ನೀರು ತರಲು ಹೋಗಾದ ಘಟನೆ ನಡೆದಿದೆ. ಮನೋಜ್ ಹೊಂಡದಲ್ಲಿ ಕಾಲು ಜಾರಿ ಬಿದ್ದಿದ್ದಾನೆ.

ಈ ವೇಳೆ ಗೀತಾ ರಕ್ಷಣೆಗೆ ಹೋಗದ್ದು, ಆಕೆಯೂ ಹೊಂಡದಲ್ಲಿ ಬಿದ್ದು ಸಾವನ್ನಪ್ಪಿದ್ದಾಳೆ. ಶಾಲೆ ರಜೆ ಹಿನ್ನೆಲೆ ಮನೋಜ್ ದೊಡ್ಡಮ್ಮನ ಮನೆಗೆ ಬಂದಿದ್ದನು. ಗೀತಾ ಜೊತೆಗೆ ಮನೋಜ್ ಕೃಷಿಹೊಂಡಕ್ಕೆ ನೀರು ತರಲು ಹೋಗಿದ್ದರು. ಈ ವೇಳೆ ದುರ್ಘಟನೆ ನಡೆದಿದೆ. ಮುಂಡರಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


## ಶಿಕ್ಷಣದಲ್ಲಿ ಉತ್ಕೃಷ್ಟತೆ ಸಾಧಿಸುವ ನಿಟ್ಟಿನಲ್ಲಿ ಯುಆರ್‌ಎಎಂ ಸ್ಕಾಲರ್ಶಿಪ್ ನೀಡಲು ಸಹಯೋಗ ಮಾಡಿಕೊಂಡ ಮೈಕ್ರಾನ್ ಫೌಂಡೇಶನ್ ಮತ್ತು ಯುನೈಟೆಡ್ ವೇ ಆಫ್ ಹೈದರಾಬಾದ್

ಬೆಂಗಳೂರು: ಮೈಕ್ರಾನ್ ಫೌಂಡೇಶನ್ ಮತ್ತು ಯುನೈಟೆಡ್ ವೇ ಆಫ್ ಹೈದರಾಬಾದ್ (ಯುಡಬ್ಲ್ಯುಎಚ್) ಪಾಲುದಾರಿಕೆ ಮಾಡಿಕೊಂಡಿದ್ದು, ಈ ಸಹಯೋಗದ ಮೂಲಕ ಭಾರತದ ಪ್ರಮುಖ ಎಂಜಿನಿಯರಿಂಗ್ ಸಂಸ್ಥೆಗಳ 60 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದೆ. ಆ ಮೂಲಕ ಅರ್ಹ ವಿದ್ಯಾರ್ಥಿಗಳು ಶೈಕ್ಷಣಿಕ ಉತ್ಕೃಷ್ಟತೆ ಸಾಧಿಸಲು ಮತ್ತು ಉಜ್ವಲ ಭವಿಷ್ಯ ಹೊಂದಲು ದಾರಿ ಮಾಡಿಕೊಡಲಾಗುತ್ತದೆ. ಈ ವಿದ್ಯಾರ್ಥಿವೇತನಗಳನ್ನು ಯೂನಿವರ್ಸಿಟಿ ರಿಸರ್ಚ್ ಅಲೈಯನ್ಸ್ ಮೈಕ್ರಾನ್ (ಯುಆರ್‌ಎಎಂ) ಉಪಕ್ರಮದ ಭಾಗವಾಗಿ ನೀಡಲಾಗುತ್ತಿದ್ದು, ಪ್ರತಿಯೊಬ್ಬ ವಿದ್ಯಾರ್ಥಿ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಲು, ಅವರು ಆಯ್ಕೆ ಮಾಡಿದ ಅಧ್ಯಯನ ಕ್ಷೇತ್ರದಲ್ಲಿ ಮುಂದುವರಿಯಲು ಮತ್ತು ವೃತ್ತಿಜೀವನದ ಪ್ರಯಾಣವನ್ನು ಪ್ರಾರಂಭಿಸಲು ಈ ಯೋಜನೆ ಸಹಾಯ ಮಾಡುತ್ತದೆ.

ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್, ಎಲೆಕ್ಟ್ರಾನಿಕ್ಸ್ ಮತ್ತು ಎಲೆಕ್ಟ್ರಿಕಲ್ ಇಂಜಿನಿಯರಿಂಗ್, ಮತ್ತು ಎಲೆಕ್ಟ್ರಾನಿಕ್ಸ್ ಮತ್ತು ಕಂಪ್ಯೂಟರ್ ಇಂಜಿನಿಯರಿಂಗ್ ವಿಭಾಗದ ಬಿ.ಟೆಕ್ (ಬ್ಯಾಚುಲರ್ ಆಫ್ ಟೆಕ್ನಾಲಜಿ) ಮೂರನೇ ಸೆಮಿಸ್ಟರ್ ಮತ್ತು ಎಂ.ಟೆಕ್ (ಮಾಸ್ಟರ್ ಆಫ್ ಟೆಕ್ನಾಲಜಿ) ಮೊದಲ ವರ್ಷದ ವಿದ್ಯಾರ್ಥಿಗಳಿಗಾಗಿ ಈ ವಿದ್ಯಾರ್ಥಿವೇತನವನ್ನು ಒದಗಿಸಲಾಗುತ್ತದೆ. ವಿದ್ಯಾರ್ಥಿ ವೇತನ ಸ್ವೀಕರಿಸುವ 60 ವಿದ್ಯಾರ್ಥಿಗಳಲ್ಲಿ 16 ಮಹಿಳೆಯರು ಮತ್ತು 10 ವಿಕಲಚೇತನ (ಪಿಡಬ್ಲ್ಯೂಡಿ) ವರ್ಗದ ವಿದ್ಯಾರ್ಥಿಗಳು ಒಳಗೊಂಡಿದ್ದಾರೆ. ವಿದ್ಯಾರ್ಥಿವೇತನ ಯೋಜನೆಯು ಮೈಕ್ರಾನ್‌ನ ಎಲ್ಲರನ್ನೂ ಒಳಗೊಳ್ಳುವ ಮತ್ತು ಪ್ರತಿಭಾವಂತರನ್ನು ಪೋಷಿಸುವ ಬದ್ಧತೆಯನ್ನು ತೋರಿಸುತ್ತದೆ.

ಐಐಟಿ ದೆಹಲಿ, ಐಐಐಟಿ ಬೆಂಗಳೂರು, ಐಐಟಿ ಗಾಂಧಿನಗರ, ಐಐಟಿ ಹೈದರಾಬಾದ್, ಬಿಟ್ಸ್ ಪಿಲಾನಿ, ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕರ್ನಾಟಕ, ಸುರತ್ಕಲ್, ಇಂದಿರಾ ಗಾಂಧಿ ದೆಹಲಿ ಮಹಿಳಾ ತಾಂತ್ರಿಕ ವಿಶ್ವವಿದ್ಯಾಲಯ (ಐಜಿಡಿಟಿಯುಡಬ್ಲ್ಯೂ), ಎನ್‌ಐಟಿ ತಿರುಚ್ಚಿ ಮತ್ತು ಜೆಎನ್‌ಟಿಯು–ಎಚ್ ಕಾಲೇಜ್ ಆಫ್ ಇಂಜಿನಿಯರಿಂಗ್ ಸೇರಿದಂತೆ ಭಾರತದ ಕೆಲವು ಪ್ರಮುಖ ಸಂಸ್ಥೆಗಳ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನ ಪಡೆಯಲಿದ್ದಾರೆ.

ಆಯ್ಕೆ ಪ್ರಕ್ರಿಯೆಯ ಕುರಿತು ರಾಷ್ಟ್ರವ್ಯಾಪಿ ಕಾಲೇಜು ಮಟ್ಟದ ಪ್ರಚಾರಗಳನ್ನು ನಡೆಸಲಾಗಿದ್ದು, ಕ್ಯಾಂಪಸ್ ಮಟ್ಟದಲ್ಲಿ ವಿದ್ಯಾರ್ಥಿಗಳನ್ನು ತಲುಪಲಾಗಿತ್ತು. ಆದ್ದರಿಂದ ರಾಷ್ಟ್ರದಾದ್ಯಂತ 494 ಸಂಸ್ಥೆಗಳಿಂದ 2,677 ಅರ್ಜಿಗಳು ಬಂದಿದ್ದವು. ತಾಂತ್ರಿಕ ಮೌಲ್ಯಮಾಪನದ ಜೊತೆಗೆ ಪೂರ್ವನಿರ್ಧರಿತ ಆಯ್ಕೆಯ ಮಾನದಂಡಗಳ ಆಧಾರದ ಮೇಲೆ ಯುಡಬ್ಲ್ಯೂಎಚ್ ನಿಖರವಾದ ವಿಮರ್ಶಾ ಪ್ರಕ್ರಿಯೆಯನ್ನು ಅನುಸರಿಸಿ 60 ಅಸಾಧಾರಣ ಅಭ್ಯರ್ಥಿಗಳನ್ನು ವಿದ್ಯಾರ್ಥಿವೇತನಕ್ಕೆ ಆಯ್ಕೆ ಮಾಡಿದೆ.




ಈ ಹಂತದಲ್ಲಿ ಪ್ರತಿಯೊಬ್ಬರೂ ತಮ್ಮ ಅಧ್ಯಯನದ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮತ್ತು ಭರವಸೆಯನ್ನು ತೋರಿದ್ದಾರೆ. ಪ್ರತಿ ವಿದ್ಯಾರ್ಥಿಗೆ ರೂ 80,000 ಮೌಲ್ಯದ ಸ್ಕಾಲರ್ಶಿಪ್‌ಗಳು ಲಭಿಸುತ್ತಿದ್ದು, ಅದರಿಂದ ಅವರ ಆರ್ಥಿಕ ಹೊರೆ ನಿವಾರಣೆಯಾಗಲಿದೆ. ಅವರು ಹೊಸ ಚೈತನ್ಯದೊಂದಿಗೆ ಅವರ ಶೈಕ್ಷಣಿಕ ಆಕಾಂಕ್ಷೆಗಳನ್ನು ಪೂರ್ಣಗೊಳಿಸಲು ಈ ವಿದ್ಯಾರ್ಥಿವೇತನ ಅನುವು ಮಾಡಿಕೊಡುತ್ತದೆ.

ಈ ಕುರಿತು ಮಾತನಾಡಿದ ಮೈಕ್ರಾನ್ ಕಾರ್ಯನಿರ್ವಾಹಕ ಉಪಾಧ್ಯಕ್ಷ, ಮುಖ್ಯ ಜನರ ಅಧಿಕಾರಿ ಮತ್ತು ಮೈಕ್ರಾನ್ ಫೌಂಡೇಶನ್‌ನ ಅಧ್ಯಕ್ಷ ಎಪ್ರಿಲ್ ಅರ್ನ್ಜೆನ್, "ಮೈಕ್ರಾನ್ ಫೌಂಡೇಶನ್ ತಮ್ಮ ಜೀವನವನ್ನು ಉತ್ಕೃಷ್ಟಗೊಳಿಸಲು ಬಯಸುವ ವಿದ್ಯಾರ್ಥಿಗಳಿಗೆ ಅವರ ಇಷ್ಟದ ಅಧ್ಯಯನ ಮುಂದುವರಿಸಲು ಮತ್ತು ವೃತ್ತಿಜೀವನದ ಅನ್ವೇಷಣೆಯಲ್ಲಿ ನೆರವಾಗಲು ಬದ್ಧವಾಗಿದೆ" ಎಂದು ಹೇಳಿದರು. ಮಾತು ಮುಂದುವರಿಸುತ್ತಾ, "ಯುಆರ್‌ಎಎಂ ಸ್ಕಾಲರ್ಶಿಪ್ ಕಾರ್ಯಕ್ರಮದಂತಹ ಉಪಕ್ರಮಗಳ ಮೂಲಕ ಮತ್ತು ಯುಡಬ್ಲ್ಯೂಎಚ್ ನಂತಹ ಪಾಲುದಾರರೊಂದಿಗೆ ಕೆಲಸ ಮಾಡುವುದರ ಮೂಲಕ ಉನ್ನತ ಶಿಕ್ಷಣ ಒದಗಿಸಿ ವಿದ್ಯಾರ್ಥಿಗಳನ್ನು ಭವಿಷ್ಯದ ತಂತ್ರಜ್ಞಾನ ವೃತ್ತಿಜೀವನಕ್ಕೆ ಸಿದ್ಧಪಡಿಸಲಾಗುತ್ತದೆ ಮತ್ತು ಭಾರತದಾದ್ಯಂತ ಇರು ಜನ ಸಮುದಾಯಗಳ ಮೇಲೆ ಈ ಯೋಜನೆ ಶಾಶ್ವತವಾದ ಪರಿಣಾಮವನ್ನು ಬೀರುತ್ತದೆ ಎಂದು ನಾವು ನಂಬುತ್ತೇವೆ" ಎಂದು ಹೇಳಿದರು.

ಮೈಕ್ರೋನ್ ಇಂಡಿಯಾದ ಉಪಾಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಆನಂದ್ ರಾಮಮೂರ್ತಿ ಮಾತನಾಡಿ, "ನಮ್ಮ ಯುಆರ್‌ಎಎಂ ವಿದ್ಯಾರ್ಥಿವೇತನಗಳು ವೈವಿಧ್ಯತೆಯನ್ನು ಉತ್ತೇಜಿಸಲು ಮತ್ತು ಶಿಕ್ಷಣದಲ್ಲಿ ಉತ್ಕೃಷ್ಟತೆಯನ್ನು ಸಾಧಿಸುವ ಕಡೆಗಿನ ನಮ್ಮ ನಮ್ಮ ಗಮನವನ್ನು ಒತ್ತಿಹೇಳುತ್ತವೆ" ಎಂದು ಹೇಳಿದರು.

ಮಾತು ಮುಂದುವರಿಸಿ, "ಭಾರತದೊಳಗಿನ ಪ್ರತಿಭೆಯ ಸಂಪತ್ತಿನ ಭಾಗವಾದ ಈ ವಿದ್ಯಾರ್ಥಿಗಳು ತಂತ್ರಜ್ಞಾನ ಉದ್ಯಮದ ಕ್ರಿಯಾತ್ಮಕ ವಿಕಸನಕ್ಕೆ ಅನುಗುಣವಾಗಿ ಸೆಮಿಕಂಡಕ್ಟರ್ ಪವರ್‌ಹೌಸ್ ಆಗಿ ಭಾರತದ ಅಭಿವೃದ್ಧಿಯ ಮುಂಚೂಣಿಯಲ್ಲಿರುತ್ತಾರೆ" ಎಂದು ಹೇಳಿದರು.

ಯುನೈಟೆಡ್ ವೇ ಆಫ್ ಹೈದರಾಬಾದ್‌ನ ಸಿಇಓ ರೇಖಾ ಶ್ರೀನಿವಾಸನ್, "ಈ ಯುಆರ್‌ಎಎಂ ಸ್ಕಾಲರ್ಶಿಪ್ ಉಪಕ್ರಮದ ಮೂಲಕ ಅರ್ಹ ವಿದ್ಯಾರ್ಥಿಗಳಿಗೆ ನೆರವು ಒದಗಿಸಲು ಮೈಕ್ರಾನ್ ಫೌಂಡೇಶನ್‌ನೊಂದಿಗೆ ಕೆಲಸ ಮಾಡಲು ನಾವು ಸಂತೋಷಪಡುತ್ತೇವೆ. ಈ ವಿದ್ಯಾರ್ಥಿವೇತನಗಳು ಪ್ರತಿಯೊಬ್ಬ ವಿದ್ಯಾರ್ಥಿಯು ತಮ್ಮ ಸಾಮರ್ಥ್ಯವನ್ನು ಪ್ರದರ್ಶನ ಮಾಡಲು, ಅವರು ಆಯ್ಕೆ ಮಾಡಿದ ಕೋರ್ಸ್‌ಗಳಲ್ಲಿ ಮುಂದುವರಿಯಲು ಮತ್ತು ಅವರು ಬಯಸುವ ವೃತ್ತಿಯನ್ನು ಪಡೆಯುವ ಅವಕಾಶ ಹೊಂದಲು ಬೆಂಬಲ ನೀಡಲಿದೆ. ವಿದ್ಯಾರ್ಥಿವೇತನ ಕಾರ್ಯಕ್ರಮದ ಮೂಲಕ, ನಾವು ಎಲ್ಲಾ ವಿದ್ಯಾರ್ಥಿಗಳಿಗೆ ನ್ಯಾಯಯುತ ವೇದಿಕೆಯನ್ನು ರಚಿಸುವ ಗುರಿಯನ್ನು ಹೊಂದಿದ್ದೇವೆ" ಎಂದು ಹೇಳಿದರು.

ಯುಆರ್‌ಎಎಂ ಭಾರತೀಯ ವಿಶ್ವವಿದ್ಯಾನಿಲಯಗಳ ಜೊತೆ ದೃಢವಾದ ಪಾಲುದಾರಿಕೆಯನ್ನು ಸಾಧಿಸಲು ಒಂದು ಸಂಯೋಜಿತ ಚೌಕಟ್ಟನ್ನು ನಿರ್ಮಿಸಿದೆ. ಆ ಮೂಲಕ ದೇಶದಲ್ಲಿನ ಕೆಲವು ಅತ್ಯುತ್ತಮ ಮನಸ್ಸುಗಳೊಂದಿಗೆ ಸೇರಿಕೊಂಡು ಸಂಶೋಧನೆ, ನಾವೀನ್ಯತೆ ಮತ್ತು ಸಹಯೋಗವನ್ನು ಸಾಧಿಸಲು ಗಮನಹರಿಸುತ್ತದೆ.

ಮೂಲಭೂತವಾಗಿ, ಸಹಯೋಗವು ಶೈಕ್ಷಣಿಕ ಸಂಸ್ಥೆಗಳು ಮತ್ತು ಪ್ರಮುಖ ಅಧ್ಯಾಪಕ ತಜ್ಞರು, ಸುಧಾರಿತ ಸಂಶೋಧನಾ ಪ್ರಯೋಗಾಲಯಗಳು, ವಿದ್ಯಾರ್ಥಿ ಸಮುದಾಯಗಳು, ಉದ್ಯಮ ಸಂಘಗಳು, ಸ್ಟಾರ್ಟ್‌ಅಪ್‌ಗಳು ಮತ್ತು ಸರ್ಕಾರಿ ಏಜೆನ್ಸಿಗಳನ್ನು ಹೆಚ್ಚಿನ ಸಂಶೋಧನೆ ಮಾಡುವ ಸಲುವಾಗಿ, ಶಿಕ್ಷಣ ಒದಗಿಸಲು ಮತ್ತು ನಾವೀನ್ಯತೆ ಸಾಧಿಸಲು ಒಟ್ಟುಗೂಡಿಸುತ್ತದೆ.

ಬೆಳಗಾವಿ ವರದಿ

TUESDAY, 07 MAY 2024

# ಮದುವೆಯಲ್ಲಿ ಐಸ್ ಕ್ರೀಂ ಸೇವಿಸಿ 80ಕ್ಕೂ ಹೆಚ್ಚು ಜನರು ಅಸ್ವಸ್ಥ



ರಾಮನಗರ: ಮದುವೆಯಲ್ಲಿ ಐಸ್ ಕ್ರೀಂ ತಿಂದು ಜನರು ಅಸ್ವಸ್ಥಗೊಂಡ ಘಟನೆ ರಾಮನಗರ ಜಿಲ್ಲೆಯ ಚನ್ನಪಟ್ಟಣದಲ್ಲಿ ಬೆಳಕಿಗೆ ಬಂದಿದೆ. ಅಲ್ಲಿನ ಸಾತನೂರು ಸರ್ಕಲ್ ಬಳಿಯ ಟಿಪ್ಪುನಗರದ ಮಿಲನ್ ಶಾದಿ ಮಹಲ್ ನಲ್ಲಿ ನಡೆದ ಮದುವೆ ಸಮಾರಂಭವೊಂದರಲ್ಲಿ ಈ ಘಟನೆ ನಡೆದಿದ್ದು, ಪರಿಣಾಮ 80 ಕ್ಕೂ ಹೆಚ್ಚು ಜನರು ಆಸ್ಪತ್ರೆಗೆ ದಾಖಲಾಗಿದ್ದಾರೆ.

ಚನ್ನಪಟ್ಟಣದ ವಧು ಮತ್ತು ಮಾಗಡಿಯ ವರನ ವಿವಾಹ ಸಮಾರಂಭ ಮಿಲನ್ ಶಾದಿ ಮಹಲ್ ನಲ್ಲಿ ನಡೆಯುತ್ತುತಿತ್ತು. ಮುಸ್ಲಿಂ ಸಮುದಾಯದ ಮದುವೆ ಸಮಾರಂಭದಲ್ಲಿ ಐಸ್ ಕ್ರೀಂ ತಿಂದ ಜನರು ಇದ್ದಕ್ಕಿದ್ದಂತೆಯೇ ಅಸ್ವಸ್ಥಗೊಂಡಿದ್ದಾರೆ. ಊಟದ ನಂತರ ಐಸ್ ಕ್ರೀಂ ತಿಂದ ಅರ್ಧಗಂಟೆಯಲ್ಲಿ ವಾಂತಿ, ಭೇದಿ ಶುರುವಾಗಿದೆ.

50ಕ್ಕೂ ಹೆಚ್ಚು ಜನರಲ್ಲಿ ಈ ಸಮಸ್ಯೆ ಕಾಣಿಸಿಕೊಂಡಿದ್ದು, ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಚಿಕಿತ್ಸೆ ಪಡೆಯುತ್ತಿರುವ ಹೆಚ್ಚಿನವರು ಚನ್ನಪಟ್ಟಣದ ಯಾರಬ್ ನಗರ ಹಾಗೂ ಕೋಟೆ ನಿವಾಸಿಗಳು ಎಂದು ಗುರುತಿಸಲಾಗಿದೆ.

ಐಸ್ ಕ್ರೀಂ ತಿಂದು ಅಸ್ವಸ್ಥಗೊಂಡವರಲ್ಲಿ 40 ಜನರು ಚನ್ನಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ. ಉಳಿದವರು ಮಂಡ್ಯ ಹಾಗೂ ರಾಮನಗರ ಜಿಲ್ಲಾಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ. ಅವಧಿ ಮುಗಿದಿದ್ದ ಐಸ್ ಕ್ರೀಂ ತಿಂದಿದ್ದೇ ಈ ಅವಾಂತರಕ್ಕೆ ಕಾರಣ ಎನ್ನಲಾಗುತ್ತಿದೆ.

ಚನ್ನಪಟ್ಟಣದ ಸಾರ್ವಜನಿಕ ಆಸ್ಪತ್ರೆ ಬಳಿ ಅಸ್ವಸ್ಥಗೊಂಡವರ ಕುಟುಂಬಸ್ಥರು ಆಗಮಿಸಿದ್ದಾರೆ. ಎಲ್ಲರಿಗೂ ಡ್ರಿಪ್ಸ್ ಹಾಕಿ ಪ್ರಾಥಮಿಕ ಚಿಕಿತ್ಸೆ ನೀಡಲಾಗುತ್ತಿದೆ.

# ಐದು ರಾಷ್ಟ್ರಗಳ ಚುನಾವಣಾ ಆಯೋಗದ ಪ್ರತಿನಿಧಿಗಳ ನಿಯೋಗ ಭೇಟಿ

## ಲೋಕಸಭಾ ಚುನಾವಣೆ: ಸಿದ್ಧತೆ ಹಾಗೂ ವಿವಿಧ ಹಂತಗಳ ಪ್ರಕ್ರಿಯೆ ವೀಕ್ಷಣೆ

ಬೆಳಗಾವಿ: ವಿಶ್ವದ ಬಹುದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿರುವ ಭಾರತದಲ್ಲಿ ನಡೆಯುತ್ತಿರುವ ಲೋಕಸಭಾ ಚುನಾವಣೆಯ ಸಿದ್ಧತೆ ಹಾಗೂ ವಿವಿಧ ಹಂತಗಳ ಪ್ರಕ್ರಿಯೆಗಳನ್ನು ವೀಕ್ಷಿಸಲು ಆಗಮಿಸಿರುವ ಐದು ರಾಷ್ಟ್ರಗಳ ಚುನಾವಣಾ ಆಯೋಗಗಳ ಪ್ರತಿನಿಧಿಗಳ ಅಂತರ್ ರಾಷ್ಟ್ರೀಯ ತಂಡವು ಬೆಳಗಾವಿ ಜಿಲ್ಲೆಗೆ ಭೇಟಿ ನೀಡಿತು.

ಬೆಳಗಾವಿ ಜಿಲ್ಲೆಗೆ ಆಗಮಿಸಿದ ಕಾಂಬೋಡಿಯಾ, ನೇಪಾಳ, ಮೊಲ್ಡೊವಾ, ಸಿಷೆಲ್ ಹಾಗೂ ತುನಿಷಿಯಾ ದೇಶಗಳ ಚುನಾವಣಾ ಆಯೋಗಗಳ ಹತ್ತು ಸದಸ್ಯರ ತಂಡವನ್ನು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಬರಮಾಡಿಕೊಂಡರು.

ನಗರದ ಖಾಸಗಿ ಹೋಟೆಲ್ ನಲ್ಲಿ ನಡೆದ ಅಂತರ್ ರಾಷ್ಟ್ರೀಯ ನಿಯೋಗದ ಸಭೆಯಲ್ಲಿ ಬೆಳಗಾವಿ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ಜಿಲ್ಲೆಯಲ್ಲಿ ಕೈಗೊಳ್ಳಲಾಗಿರುವ ಚುನಾವಣಾ ಸಿದ್ಧತೆಗಳ ಕುರಿತು ಮಾಹಿತಿಯನ್ನು ನೀಡಿದರು.



ಬೆಳಗಾವಿ ಉತ್ತರ ವಲಯ ಐಜಿಪಿ ವಿಕಾಸ್ ಕುಮಾರ್ ವಿಕಾಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಐ.ಎ.ಎಸ್. ಪ್ರೊಬೇಷನರಿ ಅಧಿಕಾರಿ ಶುಭಂ ಶುಕ್ಲಾ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ:**

ಇದಾದ ಬಳಿಕ 02-ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯಲಿರುವ ಹಿನ್ನಲೆಯಲ್ಲಿ ನಗರದ ವನಿತಾ ಮಹಾವಿದ್ಯಾಲಯದಲ್ಲಿ ಸ್ಥಾಪಿಸಲಾಗಿರುವ ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿದ ನಿಯೋಗದ ಸದಸ್ಯರು, ಮಸ್ಟ ರಿಂಗ್ ಕುರಿತು ಮಾಹಿತಿಯನ್ನು ಪಡೆದುಕೊಂಡರು.

ಮತಗಟ್ಟೆ ಸಿಬ್ಬಂದಿ ನಿಯೋಜನೆ, ಸ್ಟ್ರಾಂಗ್ ರೂಮ್, ಮತಯಂತ್ರಗಳ ವಿತರಣೆ, ಮತಗಟ್ಟೆಗೆ ಚುನಾವಣಾ ಅಧಿಕಾರಿ/ಸಿಬ್ಬಂದಿ ತಂಡಗಳ ರವಾನೆ ಹಾಗೂ ಸಾರಿಗೆ ವ್ಯವಸ್ಥೆಯ ಬಗ್ಗೆ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

**ಮಾದರಿ ನೀತಿಸಂಹಿತೆ(ಎಂಸಿಸಿ) ಕೇಂದ್ರ ವೀಕ್ಷಣೆ:**

ಲೋಕಸಭಾ ಚುನಾವಣಾ ಸಂದರ್ಭದಲ್ಲಿ ಮಾದರಿ ನೀತಿಸಂಹಿತೆ(-ಎಂಸಿಸಿ) ಪಾಲನೆಯನ್ನು ಖಚಿತಪಡಿಸುವ ಹಿನ್ನೆಲೆಯಲ್ಲಿ ಸ್ಥಾಪಿಸಲಾಗಿರುವ ಎಂಸಿಸಿ ನಿಗಾ ಕೇಂದ್ರಕ್ಕೆ ಅಂತರ್ ರಾಷ್ಟ್ರೀಯ ನಿಯೋಗ ಭೇಟಿ ನೀಡಿತು.

ಚುನಾವಣೆ ಘೋಷಣೆಯಾದ ತಕ್ಷಣವೇ ಮಾದರಿ ನೀತಿಸಂಹಿತೆ ಜಾರಿಗೆ ಬರುತ್ತದೆ. ಮಾದರಿ ನೀತಿಸಂಹಿತೆ ಉಲ್ಲಂಘನೆಗಳನ್ನು ಪತ್ತೆ ಮಾಡಿ ಸೂಕ್ತ ಕ್ರಮ ಕೈಗೊಳ್ಳಲು ಅನುಕೂಲವಾಗುವಂತೆ ಸ್ಮಾರ್ಟ್ ಸಿಟಿ ಯೋಜನೆಯಡಿ ಸ್ಥಾಪಿಸಲಾಗಿರುವ ಸುಸಜ್ಜಿತ ಕಮಾಂಡ್ ಆ್ಯಂಡ್ ಕಂಟ್ರೋಲ್ ಸೆಂಟರ್ ನಲ್ಲಿ ಎಂಸಿಸಿ ತಂಡ ಕಾರ್ಯನಿರ್ವಹಿಸುತ್ತಿದೆ ಎಂದು ಅಧಿಕಾರಿಗಳು ವಿವರಿಸಿದರು.

ಇಡೀ ಜಿಲ್ಲೆಯಾದ್ಯಂತ ಸ್ಥಾಪಿಸಲಾಗಿರುವ ಚೆಕ್ ಪೋಸ್ಟ್ ಗಳನ್ನು ವೆಬ್ ಕ್ಯಾಮೆರಾ ಮೂಲಕ ಒಂದೇ ಕಡೆ ಕುಳಿತು ನಿಗಾ ವಹಿಸುವ ವ್ಯವಸ್ಥೆ; ಜಿಪಿಎಸ್ ಆಧಾರಿತ ವಾಹನಗಳೊಂದಿಗೆ ಕ್ಷೇತ್ರದಾದ್ಯಂತ ಸಂಚರಿಸುವ ಎಫ್.ಎಸ್.ಟಿ. ತಂಡಗಳಿಗೆ ತಕ್ಷಣವೇ ಮಾಹಿತಿ ರವಾನಿಸಲು ಅನುಕೂಲವಾಗುವಂತಹ ಏಕೀಕೃತ ವ್ಯವಸ್ಥೆಯ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ವಿವರಿಸಲಾಯಿತು.

**ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಕೇಂದ್ರ(ಎಂಸಿಎಂಸಿ)ಕ್ಕೆ ಭೇಟಿ:**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾಭವನದಲ್ಲಿ ಸ್ಥಾಪಿಸಲಾಗಿರುವ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಕೇಂದ್ರ(ಎಂಸಿಎಂಸಿ)ಕ್ಕೆ ಭೇಟಿ ನೀಡಿದ ನಿಯೋಗದ ಸದಸ್ಯರು, ಪ್ರಮಾಣೀಕರಣ ಹಾಗೂ ನಿಗಾ ವ್ಯವಸ್ಥೆಯ ಕುರಿತು ಮಾಹಿತಿ ಪಡೆದುಕೊಂಡರು.

ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಕೇಂದ್ರ(ಎಂಸಿ-ಎಂಸಿ)ದ ನೋಡಲ್ ಅಧಿಕಾರಿ ಹಾಗೂ ವಾರ್ತಾ ಇಲಾಖೆಯ ಉಪ ನಿರ್ದೇಶಕರಾದ ಗುರುನಾಥ ಕಡಬೂರ ಕಾರ್ಯಚಟುವಟಿಕೆಗಳನ್ನು ವಿವರಿಸಿದರು.

ಸಾಮಾಜಿಕ ಜಾಲತಾಣಗಳ ನಿಗಾ; ಎ.ಐ. ನಿಂದ ಸೃಜಿಸಲಾಗುವ ಸುಳ್ಳುಸುದ್ದಿಗಳ ಪತ್ತೆ; ಅಭ್ಯರ್ಥಿಗಳು ಮತ್ತು ರಾಜಕೀಯ ಪಕ್ಷಗಳ ಚುನಾವಣಾ ವೆಚ್ಚದ ಮೇಲೆ ಯಾವ ರೀತಿ ನಿಗಾ ವಹಿಸುವ ವಿಧಾನಗಳು ಮತ್ತು ಕಾನೂನು ಕ್ರಮಗಳ ಬಗ್ಗೆ ನಿಯೋಗದ ಸದಸ್ಯರು ಚರ್ಚಿಸಿದರು.

# ಕರ್ನಾಟಕದ ಬಹುತೇಕ ಆಣೆಕಟ್ಟುಗಳ ನಿರ್ಮಾಣ ಎಸ್.ಜಿ.ಬಾಳೇಕುಂದ್ರಿ ಹೆಗ್ಗಳಿಕೆ

ಬೆಳಗಾವಿ: ಕನ್ನಡ ಸಾಹಿತ್ಯ ಪರಿಷತ್ತು ಬೆಳಗಾವಿ ಜಿಲ್ಲೆಯ, ಕ.ಸಾ.ಪ 110ನೇ ಸಂಸ್ಥಾಪನಾ ದಿನಾಚರಣೆಯ ಹಾಗೂ ಕರ್ನಾಟಕದ ನೀರಾವರಿ ತಜ್ಞ ಇಂಜನೀಯರ್ ಎಸ್.ಜಿ.ಬಾಳೇಕುಂದ್ರಿ ಜನ್ಮ ದಿನದ ಪ್ರಯುಕ್ತ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕ ಹಾಗೂ ಕನ್ನಡ ಕ್ಷೇಮಾಭಿವೃದ್ಧಿ ಸಂಯುಕ್ತ ಆಶ್ರಯದಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಕನ್ನಡ ಭವನದಲ್ಲಿ ಜರುಗಿತು.

ಈ ಸಂಧರ್ಭದಲ್ಲಿ ಮಾತನಾಡಿದ ನಿವೃತ್ತ ನ್ಯಾಯಾಧೀಶ ಉಲ್ಲಾಸ ಬಾಳೇಕುಂದ್ರಿ, ಇಂಜನೀಯರ್ ಎಸ್.ಜಿ.ಬಾಳೇಕುಂದ್ರಿ ಅವರ ಬದುಕು ಬರಹ ಕುರಿತು ಮಾರ್ಮಿಕವಾಗಿ ವಿಶ್ಲೇಷಿಸಿದರು. ಆಲಮಟ್ಟಿ ಡ್ಯಾಂ 165ಕೋಟಿ ವೆಚ್ಚ ಬಚ್ಚಾವತ್ ಕಮೀಟಿ ಶಿಫಾರಸ್ಸು, 1977-88 ರ ಸಾಲಿನಲ್ಲಿ ಕಾಡಾ ನಿರ್ದೇಶಕರಾಗಿ ನಿವೃತ್ತರಾದ





ಎಸ್.ಜಿ.ಬಾಳೇಕುಂದ್ರಿ ಬೆಳಗಾವಿ ಜಿಲ್ಲೆಯ ಹಲವು ಸೇತುವೆ ನಿರ್ಮಾಣ ಕಾರ್ಯ ಭರದಿಂದ ನಿರ್ಮಾಣ ಕೈಗೊಂಡಿದ್ದರು. ಉತ್ತರ ಕರ್ನಾಟಕದ ಬಹುತೇಕ ನೀರಾವರಿ ಒದಗಿಸುವ ಹಿಡಕಲ್ ಡ್ಯಾಂ, ಆಲಮಟ್ಟಿ ಡ್ಯಾಂ, ನವಿಲು ತೀರ್ಥ ಡ್ಯಾಂ, ನಾರಾಯಣಪುರ ಆಣೆಕಟ್ಟು ನಿರ್ಮಾಣ ಮಾಡುವಲ್ಲಿ ಅವರ ಸೇವೆ ಸ್ಮರಣೀಯ ಎಂದು ಪ್ರಶಂಸಿಸಿದರು.

ಇಂಜನೀಯರ್ ಬಸವರಾಜ ಚೆಟ್ಟರ ಮಾತನಾಡಿ ಎಸ್.ಜಿ.ಬಾಳೇಕುಂದ್ರಿ ಅವರು ನೀರಾವರಿ ಕ್ಷೇತ್ರದಲ್ಲಿ ಪ್ರಮುಖ ಕೊಡುಗೆ ನೀಡಿದ್ದಾರೆ. ಕರ್ನಾಟಕದಲ್ಲಿ ಲೋಕೋಪಯೋಗಿ ಇಲಾಖೆಯ ಮುಖ್ಯ ಸಿವಿಲ್ ಇಂಜನೀಯರ್ ಆಗಿ ಉತ್ತರ ಕರ್ನಾಟಕದ ಹಲವು ಪ್ರದೇಶಗಳಿಗೆ ನೀರಿನ ಅಭಾವ ನೀಗಿಸಿದ್ದರು ಎಂದು ಸ್ಮರಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಬೆಳಗಾವಿ ಜಿಲ್ಲಾಧ್ಯಕ್ಷರಾದ ಶ್ರೀಮತಿ ಮಂಗಲಾ ಮೆಟಗುಡ್ಡ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಎಂ.ವೈ.ಮೆಣಸಿನಕಾಯಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಹೇಮಾವತಿ ಸೊನೊಳ್ಳಿ ಸ್ವಾಗತಿಸಿದರು. ವೀರಭದ್ರಪ್ಪ ಅಂಗಡಿ ಉಪನ್ಯಾಸಕರ ಮತ್ತು ಅತಿಥಿಗಳ ಪರಿಚಯವನ್ನು ಮಾಡಿದರು ಮಲ್ಲಿಕಾರ್ಜುನ ಕೋಳಿ ಕಾರ್ಯಕ್ರಮ ನಿರೂಪಿಸಿದರು. ಕೊನೆಗೆ ಶಿವಾನಂದ ತಲ್ಲೂರ ವಂದಿಸಿದರು.

ಸುರೇಶ ಹಂಜಿ, ಡಾ.ಅವಿನಾಶ ಶಿಂಧಿಹಟ್ಟಿ, ಸಾಹಿತಿಗಳಾದ ಸ.ರಾ.ಸುಳಕೂಡೆ. ಪ್ರಾ.ಬಿ.ಬಿ.ಮಠಪತಿ, ಆರ್.ಬಿ.ಬನಶಂಕರಿ, ಹೇಮಾ ಸೊನೊಳ್ಳಿ, ಜಯಶೀಲಾ ಬ್ಯಾಕೋಡ, ಬೀನಾ ಕತ್ತಿ, ಕಸಾಪ ಸದಸ್ಯರು ಸಾಹಿತ್ಯ ಆಸಕ್ತರು ಉಪಸ್ಥಿತರಿದ್ದರು.

# ಇಂದು ಮತದಾನ: ಯಲ್ಲಮ್ಮ ದೇವಿ ದರ್ಶನಕ್ಕೆ ಭಕ್ತರಿಗೆ ನಿರ್ಬಂಧ



ಬೆಳಗಾವಿ: ರಾಜ್ಯದ 14 ಲೋಕಸಭಾ ಕ್ಷೇತ್ರಗಳಿಗೆ ಇಂದು ಮತದಾನ ನಡೆಯಲಿದೆ. ಈಗಾಗಲೇ ಬಹಿರಂಗ ಪ್ರಚಾರಕ್ಕೆ ತೆರೆಬಿದ್ದಿದೆ. 2ನೇ ಹಂತದ ಮತದಾನ ಹಿನ್ನೆಲೆ ನಾಳೆ ಜಿಲ್ಲೆಯ ಸವದತ್ತಿಯ ಯಲ್ಲಮ್ಮನ ಗುಡ್ಡಕ್ಕೆ ಭಕ್ತರಿಗೆ ನಿರ್ಬಂಧ ವಿಧಿಸಲಾಗಿದೆ.

ಪ್ರತಿ ಮಂಗಳವಾರ ಲಕ್ಷಾಂತರ ಜನ ಮತದಾನ ಬಿಟ್ಟು ದೇಗುಲಕ್ಕೆ ಆಗಮಿಸುವ ಸಾಧ್ಯತೆ ಹಿನ್ನೆಲೆ ಜಿಲ್ಲಾಡಳಿತ ನಾಳೆ ಯಲ್ಲಮ್ಮ ದೇವಿ ದರ್ಶನಕ್ಕೆ ಭಕ್ತರಿಗೆ ನಿರ್ಬಂಧಿಸಲಾಗಿದೆ.

ಈಗಾಗಲೇ ಬ್ಯಾರಿಕೆಡ್ ಹಾಕಿ ದೇವಸ್ಥಾನದ ಒಳಗೆ ಯಾರು ಬರದಂತೆ ಬಂದ ಮಾಡಲಾಗಿದೆ. ದೇವಿಗೆ ಎಂದಿನಂತೆ ಪೂಜಾ ಕಾರ್ಯಗಳು ನಡೆಯಲಿವೆ. ನಾಳೆ ಮತದಾನ ಪ್ರಕ್ರಿಯೆಯಲ್ಲಿ ಭಾಗಿಯಾಗಿ ಮತ ಚಲಾಯಿಸಿ. ದೇವಸ್ಥಾನಕ್ಕೆ ಯಾರು ಬಾರದಂತೆ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಬಿ ಮಹೇಶ್ ಮನವಿ ಮಾಡಿಕೊಂಡಿದ್ದಾರೆ.

ರಾಜ್ಯದಲ್ಲಿ 2ನೇ ಹಂತದ ಲೋಕಸಭಾ ಕ್ಷೇತ್ರಗಳ ಮತದಾನಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಕೊನೆ ಹಂತದ ತಯಾರಿ ನಡೆಯುತ್ತಿದೆ. ಮತಗಟ್ಟೆಗಳತ್ತ ಇವಿಎಂ, ವಿವಿ ಪ್ಯಾಟ್ ಜೊತೆಗೆ ಸಿಬ್ಬಂದಿ ಶಿಫ್ಟ್ ಮಾಡಿದ್ದಾರೆ.

ಚುನಾವಣೆ ಪ್ರಕ್ರಿಯೆ ಅಧ್ಯಯನಕ್ಕೆ 28 ದೇಶಗಳಿಂದ ಪ್ರತಿನಿಧಿ ಬಂದಿದ್ದಾರೆ. ಕಾಂಬೋಡಿಯ, ಮಾಲ್ಡೊವಾ, ನೇಪಾಳ, ಸಿಷೆಲ್, ತುನಿಷಿಯಾದಿಂದ ಬೆಳಗಾವಿಗೆ ಐದು ದೇಶಗಳ 10 ಪ್ರತಿನಿಧಿಗಳ ತಂಡ ಆಗಮಿಸಿದ್ದಾರೆ. ಚುನಾವಣೆ ಸಿದ್ದತೆ, ವಿವಿ ಹಂತದ ಪ್ರಕ್ರಿಯೆ ವಿಕ್ಷಣೆ ಮತ್ತು ಅಧ್ಯಯನಕ್ಕೆ ಆಗಮಿಸಿದ್ದಾರೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಮಾಹಿತಿ ನೀಡಿದ್ದಾರೆ.

# ಸಖಿ ಮತಗಟ್ಟೆ ವೀಕ್ಷಿಸಿದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ್ ಶಿಂಧೆ




ಬೆಳಗಾವಿ: ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ 8 ವಿಧಾನ ಸಭಾ ಮತ ಕ್ಷೇತ್ರಗಳ1896 ಮತಗಟ್ಟೆಗಳ ಪೈಕಿ 64 ಮತಗಟ್ಟೆಗಳು ಈ ಬಾರಿ ನಾನಾ ರೀತಿಯಲ್ಲಿ ಕಂಗೊಳಿಸಲಿವೆ. ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ 40 ಸಖಿ, 8 ವಿಶೇಷಚೇತನರ ಮತಗಟ್ಟೆ, 8 ಯುವ ಮತಗಟ್ಟೆ ಮತ್ತು 8 ಮಾದರಿ ಮತಗಟ್ಟೆಗಳನ್ನು ರೂಪಿಸಲಾಗಿದೆ.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ಸೋಮವಾರ (ಮೇ.6) ರಂದು ಅಥಣಿ ವಿಧಾನ ಸಭಾ ಮತಕ್ಷೇತ್ರದ ಸಂಕೊನಟ್ಟಿಯಲ್ಲಿ ಸ್ಥಾಪಿಸಲಾಗಿರುವ ಸಖಿ ಮತಗಟ್ಟೆಗೆ ಭೇಟಿ ನೀಡಿ ಪರಿಶೀಲಿಸಿದರು.

# ಕರ್ನಾಟಕ ಆಚರಿಸುವ ವಿಶಿಷ್ಟ ಆಹಾರ ಉತ್ಸವ

ಬೆಂಗಳೂರು: ತನ್ನ 100 ವರ್ಷಗಳ ಸಂಭ್ರಮಾಚರಣೆಯೊಂದಿಗೆ ಮುಂದುವರಿಯುತ್ತಾ, ಎಂಟಿಆರ್ ತನ್ನ ಜನಪ್ರಿಯ ಆಹಾರ ಉತ್ಸವದ 3 ನೇ ಆವೃತ್ತಿಯಾದ ಎಂಟಿಆರ್ ಕರುನಾಡು ಸ್ವಾದದೊಂದಿಗೆ ಮರಳಿದೆ. ಗ್ರಾಹಕರ ಹೃದಯವನ್ನು ಸಂತೋಷಪಡಿಸುವ ಮತ್ತು ಕರ್ನಾಟಕದ ವಿವಿಧ ಭಾಗಗಳ ಮರೆತು ಹೋಗಿರುವ ಆಹಾರವನ್ನು, ನೂತನ ಪಾಕವಿಧಾನಗಳನ್ನು ಅನುಭವಿಸುವ ಉದ್ದೇಶದಿಂದ ಬೆಂಗಳೂರಿನ ಜಯಮಹಲ್ ಪ್ಯಾಲೇಸ್ ಕನ್ವೆನ್ಷನ್ ಸೆಂಟರ್‌ನಲ್ಲಿ ಮೇ 4 ಮತ್ತು 5 ರಂದು ಈ ಆಹಾರೋತ್ಸವವನ್ನು ಆಯೋಜಿಸಲಾಗಿತಢದಿ. ಉತ್ಸವವನ್ನು ಭಾರತದ ಮಾಜಿ ಸಾಲಿಸಿಟರ್ ಜನರಲ್ ಗೌರವಾನ್ವಿತ ನ್ಯಾಯಮೂರ್ತಿ ಎನ್. ಸಂತೋಷ್ ಹೆಗ್ಡೆ ಉದ್ಘಾಟಿಸಿದರು.

ಎಂಟಿಆರ್‌ನ ಪಾಕಶಾಲೆಯ ಅಜಟಣಡಿಜ ಠಜಿ ಇಥಛಿಜಟ-ಟಜಟಿಛಿಜ ನೇತೃತ್ವದಲ್ಲಿ, 50 ಕ್ಕೂ ಹೆಚ್ಚು




ಗೃಹ ಬಾಣಸಿಗರು ಉತ್ತರಕರ್ನಾಟಕ, ಕಲ್ಯಾಣ ಕರ್ನಾಟಕ, ಕೊಡಗು, ದಕ್ಷಿಣ ಕನ್ನಡ, ಉಡುಪಿ ಮತ್ತು ಹಳೇ ಮೈಸೂರು ಸೇರಿದಂತೆ ಕರ್ನಾಟಕದ ಆರು ಪ್ರಾಂತ್ಯಗಳ 100 ಕ್ಕೂ ಹೆಚ್ಚು ಖಾದ್ಯಗಳನ್ನು ಪ್ರದರ್ಶಿಸುತ್ತಿದ್ದಾರೆ, ಇದರಲ್ಲಿ ಪಾಲ್ಗೊಳ್ಳುವವರನ್ನು ರಾಜ್ಯದ ಪಾಕಶಾಲೆ ಸಂವೇದನಾ ಯಾತ್ರೆಗೆ ಕರೆದೊಯ್ಯುತ್ತಿದ್ದಾರೆ. ಎಂಟಿಆರ್ ಕರುನಾಡು ಸ್ವಾದ ಎಂಬುದು ಕರ್ನಾಟಕದಾದ್ಯಂತ ಇರುವ ಅಡುಗೆ ಮನೆಗಳ ಒಂದು ನಿಲುಗಡೆಯ ಆಚರಣೆಯಾಗಿದ್ದು, ಸ್ಥಳೀಯ ಮೂಲದ ಪದಾರ್ಥಗಳು, ವಿಶಿಷ್ಟವಾದ ಮಸಾಲೆ ಮಿಶ್ರಣಗಳು ಮತ್ತು ಪೀಳಿಗೆಯಿಂದ ರವಾನಿಸಲಾದ ಪಾಕವಿಧಾನಗಳನ್ನು ಬಳಸುತ್ತದೆ.

ಈ ಸಂದರ್ಭದಲ್ಲಿ, ಉತ್ಸವದಲ್ಲಿ ಪ್ರದರ್ಶಿಸಲಾದ ಭಕ್ಷ್ಯಗಳಿಂದ ಪ್ರೇರಿತವಾದ ವಿಶೇಷ ಪಾಕವಿಧಾನ ಪುಸ್ತಕವನ್ನು ಬಿಡುಗಡೆ ಮಾಡುವ ಮೂಲಕ ಬ್ರ್ಯಾಂಡ್ ಆಹಾರೋತ್ಸವದ ಆಚೆಗೆ ಈ ವಿಶಿಷ್ಟ ಅನುಭವವನ್ನು ವಿಸ್ತರಿಸುತ್ತಿದೆ. ಪುಸ್ತಕವು ಕರ್ನಾಟಕದಿಂದ ಮರೆತುಹೋದ 100 ಕ್ಕೂ ಹೆಚ್ಚು ಪಾಕವಿಧಾನಗಳ ಸಂಗ್ರಹಣೆಯನ್ನು ಹೊಂದಿದೆ, ಜನರು ಈ ಮರೆತುಹೋದ ಭಕ್ಷ್ಯಗಳನ್ನು ಮನೆಯಲ್ಲಿಯೇ ಮರುಸೃಷ್ಟಿಸಲು ಅನುವು ಮಾಡಿಕೊಡುತ್ತದೆ.

ಈ ಸಂದರ್ಭದಲ್ಲಿ ಎಂಟಿಆರ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಸುನಯ್ ಭಾಸಿನ್ ಮಾತನಾಡಿ "ಎಂಟಿಆರ್ ಕರುನಾಡು ಸ್ವಾದವು" ಕರ್ನಾಟಕದ ಆಹಾರ ಮತ್ತು ಸಂಸ್ಕೃತಿಯ ಮೇಲಿರುವ ಪ್ರೀತಿಯಿಂದ ಸೃಷ್ಟಿಯಾಗಿದೆ. ಇದು ಕರ್ನಾಟಕದ ವೈವಿಧ್ಯಮಯ ರುಚಿಗಳ ಆಚರಣೆಯಾಗಿದೆ ಮತ್ತು ರಾಜ್ಯದ ಶ್ರೀಮಂತ ಪಾಕಶಾಲೆಯ ಪರಂಪರೆಯನ್ನು ಎತ್ತಿಹಿಡಿಯುವ ಬದ್ಧತೆಯಾಗಿದೆ.

ವಿಕಸನಗೊಳ್ಳುತ್ತಿರುವ ಗ್ರಾಹಕರ ಅಗತ್ಯತೆಗಳು ಮತ್ತು ವೇಗದ ಜೀವನಶೈಲಿಯೊಂದಿಗೆ, ಒಮ್ಮೆ ನಮ್ಮ ಸಂಸ್ಕೃತಿಯನ್ನು ವ್ಯಾಖ್ಯಾನಿಸಿದ ಸಾಂಪ್ರದಾಯಿಕ ಪಾಕವಿಧಾನಗಳು ಮತ್ತು ಸುವಾಸನೆಗಳೊಂದಿಗೆ ನಾವು ಅಜಾಗರೂಕತೆಯಿಂದ ಸಂಪರ್ಕವನ್ನು ಕಳೆದುಕೊಂಡಿದ್ದೇವೆ. ಈ ಆಹಾರೋತ್ಸವವು ನಮ್ಮ ಬೇರುಗಳಿಗೆ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ, ಈ ಅಮೂಲ್ಯವಾದ ಭಕ್ಷ್ಯಗಳ ಮೂಲಕ ಕರುನಾಡು ಪರಂಪರೆಯನ್ನು ಸಂರಕ್ಷಿಸುವ ಹೃತ್ಪೂರ್ವಕ ಪ್ರಯತ್ನ ಇದಾಗಿದೆ ಎಂದರು..

ಈ ಅನುಭವದ ಜೊತೆಗೆ, ಈ ಕಾರ್ಯಕ್ರಮವು ಯಕ್ಷಗಾನ ಮತ್ತು ಡೊಳ್ಳು ಕುಣಿತದಂತಹ ಕರ್ನಾಟಕದ ನೃತ್ಯ ಪ್ರಕಾರಗಳನ್ನು ಒಳಗೊಂಡಿದೆ, ಇದು ಸಂಪೂರ್ಣ ಸಾಂಸ್ಕೃತಿಕ ಮತ್ತು ಕರ್ನಾಟಕದ ರೋಮಾಂಚಕ ಕಲಾ ಸಂಪ್ರದಾಯಗಳನ್ನು ಎತ್ತಿ ತೋರಿಸುತ್ತದೆ.

BookMyShow.com ನಲ್ಲಿ ಪ್ರತ್ಯೇಕವಾಗಿ ಲಭ್ಯವಿರುವ ನಿಮ್ಮ ಟಿಕೆಟ್‌ಗಳನ್ನು ಕಾಯ್ದಿರಿಸುವ ಮೂಲಕ ಈ ಪಾಕಶಾಲೆಯ ಸಂಬಂಧವನ್ನು ವೀಕ್ಷಿಸಿ.

# ವಿಶ್ವಗುರು ಬಸವಣ್ಣ ಸಂದೇಶ ಪ್ರಸ್ತುತ ಅಗತ್ಯವೆನಿಸಿದೆ: ಡಾ.ಪ್ರಭಾಕರ ಕೋರೆ

## ಬಸವ ಜಯಂತಿ ನಿಮಿತ್ತ ಬೃಹತ್ ಬೈಕ್ ರ್ಯಾಲಿ

ಬೆಳಗಾವಿ: 'ವಿಶ್ವಗುರು ಬಸವಣ್ಣನವರು ಮಾನವೀಯತೆಯನ್ನು ಸಾರಿ ಸಮಾನತೆಯ ಹರಿಕಾರರು. ಅವರ ಸಂದೇಶ ಇಂದಿಗೂ ಲೋಕಮಾನ್ಯವೆನಿಸಿದೆ. ಪ್ರಸ್ತುತ ಯುದ್ಧ ಹಾಗೂ ಜಾತಿಗಳ ಸಂಘರ್ಷದಲ್ಲಿ ಬದುಕುತ್ತಿರುವ ನಮಗೆ ಬಸವಣ್ಣನವರ ವಿಚಾರಗಳನ್ನು ಅಳವಡಿಸಿಕೊಳ್ಳುವುದು ಅಗತ್ಯವೆನಿಸಿದೆ' ಎಂದು ಕೆಎಲ್ಇ ಕಾರ್ಯಾಧ್ಯಕ್ಷರು ಹಾಗೂ ಅಖಿಲ ಭಾರತ ವೀರಶೈವ ಮಹಾಸಭೆಯ ರಾಷ್ಟ್ರೀಯ ಉಪಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಹೇಳಿದರು.

ಅವರು ಬೆಳಗಾವಿ ಶಿವಬಸವ ನಗರದ ಲಿಂಗಾಯತ ಭವನದಲ್ಲಿ ಬಸವ ಜಯಂತಿ ನಿಮಿತ್ತ ಆಯೋಜಿಸಿದ್ದ ಬೆಳಗಾವಿ ಅಖಿಲ ಭಾರತ ವೀರಶೈವ ಅಂಗಾಯತ ಮಹಾಸಭೆ ಜಿಲ್ಲಾ ಘಟಕ, ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ಉತ್ಸವ ಕೇಂದ್ರ ಸಮಿತಿ ಹಾಗೂ ವಿವಿಧ ಲಿಂಗಾಯತ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಬೃಹತ್ ಬೈಕ್



ರ್ಯಾಲಿಗೆ ರವಿವಾರ 05-05-2024 ರಂದು ಸಾಯಂಕಾಲ ಚಾಲನೆ ನೀಡಿ ಮಾತನಾಡಿದರು.

'ಇಂದು ನಾವೆಲ್ಲ ಒಳಪಂಗಡಗಳನ್ನು ಮಾಡಿಕೊಂಡು ಹೋರಾಡುತ್ತಿದ್ದೇವೆ ಅದನ್ನು ಬದಿಗೆ ಇಟ್ಟು ಸಾಂಘಿಕವಾಗಿ ಸಮಾಜವನ್ನು ಕಟ್ಟಬೇಕಾಗಿದೆ. ಅಣ್ಣನವರು ಹನ್ನೆರಡನೆಯ ಶತಮಾನದಲ್ಲಿಯೇ ಸಮಾಜದ ಪ್ರಗತಿಗಾಗಿ ಹೋರಾಡಿದರು. ಎಂಟುನೂರು ವರ್ಷಗಳಾದರೂ ಅವರ ವಿಚಾರಗಳು ಲೋಕ ಪೂಜ್ಯವೆನಿಸಿವೆಕೊಂಡಿವೆ. ಇಂದು ದೇಶ ವಿದೇಶದಲ್ಲಿ ಬಸವಣ್ಣನವರ ವಚನಗಳು ಕುರಿತು ಅಧ್ಯಯನಗಳು ನಡೆಯುತ್ತಿವೆ. ಅವರು ಕನ್ನಡ ನಾಡಿನಲ್ಲಿ ಅವತರಿಸಿರುವುದು ನಮ್ಮ ಸೌಭಾಗ್ಯ ನಾಡಿನುದ್ದಗಲಕ್ಕೂ ನಮ್ಮ ಯುವಜನರು ಅವರ ಸಂದೇಶಗಳನ್ನು ಅರಿಯುವಂತಾಗಬೇಕು. ಬಸವ ಜಯಂತಿಯನ್ನು ಅರ್ಥಪೂರ್ಣಗೊಳಿಸಬೇಕು. ಈ ನಿಮಿತ್ತ ಆಯೋಜಿಸಿರುವ ಬೈಕ್ ರ್ಯಾಲಿ ಬಸವ ಜಾಗೃತಿಯನ್ನುಂಟುಮಾಡಲೆಂದು' ಡಾ.ಕೋರೆಯವರು ಹಾರೈಸಿದರು.

ಸಾನ್ನಿಧ್ಯ ವಹಿಸಿದ್ದ ಕಾರಂಜಿಮಠದ ಪರಮಪೂಜ್ಯ ಶ್ರೀ ಗುರುಸಿದ್ಧ ಮಹಾಸ್ವಾಮೀಜಿಯವರು ಆಶೀರ್ವಚನ ನೀಡುತ್ತ, 'ಬಸವಣ್ಣನವರ ಮಾನವೀಯತೆ ವಿಚಾರಗಳನ್ನು ಅಳವಡಿಸಿಕೊಳ್ಳುವ ಕೆಲಸ ಮೊದಲು ನಡೆಯಬೇಕಾಗಿದೆ. ನೈತಿಕ ಬದುಕು ನಮ್ಮದಾದರೆ ಸಮಾಜ ಸುಧಾರಣೆ ಸಾಧ್ಯ. ನಡೆನುಡಿ ಒಂದಾಗಿ ಜೀವನವನ್ನು ರೂಪಿಸಿಕೊಳ್ಳುವ ಮಹತ್ತರ ಕಾರ್ಯ ಎಲ್ಲರಿಂದ ನಡೆಯಬೇಕಾಗಿದೆ' ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಹಾಸಭೆ ಜಿಲ್ಲಾ ಘಟಕದ ಅಧ್ಯಕ್ಷೆ ರತ್ನಪ್ರಭಾ ಬೆಲ್ಲದ, ಹಿರಿಯ ನ್ಯಾಯವಾದಿ ಎಂ.ಬಿ.ಜೀರಲಿ, ಡಾ.ಎಚ್.ಬಿ.ರಾಜಶೇಖರ, ಸಾಯಿ ಹಾಸ್ಪಿಟಲ್ ಡಾ.ಎಸ್.ಎಮ್.ದೊಡ್ಡಮನಿ, ಉದ್ದಿಮೆ ರಾಜು ಹತ್ತರಕಿ, ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ಉತ್ಸವ ಕೇಂದ್ರ ಸಮಿತಿ ಅಧ್ಯಕ್ಷ ಗುರುದೇವ ನಿಂ. ಪಾಟೀಲ. ಉಪಾಧ್ಯಕ್ಷರಾದ ಸುಜೀತ ಮುಳಗುಂದ, ಪ್ರಸಾದ ಹಿರೇಮಠ, ರಾಜು ಟೋಪಣ್ಣನವರ, ಬಾಲಚಂದ್ರ ಬಾಗಿ, ವೀಣಾ ನಾಗಮೋತಿ, ರಕ್ಷಾ ದೇಗಿನಾಳ, ವೀರೇಶ ಅಪ್ಪಯ್ಯನವರಮಠ ಮೊದಲಾದವರು ಉಪಸ್ಥಿತರಿದ್ದರು.

ನೂರಾರು ಸಂಖ್ಯೆಯಲ್ಲಿ ಭಕ್ತರು ಬಸವಣ್ಣನವರ ಪ್ರತಿಮೆ ಹಾಗೂ ಬಾವುಟವನ್ನು ಹಿಡಿದುಕೊಂಡು ಬೈಕ್ ರ್ಯಾಲಿಯನ್ನು ಯಶಸ್ವುಗೊಳಿಸಿದರು. ರ್ಯಾಲಿಯು ಲಿಂಗಾಯತ ಭವನ, ಶಿವಬಸವನಗರ ಮಾರ್ಗದಿಂದ ಪ್ರಾರಂಭವಾಗಿ ನಾಗನೂರ ಮಠ, ರಾಮದೇವ ಹೊಟೇಲ್, ಚನ್ನಮ್ಮ ವೃತ್ತ, ಗಣಪತಿ ಗಲ್ಲಿ, ಮಾರುತಿ ಗಲ್ಲಿ, ಬೋಗಾರ್ವೆಸ್, ಚಳಕಚೌಕ, ಕಪಿಲೇಶ್ವರ ಮೇಲ್ಸೇತುವೆ, ಶಿವಾಜಿ ಉದ್ಯಾನ, ಶಹಾಪೂರ ಮೂಲಕ ಬಸವೇಶ್ವರ ಸರ್ಕಲ್ (ಖಾಸಬಾಗ) ನಾಥಪೈ ಸರ್ಕಲ್, ಕೆಎಲ್ಇ ಬಿ.ಎಂ.ಕಂಕಣವಾಡಿ ಆಯುರ್ವೇದಿಕ ಕಾಲೇಜ ಮಾರ್ಗವಾಗಿ ಬಸವವೃತ್ತ(ಗೋವಾ ವೇಸ್)ವರೆಗೆ ಜರುಗಿತು.

# ಲೋಕಸಭಾ ಚುನಾವಣೆಯ ದಿನದಂದು ವೇತನ ಸಹಿತ ರಜೆ ಘೋಷಣೆ

ಬೆಳಗಾವಿ: ಭಾರತ ಚುನಾವಣಾ ಅಯೋಗವು ಮೇ 07 (ಮಂಗಳವಾರ) ರಂದು ಲೋಕಸಭಾ ಸಭೆ ಸಾರ್ವತ್ರಿಕ ಚುನಾವಣೆಯ ಪ್ರಕ್ರಿಯೆಯಲ್ಲಿ ಮತದಾನಕ್ಕೆ ನಿಗಧಿಪಡಿಸಿದೆ.

ಸದರಿ ದಿನದಂದು ರಾಜ್ಯಾದ್ಯಂತ ಎಲ್ಲಾ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1951 ರ ಪ್ರಜಾ ಪ್ರತಿನಿಧಿ ಕಾಯ್ದೆ, ಸೆಕ್ಷೆನ್ 135 (ಬಿ) ರಡಿ ಹಾಗೂ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜೆಗಳು) ಕಾಯ್ದೆ-1963 ಕಲಂ 3 (ಎ) ರನ್ವಯ ಅರ್ಹ ಮತದಾರರಿಗೆ ವೇತನ ಸಹಿತರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಮಾಲೀಕರು/ನಿಯೋಜಕರು ಅನುವು ಮಾಡಿಕೊಡಬೇಕಾಗಿರುತ್ತದೆ.

ಚುನಾವಣಾ ನಡೆಯುವ ಕ್ಷೇತ್ರಗಳ ವ್ಯಾಪ್ತಿಯ ಎಲ್ಲಾ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳ ಮಾಲೀಕರು ಸದರಿ ದಿನದಂದು ಕಾಯ್ದೆಯನ್ವಯ ಅರ್ಹ ಕಾರ್ಮಿಕರು ಮತದಾನ ಮಾಡಲು ಅನುಕೂಲವಾಗುವಂತೆ ವೇತನ ಸಹಿತ ರಜೆ ನೀಡುವಂತೆ ಈ ಮೂಲಕ ತಿಳಿಸಿದೆ.

ತಪ್ಪಿದಲ್ಲಿ ಸಂಬಂಧಪಟ್ಟ ಸಂಸ್ಥೆ/ನಿಯೋಜಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದೆಂದು ಬೆಳಗಾವಿ ಉಪವಿಭಾಗ-2, ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089